

ರಶ್ಮಿಕಾ ಮಂದಣ್ಣ ಮತ್ತು ವಿಜಯ್ ದೇವರಕೊಂಡ ವಿವಾಹವಾಗಿ ಒಂದು ತಿಂಗಳಾಗಿದ್ದು, ಈ ನಡುವೆ ರಶ್ಮಿಕಾ ಅವರು ಸೋಶಿಯಲ್ ಮೀಡಿಯಾದಲ್ಲಿ ಹೊಸ ಪೋಸ್ಟ್ ಹಂಚಿಕೊಂಡು ಅಭಿಮಾನಿಗಳ ಹೃದಯ ಗೆದ್ದಿದ್ದಾರೆ. ಇನ್‌ಸ್ಟಾಗ್ರಾಂನಲ್ಲಿ ಪೋಸ್ಟ್ ಕಾರ್ಟೂನ್ ರೀಲ್ಸ್ ಪೋಸ್ಟ್ ಮಾಡಿರುವ ರಶ್ಮಿಕಾ ಅವರು, ನಾವೀಗ ಮೂವರು ಎಂದು ಹೇಳಿದ್ದು, ಈ ಪೋಸ್ಟ್ ಹಲವರ ಹುಬ್ಬೇರುವಂತೆ ಮಾಡಿದೆ.

BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ‘ಭಾರತಕ್ಕೆ ನಾವು ತೈಲ ನೀಡುತ್ತೇವೆ’

ನವದೆಹಲಿ: ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಉದ್ವಿಗ್ನತೆಗಳು ಜಾಗತಿಕ ಇಂಧನ ಬೆಲೆಗಳಲ್ಲಿ ಅನಿಶ್ಚಿತತೆ ಮತ್ತು ಏರಿಳಿತಗಳಿಗೆ ಕಾರಣವಾಗುತ್ತಿವೆ. ಈ ಪರಿಸ್ಥಿತಿಯಲ್ಲಿ, ರಷ್ಯಾ ಭಾರತಕ್ಕೆ ಹೆಚ್ಚಿನ ಕಚ್ಚಾ ತೈಲ ಮತ್ತು ನೈಸರ್ಗಿಕ ಅನಿಲವನ್ನು ಪೂರೈಸಲು ಮುಂದಾಗಿದೆ. ಇದೇ ಸಮಯದಲ್ಲಿ, ಎರಡೂ ದೇಶಗಳು ತಮ್ಮ ಒಟ್ಟಾರೆ ಸಂಬಂಧವನ್ನು ಬಲಪಡಿಸಲು ಒಪ್ಪಿಕೊಂಡಿವೆ.





ರಷ್ಯಾದ ಮೊದಲ ಉಪ ಪ್ರಧಾನಿ ಡೆನಿಸ್ ಮಾಂಟುರೊವ್ ಅವರು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರೊಂದಿಗೆ ನಡೆಸಿದ ಸಭೆಗಳಲ್ಲಿ ಇಂಧನ ಸಹಕಾರವು ಪ್ರಮುಖ ವಿಚಾರವಾಗಿದೆ ಎಂದು ಮೂಲಗಳು ತಿಳಿಸಿವೆ.

ಮಂಟುರೋವ್ ಅವರು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರೊಂದಿಗೆ ಮಾತುಕತೆ ನಡೆಸಿದರು ಮತ್ತು ನಿನ್ನೆ ಸಂಜೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದರು.

ನವದೆಹಲಿಯಲ್ಲಿ ನಡೆದ ಸಭೆ ಕುರಿತು ರಷ್ಯಾದ ಅಧಿಕೃತ ಹೇಳಿಕೆಯು, ರಷ್ಯಾ ಮತ್ತು ಭಾರತದ ನಡುವಿನ ತೈಲ ಮತ್ತು ಅನಿಲ ವಲಯದಲ್ಲಿ ದ್ವಿಪಕ್ಷೀಯ ಸಹಕಾರಕ್ಕೆ ವಿಶೇಷ ಗಮನ ನೀಡಲಾಗಿದೆ ಎಂದು ಹೇಳಿದೆ.

‘ಭಾರತೀಯ ಮಾರುಕಟ್ಟೆಗೆ ತೈಲ ಮತ್ತು ದ್ರವೀಕೃತ ನೈಸರ್ಗಿಕ ಅನಿಲದ ಸರಬರಾಜನ್ನು ಸ್ಥಿರವಾಗಿ ಹೆಚ್ಚಿಸುವ ಸಾಮರ್ಥ್ಯವನ್ನು ರಷ್ಯಾದ ಕಂಪನಿಗಳು ಹೊಂದಿವೆ ಎಂದು ಡೆನಿಸ್ ಮಾಂಟುರೊವ್ ದೃಢಪಡಿಸಿದ್ದಾರೆ’ ಎಂದು ಅದು ಹೇಳಿದೆ.

ಹಾರ್ಮುಜ್ ಜಲಸಂಧಿಯ ಮೂಲಕ ಕಚ್ಚಾ ತೈಲ ಮತ್ತು ಅನಿಲ ಸರಬರಾಜಿನಲ್ಲಿನ ಅಡಚಣೆಗಳಿಂದಾಗಿ ಪಶ್ಚಿಮ ಏಷ್ಯಾ ಬಿಕ್ಕಟ್ಟು ಜಾಗತಿಕ ಇಂಧನ ಮಾರುಕಟ್ಟೆಯ ಮೇಲೆ ವ್ಯಾಪಕ ಪರಿಣಾಮ ಬೀರುತ್ತಿರುವ ಹೊತ್ತಿನಲ್ಲಿ ರಷ್ಯಾ ಈ ಹೇಳಿಕೆ ನೀಡಿದೆ.

ಇಸ್ರೇಲ್ ಮತ್ತು ಅಮೆರಿಕ ಜಂಟಿಯಾಗಿ ಇರಾನ್ ಮೇಲೆ ದಾಳಿ ನಡೆಸಿದ ನಂತರ ಪಶ್ಚಿಮ ಏಷ್ಯಾದಲ್ಲಿ ಯುದ್ಧ ಆರಂಭವಾಗಿದ್ದು, ಪರ್ಷಿಯನ್ ಕೊಲ್ಲಿ ಮತ್ತು ಓಮನ್ ಕೊಲ್ಲಿ ನಡುವಿನ ಕಿರಿದಾದ ಹಡಗು ಮಾರ್ಗವಾದ ಹಾರ್ಮುಜ್ ಜಲಸಂಧಿಯನ್ನು ಇರಾನ್ ನಿರ್ಬಂಧಿಸಿದೆ.

ಇದು ಜಾಗತಿಕ ತೈಲ ಮತ್ತು ಎಲ್‌ಎನ್‌ಜಿ (ದ್ರವೀಕೃತ ನೈಸರ್ಗಿಕ ಅನಿಲ) ದ ಸರಿಸುಮಾರು ಶೇ 20 ರಷ್ಟು ಅವಶ್ಯಕತೆಯನ್ನು ನಿರ್ವಹಿಸುತ್ತದೆ. ಹೀಗಾಗಿ, ಜಾಗತಿಕ ತೈಲ ಮತ್ತು ಅನಿಲ ಬೆಲೆಗಳು ಗಗನಕ್ಕೇರಿವೆ.

ಭಾರತ–ರಷ್ಯಾ ಅಂತರ–ಸರ್ಕಾರಿ ವ್ಯಾಪಾರ, ಆರ್ಥಿಕ, ವೈಜ್ಞಾನಿಕ, ತಾಂತ್ರಿಕ ಮತ್ತು ಸಾಂಸ್ಕೃತಿಕ ಸಹಕಾರ ಸಹಯೋಗದಲ್ಲಿ ದ್ವಿಪಕ್ಷೀಯ ಸಂಬಂಧಗಳಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ವ್ಯಾಪಕವಾಗಿ ಚರ್ಚಿಸಲಾಯಿತು. ಮಾಂಟುರೋವ್ ಮತ್ತು ಜೈಶಂಕರ್ ಸಭೆಯ ಸಹ ಅಧ್ಯಕ್ಷತೆ ವಹಿಸಿದ್ದರು.



ವಿಶ್ವವಿಖ್ಯಾತ ಹಂಪಿಯ ವಿರೂಪಾಕ್ಷ ದೇವರ 2026ರ ರಥೋತ್ಸವವು ಅದ್ದೂರಿಯಾಗಿ ನಡೆಯಿತು. ಲಕ್ಷಾಂತರ ಭಕ್ತರು ದೇವರ ದರ್ಶನ ಪಡೆದರು.

## ಹಿಂದಿ ಪರೀಕ್ಷೆ ವಿವಾದ: ರಾಜ್ಯಪಾಲರ ಮಧ್ಯ ಪ್ರವೇಶ

ಬೆಂಗಳೂರು: ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೂರನೇ ಭಾಷೆ ಹಿಂದಿಗೆ ಅಂಕ ನೀಡದೆ ಕೇವಲ ಗ್ರೇಡ್ ನೀಡುವ ನಿರ್ಧಾರದ ಬಗ್ಗೆ ಇರುವ ಕಳವಳಗಳನ್ನು ಸಮಗ್ರವಾಗಿ ಪರಿಶೀಲಿಸುವಂತೆ ರಾಜ್ಯಪಾಲರು ಕೋರಿದ್ದಾರೆ. ರಾಜ್ಯ ಸರ್ಕಾರದ ನಿರ್ಧಾರ ವಿಚಾರ ಸಂಬಂಧ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿಗೆ ರಾಜ್ಯಪಾಲರು ಪತ್ರ ಬರೆದಿದ್ದಾರೆ.

ಈ ಕುರಿತು ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್. ಪ್ರಭುಶಂಕರ್ ಪತ್ರ ಬರೆದಿದ್ದು, ಸರ್ಕಾರದ ನಿರ್ಧಾರವನ್ನು ಮರು ಪರಿಶೀಲನೆ ಮಾಡುವಂತೆ ತಿಳಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೃತೀಯ ಭಾಷೆಗೆ ಅಂಕಗಳನ್ನು ನೀಡದೆ ಕೇವಲ ಗ್ರೇಡ್ ನೀಡುವ ನಿರ್ಧಾರವನ್ನು ಮರು ಪರಿಶೀಲಿಸಿ. ಭಾಷಾವೈವಿಧ್ಯತೆ, ಜಾಗೃತಿ, ಬೌದ್ಧಿಕ ಬೆಳವಣಿಗೆಯನ್ನು ಬೆಳೆಸುವಲ್ಲಿ ತೃತೀಯ ಭಾಷೆಯು ಪ್ರಮುಖ ಪಾತ್ರ ವಹಿಸುತ್ತದೆ. ಹೀಗಾಗಿ ಗ್ರೇಡ್ ನೀಡಿದರೆ ಶೈಕ್ಷಣಿಕ ಪ್ರಾಮುಖ್ಯತೆ ಕಡಿಮೆ ಮಾಡಬಹುದು ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಅಲ್ಲದೆ ಸರ್ಕಾರದ ಈ ನಿರ್ಧಾರ ವಿದ್ಯಾರ್ಥಿಗಳು ಕಲಿಯುವ ಆಸಕ್ತಿಯ ಮೇಲೆ ಪರಿಣಾಮ ಬೀರಬಹುದು. ಶಿಕ್ಷಣದ ಮೇಲೆ ಬೀರುವ ಪರಿಣಾಮ ಬಗ್ಗೆ ಪೋಷಕರಿಗೂ ಆತಂಕ ಇದ್ದು, ರಾಜ್ಯಪಾಲರು ಈ ವಿಷಯವನ್ನು ಗಮನಿಸಿದ್ದಾರೆ.

ಹೀಗಾಗಿ ಶೈಕ್ಷಣಿಕ, ಆಡಳಿತಾತ್ಮಕ ಅಂಶ ಗಮನದಲ್ಲಿಟ್ಟುಕೊಂಡು ಈ ಬಗ್ಗೆ ಸಂಬಂಧಿತ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಶೈಕ್ಷಣಿಕ ಉದ್ದೇಶಗಳಿಗೆ ಅನುಗುಣವಾಗಿ ಸೂಕ್ತ ಕ್ರಮ ಕೈಗೊಳ್ಳಿ ಎಂದು ಸಿಎಸ್‌ಗೆ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪ್ರಭುಶಂಕರ್ ಬರೆದಿರುವ ಪತ್ರದಲ್ಲಿ ತಿಳಿಸಲಾಗಿದೆ. ಕರ್ನಾಟಕ ಹೈಕೋರ್ಟ್‌ನಲ್ಲಿ ಈ ಸಂಬಂಧ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆಯಾಗಿರುವ ನಡುವೆ ರಾಜ್ಯಪಾಲರ ಈ ಪತ್ರ ಹೆಚ್ಚು ಮಹತ್ವ ಪಡೆದಿದೆ.

ಸಮಸ್ಯೆಗಳನ್ನು ರಾಜ್ಯಪಾಲರು ಗಮನಿಸಿದ್ದಾರೆ ಮತ್ತು ಶಿಕ್ಷಣ ಕ್ಷೇತ್ರದಾದ್ಯಂತ ಅದರ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಈ ವಿಷಯವನ್ನು ಸಮಗ್ರವಾಗಿ ಪರಿಶೀಲಿಸಬೇಕೆಂದು ಬಯಸುತ್ತಾರೆ” ಎಂದು ಪತ್ರದಲ್ಲಿ ತಿಳಿಸಲಾಗಿದೆ.

ಶಾಲಾ ಶಿಕ್ಷಣ ಇಲಾಖೆ ಮತ್ತು ಇತರ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಈ ವಿಷಯವನ್ನು ಪರಿಶೀಲಿಸಲು ಮತ್ತು “ವಿದ್ಯಾರ್ಥಿಗಳ ಹಿತಾಸಕ್ತಿ ಮತ್ತು ರಾಜ್ಯದ ಶೈಕ್ಷಣಿಕ ಉದ್ದೇಶಗಳಲ್ಲಿ ಸೂಕ್ತವೆಂದು ಪರಿಗಣಿಸಲಾದ ಕ್ರಮವನ್ನು ತೆಗೆದುಕೊಳ್ಳಲು ಮುಖ್ಯ ಕಾರ್ಯದರ್ಶಿಗೆ ತಿಳಿಸಲಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.

## 60ರಷ್ಟು ಉಚಿತ ಸೀಟು ನಿಯಮಕ್ಕೆ ತಾತ್ಕಾಲಿಕ ಬ್ರೇಕ್

ನವದೆಹಲಿ: ವಿಮಾನಗಳಲ್ಲಿನ ಶೇ. 60 ರಷ್ಟು ಸೀಟುಗಳ ಆಯ್ಕೆಯನ್ನು ಉಚಿತಗೊಳಿಸುವ ತನ್ನ ಹಿಂದಿನ ಆದೇಶವನ್ನು ಕೇಂದ್ರ ನಾಗರಿಕ ವಿಮಾನಯಾನ ಸಚಿವಾಲಯವು ತಾತ್ಕಾಲಿಕವಾಗಿ ಅಮಾನತುಗೊಳಿಸಿದೆ.

ಸಚಿವಾಲಯವು ಮಾರ್ಚ್ 18 ರಂದು ನಿರ್ದೇಶನ ಹೊರಡಿಸಿ ಏಪ್ರಿಲ್ 20 ರಿಂದ ಈ ನಿಯಮ ಅನುಷ್ಠಾನಗೊಳಿಸುವಂತೆ ನಾಗರಿಕ ವಿಮಾನ ಯಾನ ಮಹಾನಿರ್ದೇಶನಾಲಯಕ್ಕೆ ಸೂಚಿಸಿತ್ತು. ಆದರೆ ವಿಮಾನಯಾನ ಕಂಪನಿಗಳು ಈ ನಿಯಮವನ್ನು ತೀವ್ರವಾಗಿ ವಿರೋಧಿಸಿದ್ದವು.

ಇದು ಟಿಕೆಟ್ ದರ ನಿರ್ಧಾರ ವ್ಯವಸ್ಥೆಯನ್ನು ಅಸ್ತವ್ಯಸ್ತಗೊಳಿಸುತ್ತದೆ ಮತ್ತು ವಾಣಿಜ್ಯ ಕಾರ್ಯಾಚರಣೆಗಳಿಗೆ ತೊಂದರೆ ಉಂಟುಮಾಡುತ್ತದೆ ಎಂದು ಕಂಪನಿಗಳು ವಾದಿಸಿದ್ದವು. ಈ ವಿರೋಧದ ನಡುವೆ ಸಚಿವಾಲಯವು ಸಮಗ್ರ ಪರಿಶೀಲನೆ ಅಗತ್ಯವಿದೆ ಎಂದು ಹೇಳಿ ನಿಯಮವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ. ಈ ನಿರ್ದೇಶನ ಹೊರಡಿಸಿದ ಮೂರು ವಾರಗಳೊಳಗೆಯೇ ಈ ನಿಯಮವನ್ನು ಹಿಂಪಡೆಯಲಾಗಿದೆ. ಪ್ರಸ್ತುತ ವ್ಯವಸ್ಥೆಯಲ್ಲಿ ವಿಮಾನದಲ್ಲಿ ಕೇವಲ 20% ಸೀಟುಗಳನ್ನು ಮಾತ್ರ ಉಚಿತವಾಗಿ ಆಯ್ಕೆ ಮಾಡಿಕೊಳ್ಳಬಹುದು. ಉಳಿದ ಸೀಟುಗಳಿಗೆ 200 ರೂ.ಗಳಿಂದ 2100 ರೂ.ಗಳವರೆಗೆ ಶುಲ್ಕ ವಿಧಿಸಲಾಗುತ್ತದೆ. 60% ಉಚಿತ ಸೀಟು ಆಯ್ಕೆ ನಿಯಮ ಜಾರಿಗೆ ಬಂದಿದ್ದಲ್ಲಿ ವಿಮಾನ ಕಂಪನಿಗಳ ಸೀಟು ಆಯ್ಕೆ ಶುಲ್ಕದಿಂದ ಬರುವ ಆದಾಯ ಗಣನೀಯವಾಗಿ ಕುಸಿಯುವ ಸಾಧ್ಯತೆ ಇತ್ತು.

## ದೆಹಲಿ ಸೇರಿದಂತೆ ಹಲವೆಡೆ ಭೂಕಂಪ

**ಜಮ್ಮು ಮತ್ತು ಕಾಶ್ಮೀರದ ಕೆಲವು ಭಾಗಗಳಲ್ಲಿಯೂ ಭೂಕಂಪನದ ಅನುಭವವಾಗಿದೆ ಎನ್ನಲಾಗಿದೆ. ದೆಹಲಿ ಮತ್ತು ಪಕ್ಕದ ರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿಯೂ ಜನರು ಗಾಬರಿಯಿಂದ ಮನೆಯಿಂದ ಹೊರಗೆ ಓಡಿಬರುತ್ತಿರುವ ದೃಶ್ಯ ಕಂಡುಬಂದಿತು. ಇದುವರೆಗೂ ಯಾವುದೇ ಜೀವ ಅಥವಾ ಆಸ್ತಿಪಾಸ್ತಿ ನಷ್ಟದ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ.**

ನವದೆಹಲಿ: ಸಂಜೆ ದೆಹಲಿ–ಎನ್‌ಸಿಆರ್ ಸೇರಿದಂತೆ ಉತ್ತರ ಭಾರತದ ಹಲವು ಕಡೆಗಳಲ್ಲಿ ಪ್ರಬಲ ಭೂಕಂಪನದ ಅನುಭವವಾಗಿದೆ. ಇದು ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಭೀತಿಯನ್ನು ಉಂಟುಮಾಡಿದೆ. ದೆಹಲಿ–ಎನ್‌ಸಿಆರ್, ಚಂಡೀಗಢ, ಜಮ್ಮು ಮತ್ತು ಕಾಶ್ಮೀರ ಸೇರಿದಂತೆ ಉತ್ತರ ಭಾರತದ ಹಲವಾರು ಪ್ರದೇಶಗಳಲ್ಲಿ ಭೂಕಂಪನದ ಅನುಭವವಾಗಿದೆ. ಜಮ್ಮು ಮತ್ತು ಕಾಶ್ಮೀರದ ಕೆಲವು ಭಾಗಗಳಲ್ಲಿ ಭೂಮಿ ಕಂಪಿಸಿದ್ದರಿಂದ ಜನರು ತಮ್ಮ ಮನೆಗಳು ಮತ್ತು ಕಚೇರಿಗಳಿಂದ ಹೊರಗೆ ಓಡಿಬಂದರು.



ಸಂಜೆ ದೆಹಲಿ–ಎನ್‌ಸಿಆರ್‌ನಲ್ಲಿ 5.9 ತೀವ್ರತೆಯ ಭೂಕಂಪ ಸಂಭವಿಸಿದ್ದು, ಉತ್ತರ ಭಾರತದಾದ್ಯಂತ ಕಂಪನದ ಅನುಭವವಾಗಿದೆ. ಇದರ ಕೇಂದ್ರಬಿಂದು ಅಫ್ಘಾನಿಸ್ತಾನದಲ್ಲಿದೆ ಎಂದು ವರದಿಯಾಗಿದೆ.

ಜಮ್ಮು ಮತ್ತು ಕಾಶ್ಮೀರದ ಕೆಲವು ಭಾಗಗಳಲ್ಲಿಯೂ ಭೂಕಂಪನದ ಅನುಭವವಾಗಿದೆ ಎನ್ನಲಾಗಿದೆ. ದೆಹಲಿ ಮತ್ತು ಪಕ್ಕದ ರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿಯೂ ಜನರು ಗಾಬರಿಯಿಂದ ಮನೆಯಿಂದ ಹೊರಗೆ ಓಡಿಬರುತ್ತಿರುವ ದೃಶ್ಯ ಕಂಡುಬಂದಿತು. ಇದುವರೆಗೂ ಯಾವುದೇ ಜೀವ ಅಥವಾ ಆಸ್ತಿಪಾಸ್ತಿ ನಷ್ಟದ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ.

ಅಫ್ಘಾನಿಸ್ತಾನದಲ್ಲಿ 5.9 ತೀವ್ರತೆಯ ಭೂಕಂಪದ ನಂತರ ದೆಹಲಿ–ಎನ್‌ಸಿಆರ್ ಮತ್ತು ಉತ್ತರ ಭಾರತದ ಹಲವಾರು ಭಾಗಗಳಲ್ಲಿ ಪ್ರಬಲ ಭೂಕಂಪನದ ಅನುಭವವಾಗಿದೆ. ಇಂದು ರಾತ್ರಿ 9.50ರ ಸುಮಾರಿಗೆ ಉಂಟಾದ ಭೂಕಂಪನವು ನೋಯ್ಡಾ, ಚಂಡೀಗಢ, ಪಂಜಾಬ್‌ನ ಲುಧಿಯಾನ, ಮತ್ತು ಜಮ್ಮು ಮತ್ತು ಕಾಶ್ಮೀರದ ಪೂಂಚ್, ಶ್ರೀನಗರ ಮತ್ತು ಉಧಂಪುರ ಸೇರಿದಂತೆ ಹಲವಾರು ನಗರಗಳಲ್ಲಿಯೂ ಕಂಡುಬಂದಿದೆ. ಈ ಕಂಪನವು ಕೆಲವೇ ಸೆಕೆಂಡುಗಳ ಕಾಲ ಉಂಟಾಯಿತು.

## ಟ್ರೆಕ್ಕಿಂಗ್ ಹೋಗಿದ್ದ ಮಹಿಳೆ ನಾಪತ್ತೆ

ಮಡಿಕೇರಿ: ಕೊಡಗಿನ ತಡಿಯಂಡಮೋಳ್ ಬೆಟ್ಟಕ್ಕೆ ಟ್ರೆಕ್ಕಿಂಗ್‌ಗೆ ತೆರಳಿದ್ದ ಮಹಿಳೆ ನಾಪತ್ತೆಯಾಗಿರುವ ಘಟನೆ ತಿಳಿದುಬಂದಿದೆ.

ಶರಣ್ಯ (36) ನಾಪತ್ತೆಯಾದ ಮಹಿಳೆಯಾಗಿದ್ದು, ಯವಕಪಾಡಿ ಗ್ರಾಮದ ಖಾಸಗಿ ಹೋಂಸ್ಟೇಯಲ್ಲಿ ತಂಗಿದ್ದು, ಅಲ್ಲಿಂದ ಟ್ರೆಕ್ಕಿಂಗ್ ಹೊರಟಿದ್ದರು ಎಂದು ಹೇಳಲಾಗಿದೆ.



ಆನ್‌ಲೈನ್‌ನಲ್ಲಿ ಬುಕ್ಕಿಂಗ್ ಮಾಡಿ ಬಂದಿದ್ದ ಶರಣ್ಯ ಒಬ್ಬರೇ ಬಂದಿದ್ದರು. ಈ ವ್ಯಾಪ್ತಿಯಲ್ಲಿ ಕಾಡಾನೆ ಹಾವಳಿ ಇರುವುದರಿಂದ ಬೇರೆ ಪ್ರವಾಸಿಗರ ಜೊತೆಯಲ್ಲಿ ಕಳುಹಿಸಲಾಗಿದೆ. ಬೆಟ್ಟಕ್ಕೆ ತೆರಳಿದ್ದ ಇತರ ಪ್ರವಾಸಿಗರು ಹಿಂತಿರುಗಿ ಬಂದರೂ ಶರಣ್ಯ ಹಿಂತಿರುಗಿ ಬಾರದ ಕಾರಣ ಅರಣ್ಯ ಇಲಾಖೆ ಸಿಬ್ಬಂದಿಗೆ ಸ್ಥಳೀಯರು ವಿಷಯ ತಿಳಿಸಿದ್ದಾರೆ.

ಈ ಬಗ್ಗೆ ಅಲ್ಲಿಯ ಸ್ಥಳೀಯ ನಿವಾಸಿ ಕುಡಿಯರ ಮುತ್ತಪ್ಪ ಎಂಬವರು ಪೊಲೀಸರಿಗೆ ವಿಷಯ ತಿಳಿಸಿದ್ದಾರೆ. ಬಳಿಕ ಅರಣ್ಯ ಇಲಾಖೆಯವರು ಹಾಗೂ ಪೊಲೀಸರು, ಗ್ರಾಮಸ್ಥರು ಬೆಟ್ಟದಲ್ಲೆಲ್ಲ ಹುಡುಕಾಡಿದರೂ ಮಹಿಳೆಯ ಸುಳಿವು ದೊರೆತಿಲ್ಲ. ಇಂದು ಮತ್ತೆ ಮಹಿಳೆಗಾಗಿ ಶೋಧ ನಡೆಸಲಾಗುತ್ತಿದೆ. ಮಹಿಳೆಯ ಮೊಬೈಲ್ ಕೇರಳ ನೆಟ್ವರ್ಕ್‌ನಲ್ಲಿರುದಾಗಿ ತಿಳಿದು ಬಂದಿದ್ದು, ನಾಪೋಕ್ಲು ಠಾಣಾಧಿಕಾರಿ ರಾಘವೇಂದ್ರ, ಸಿಬ್ಬಂದಿ ಹಾಗೂ ಅರಣ್ಯ ಇಲಾಖೆ ಸಿಬ್ಬಂದಿ ಬೆಟ್ಟದ ಪ್ರದೇಶದಲ್ಲಿ ಬೀಡುಬಿಟ್ಟಿದ್ದಾರೆ.

## ಸೋಮಣ್ಣ ಕಡತವಿಲ್ಲದ ಮಂತ್ರಿ: ಸಿಎಂ

ಬಾಗಲಕೋಟೆ: ಸೋಮಣ್ಣ ಬಿಜೆಪಿಯಲ್ಲಿ ಕೆಲಸವಿಲ್ಲದಿರುವ ಮಂತ್ರಿ. ಅವರಿಗೆ ಯಾವ ಕಡತವೂ ಹೋಗು ವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿರುಗೇಟು ನೀಡಿದರು.

ಅವರು ಬಾಗಲಕೋಟೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಪ್ರಚಾರಕ್ಕಾಗಿ ಆಗಮಿಸಿದ ಸಂದರ್ಭದಲ್ಲಿ ಮಾಧ್ಯಮದವರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿ ಮಾತನಾಡಿದರು.



ಕಾಂಗ್ರೆಸ್ ಅಭ್ಯರ್ಥಿ ಸೋಲುತ್ತಾರೆಂದು ತಿಳಿದು ಮುಖ್ಯಮಂತ್ರಿಗಳನ್ನು ಐದು ದಿನ ಪ್ರಚಾರಕ್ಕೆ ಇಳಿಸಿದ್ದಾರೆ ಹಾಗೂ ಒಂದೂವರೆ ತಿಂಗಳು ಮಾತ್ರ ಸಿಎಂ ಅಧಿಕಾರದಲ್ಲಿರುತ್ತಾರೆ ಎಂಬ ಕೇಂದ್ರ ಸಚಿವ ವಿ.ಸೋಮಣ್ಣ ಅವರ ಹೇಳಿಕೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ಸೋಮಣ್ಣ ಅವರಿಗೆ ಪ್ರಚಾರ ಮಾಡಲು ಸಮಯವಿಲ್ಲ. ಕ್ಷೇತ್ರದಲ್ಲಿ ಸೋಲುತ್ತೇವೆ ಎಂದು ತಿಳಿದಿರುವುದರಿಂದ ಹೆಚ್ಚು ಪ್ರಚಾರ ಮಾಡುತ್ತಿಲ್ಲ ಎಂದರು.

ಮುಖ್ಯಮಂತ್ರಿಗಳ ಸ್ಥಾನದ ಬಗ್ಗೆ ಮಾತನಾಡಲು ಅವರೇನು ಕಾಂಗ್ರೆಸ್ ಹೈ ಕಮಾಂಡ್ ಅಲ್ಲ ಎಂದರು.

ಬಿಜೆಪಿಯವರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು. ಅವರ ಮಾತಿನಲ್ಲಿ ಸತ್ಯವಿಲ್ಲ ಹಾಗೂ ಹೇಳಿದಂತೆ ನಡೆದುಕೊಳ್ಳುತ್ತಿಲ್ಲವಾದ್ದರಿಂದ ಅವರ ಬಗ್ಗೆ ಹೆಚ್ಚು ಪ್ರತಿಕ್ರಿಯೆ ನೀಡಲಿಚ್ಚಿಸುವುದಿಲ್ಲ.

ಬಾಗಲಕೋಟೆ ಕ್ಷೇತ್ರದಲ್ಲಿ ಬಿಜೆಪಿ ಸೋಲುತ್ತಿವೆ ಎಂಬ ಭಯದಿಂದ ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ ಎಂದರು.

ಪಕ್ಷದಿಂದ ಉಚ್ಛಾಟಿಸಲ್ಪಟ್ಟಿರುವ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನೇ ಗೋಗರೆದು ಕರೆ ತಂದು ಪ್ರಚಾರ ಕಾರ್ಯಕ್ಕೆ ಇಳಿಸಿದ್ದಾರೆ. ಇದು ಅವರ ದ್ವಂದ್ವ ನೀತಿ ಎಂದರಲ್ಲದೆ ಕರ್ನಾಟಕದಲ್ಲಿ ಬಿಜೆಪಿ ಹೀನಾಯ ಸ್ಥಿತಿಯಲ್ಲಿದೆ ಎಂದರು.

ಲೋಕಸಭಾ ಸ್ಥಾನಗಳನ್ನು ಹೆಚ್ಚಿಸುವುದರಿಂದ ರಾಜ್ಯಕ್ಕಾಗುವ ಲಾಭವೇನು ಎಂಬ ಮಾಧ್ಯಮಗಳ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ ಜನಸಂಖ್ಯೆಗೆ ಅನುಗುಣವಾಗಿ ಸ್ಥಾನಗಳನ್ನು ಹೆಚ್ಚಿಸಬೇಕು ಆದರೆ ಮಲತಾಯಿ ಧೋರಣೆ ಇರಬಾರದು. ದಕ್ಷಿಣದ ರಾಜ್ಯಗಳಿಗೆ ಕಡಿಮೆ, ಉತ್ತರದ ರಾಜ್ಯಗಳಿಗೆ ಹೆಚ್ಚಿನ ಸ್ಥಾನ ಕೊಡುವ ಕೆಲಸ ಮಾಡಬಾರದು ಎಂದರು.

ಗ್ಯಾಸ್ ಸಿಲಿಂಡರ್ ಅಭಾವದ ಬಗ್ಗೆ ಮಾತನಾಡಿ ಕೇಂದ್ರ ಸರ್ಕಾರ ಈ ಬಗ್ಗೆ ಕ್ರಮ ಕೈಗೊಳ್ಳಬೇಕು. ಅದು ಅವರ ಕರ್ತವ್ಯ. ರಾಜ್ಯ ಸರ್ಕಾರ ವಿತರಣೆ ಮಾಡುತ್ತದೆಯಷ್ಟೇ ಎಂದರು. ಆಟೋ ಚಾಲಕರು ಆಹಾರ ಸಚಿವರ ಮನೆಗೆ ಮುತ್ತಿಗೆ ಹಾಕುವುದಾಗಿ ಹೇಳಿರುವ ಬಗ್ಗೆ ಮಾತನಾಡಿ ನರೇಂದ್ರ ಮೋದಿಯವರ ಮನೆಗೆ ಮುತ್ತಿಗೆ ಹಾಕಬೇಕು ಎಂದರು.

ಉಪಚುನಾವಣೆ ಫಲಿತಾಂಶ ಸಿಎಂ ಸ್ಥಾನದ ಮೇಲೆ ಪರಿಣಾಮ ಬೀರಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿಕೆ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಎರಡೂ ಕಡೆ ನಮ್ಮ ಪಕ್ಷ ಗೆಲ್ಲಲಿದ್ದು, ಪರಿಣಾಮ ಹೇಗೆ ಬೀರಲು ಸಾಧ್ಯ ಎಂದರು.

ಎಲ್ಲರಿಗೂ ಅನುದಾನ ನೀಡಿದಂತೆ ಅಲ್ಪಸಂಖ್ಯಾತರಿಗೂ ಅನುದಾನ ಒದಗಿಸಲಾಗಿದೆ

ರಾಜ್ಯದ ಬಜೆಟ್‌ನಲ್ಲಿ ಅಲ್ಪಸಂಖ್ಯಾತರಿಗೆ ಹೆಚ್ಚಿನ ಅನುದಾನ ನೀಡಲಾಗಿದೆ ಎಂದು ಯತ್ನಾಳ್ ಅವರು ಆರೋಪಿಸಿರುವ ಬಗ್ಗೆ ಮಾತನಾಡಿ ಅಲ್ಪಸಂಖ್ಯಾತರು ಈ ರಾಜ್ಯದ ನಾಗರಿಕರಲ್ಲವೇ? ಅವರ ಜನಸಂಖ್ಯೆ ಶೇ14% ರಷ್ಟಿದ್ದು ಎಲ್ಲರಿಗೂ ಅನುದಾನ ನೀಡಿದಂತೆ ಅವರಿಗೂ ನೀಡಲಾಗಿದೆ ಎಂದರು.

ಬಿಜೆಪಿ ಯವರು ಸಿಎಂ ಸ್ಥಾನದ ಬಗ್ಗೆ ಪದೇ ಪದೇ ಮಾತನಾಡುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು, ಈಗಾಗಲೇ ಈ ಕುರಿತು ಸ್ಪಷ್ಟವಾಗಿ ತಿಳಿಸಿದ್ದು, ಬಿಜೆಪಿಯವರು ಇದರ ಬಗ್ಗೆ ಮಾತನಾಡಲು ಅವರೇನು ನಮ್ಮ ಹೈಕಮಾಂಡ್ ಅಲ್ಲ ಎಂದರು. ರಾಹುಲ್ ಗಾಂಧಿ ಸೋನಿಯಾ ಗಾಂಧಿ ಮಲ್ಲಿಕಾರ್ಜುನ ಖರ್ಗೆ ಹಾಗೂ ಪ್ರಿಯಾಂಕಾ ಗಾಂಧಿ ಅವರು ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಎಂದರು.

## ಹುಬ್ಬಳ್ಳಿಯಲ್ಲಿ ಲವ್‌ಜಿಹಾದ್..?

ಹುಬ್ಬಳ್ಳಿ: ನಗರದ ಜಿಮ್ ಟ್ರೈನರ್ ಸಮೀರ್ ನಮ್ಮ ಮಗಳ ತಲೆ ಕೆಡಿಸಿದ್ದಾನೆ ಎಂದು ಆತನಿಂದ ಕಿರುಕುಳಕ್ಕೊಳಗಾದ ಸಂತ್ರಸ್ತೆಯ ತಾಯಿ ಆಕ್ರೋಶ ಹೊರಹಾಕಿದ್ದಾರೆ.

ಈ ಬಗ್ಗೆ ಹುಬ್ಬಳ್ಳಿಯಲ್ಲಿ ಮಾಧ್ಯಮಗಳ ಜೊತೆ ಅವರು ಮಾತನಾಡಿದರು. ಈ ವೇಳೆ, ನನ್ನ ಮಗಳಿಗೂ ಸಮೀರ್‌ಗೂ ಯಾವುದೇ ಸಂಬಂಧ ಇಲ್ಲ. ನನ್ನ ಮಗಳ ಮೇಲೆ



ಹಿಪ್ನೋಟೈಸ್ ಮಾಡಲಾಗಿದೆ. ಕಳೆದ ನಾಲ್ಕೈದು ದಿನದಿಂದ ನನ್ನ ಮಗಳಿಗೆ ಸಮೀರ್ ಮತ್ತು ಅವನ ಕುಟುಂಬಸ್ಥರು ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಇವತ್ತು (ಏ.3) ನಮ್ಮನ್ನು ಸುಟ್ಟ ಹಾಕಲು ಸಮೀರ್ ಕುಟುಂಬಸ್ಥರು ಬಂದಿದ್ದರು. ಪೆಟ್ರೋಲ್, ಹಾಕಿ ಸ್ಟಿಕ್, ತಲವಾರ್ ತೆಗೆದುಕೊಂಡು ಬಂದು ಹಲ್ಲೆ ಮಾಡಿದ್ದಾರೆ ಎಂದು ಮಾಧ್ಯಮಗಳ ಮುಂದೆ ಅಳಲು ತೋಡಿಕೊಂಡಿದ್ದಾರೆ.

ಈ ಬಗ್ಗೆ ಅಜ್ಞಾತ ಸ್ಥಳದಿಂದ ಸಂತ್ರಸ್ತ ಯುವತಿ ವಿಡಿಯೋವೊಂದನ್ನ ಬಿಡುಗಡೆ ಮಾಡಿದ್ದು, ಸಮೀರ್ ವಿರುದ್ಧ ಅತ್ಯಾಚಾರದ ಆರೋಪ ಮಾಡಿದ್ದಾರೆ. ಜ್ಯೂಸ್‌ನಲ್ಲಿ ಮತ್ತಿನ ಔಷಧ ಬೆರಸಿಕೊಟ್ಟು ಸಮೀರ್ ಅತ್ಯಾಚಾರ ಮಾಡಿದ್ದಾನೆ. ಅಲ್ಲದೇ ಕೃತ್ಯದ ವಿಡಿಯೋ ಮಾಡಿದ್ದು ನನಗೆ ಗೊತ್ತಿರಲಿಲ್ಲ. ಹುಬ್ಬಳ್ಳಿ ಲವ್ ಜಿಹಾದ್ ಪ್ರಕರಣಕ್ಕೆ ಸ್ಫೋಟಕ ತಿರುವು ಸಿಕ್ಕಿದೆ. ಮೊಬೈಲ್‌ನಲ್ಲಿ ಯುವತಿಯರ ಫೋಟೋಗಳು ಪತ್ತೆಯಾಗಿದ್ದು ಆತನ ಕಾಮಕಾಂಡ ಬಯಲಿಗೆ ಬಂದಿದೆ. ಪೊಲೀಸರು ಆತನ ಮೊಬೈಲ್ ವಶಕ್ಕೆ ಪಡೆದು ಪರಿಶೀಲನೆ ನಡೆಸಿದಾಗ ಸಮೀರ್ ಬೇರೆ ಬೇರೆ ಯುವತಿಯ ಜತೆ ಇದ್ದ ಫೋಟೋಗಳು ಪತ್ತೆಯಾಗಿವೆ.

ಅಲ್ಲದೇ ಸ್ಕ್ಯಾನಿಂಗ್ ವರದಿ ಹಾಗೂ ಗರ್ಭನಿರೋಧಕ ಮಾತ್ರೆ ಫೋಟೋ ಸಹ ಸಿಕ್ಕಿದೆ. ಇನ್ನು ಸಮೀರ್ ತನ್ನ ಅರೆಬೆತ್ತಲೆ ಫೋಟೋಗಳನ್ನ ಯುವತಿಯರಿಗೆ ಕಳುಹಿಸುತ್ತಿದ್ದ ಎಂದು ಆರೋಪಿಸಲಾಗಿದೆ.

ಹುಬ್ಬಳ್ಳಿಯಲ್ಲಿ ಜಿಮ್ ತರಬೇತುದಾರನ ಮೇಲಿನ ಹಲ್ಲೆ ಪ್ರಕರಣಕ್ಕೆ ಮಹತ್ವದ ಟ್ವಿಸ್ಟ್ ದೊರೆತಿದ್ದು, ಈ ಪ್ರಕರಣದ ಸಂತ್ರಸ್ತ ಯುವತಿ ವಿಡಿಯೋ ಹೇಳಿಕೆ ಬಿಡುಗಡೆ ಮಾಡುವ ಪ್ರಕರಣಕ್ಕೆ ಟ್ವಿಸ್ಟ್ ನೀಡಿದ್ದಳು. ಅಜ್ಞಾತ ಸ್ಥಳದಿಂದ ಸಂತ್ರಸ್ತ ಯುವತಿ ವಿಡಿಯೋವೊಂದನ್ನ ಬಿಡುಗಡೆ ಮಾಡಿದ್ದು, ವಿಡಿಯೋದಲ್ಲಿ ಸಮೀರ್ ಮುಲ್ಲಾ ಮತ್ತು ಬರಿಸುವ ಪಾನೀಯ ನೀಡಿ ತನ್ನ ಮೇಲೆ ಅತ್ಯಾಚಾರವೆಸಗಿದ ಎಂದು ಆರೋಪಿಸಿದ್ದಾರೆ. ಜಿಮ್ ಗೆ ಬರುವ ಯುವತಿಯ ತಲೆ ಕಡೆಸಿ ಅವರ ಜೊತೆ ಖಾಸಗಿ ಕ್ಷಣಗಳನ್ನು ಕಳೆದು, ಅದನ್ನು ವಿಡಿಯೋ ಮಾಡಿಟ್ಟುಕೊಂಡು ಬ್ಲ್ಯಾಕ್ ಮೇಲ್ ಮಾಡುತ್ತಿದ್ದ ಎಂದು ಸಂತ್ರಸ್ತೆ ದೂರಿದ್ದಾರೆ.

## ಎಲ್‌ಪಿಜಿ ಬಗ್ಗೆ ಮಾಹಿತಿ ಒದಗಿಸಲು ಸೂಚನೆ

ನವದೆಹಲಿ: ಎಲ್‌ಪಿಜಿ ಸಿಲಿಂಡರ್ ಲಭ್ಯತೆಯ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ತಪ್ಪು ಮಾಹಿತಿಗಳಿಗೆ ಕೇಂದ್ರ ಸರ್ಕಾರ ತೀವ್ರ ಕಳವಳ ವ್ಯಕ್ತಪಡಿಸಿದೆ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯವು ಎಲ್ಲಾ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದು, ಸಂವಹನ ವ್ಯವಸ್ಥೆಯನ್ನು ಬಲಪಡಿಸುವಂತೆ ಸೂಚಿಸಿದೆ.

ಪ್ರಸ್ತುತ ಕೇವಲ 17 ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳು ಮಾತ್ರ ನಿಯಮಿತ ಸುದ್ದಿಗೋಷ್ಠಿ ನಡೆಸುತ್ತಿವೆ. ಇದು ಪರಿಸ್ಥಿತಿಯನ್ನು ನಿಭಾಯಿಸಲು ಸಾಕಾಗುತ್ತಿಲ್ಲ ಎಂದು ಸಚಿವಾಲಯ ಅಭಿಪ್ರಾಯಪಟ್ಟಿದೆ. ಉಳಿದ ರಾಜ್ಯಗಳು ತಕ್ಷಣವೇ ಇದೇ ರೀತಿಯ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸೂಚಿಸಲಾಗಿದೆ.

# ‘ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು ಶತಸಿದ್ಧ’



ಶಿವಮೊಗ್ಗ

ಉಪ ಚುನಾವಣೆ ನಡೆಯುವ ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು ಶತಸಿದ್ಧ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ.

ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ಬಿಜೆಪಿಯ ಗೆಲುವು ಅವರ ಮೇಲೆ ಯಾವ ರೀತಿ ದುಷ್ಪರಿಣಾಮ ಬೀರುತ್ತದೆ ಎಂಬುದು ಅವರ ಆಂತರಿಕ ವಿಚಾರ ಎಂದು ತಿಳಿಸಿದರು. ಏನೇನು ರಾಜಕೀಯ ಬದಲಾವಣೆ ಆಗಲಿದೆ ಕಾದುನೋಡಿ ಎಂದು ಹೇಳಿದರು.

ಯತ್ನಾಳ್ ಅವರು ಬಿಜೆಪಿ ಪರವಾಗಿ ಪ್ರಚಾರ ಮಾಡಿದ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ವೀರಣ್ಣ ಚರಂತಿಮಠ ಅವರ ಲೀಡ್ ಹೆಚ್ಚಾಗುವುದಾದರೆ ಸ್ವಾಗತ ಎಂದು ತಿಳಿಸಿದರು. ಬಿಜೆಪಿ ಬಾಗಲಕೋಟೆಯಲ್ಲಿ ಗೆದ್ದಾಗಿದೆ. ಕಾಂಗ್ರೆಸ್ ಪಕ್ಷದವರೇ ಸಹಾಯ ಮಾಡುತ್ತಿದ್ದಾರೆ. ಯಾರು ಬಂದು ಸಹಕರಿಸಿದರೂ ಸ್ವಾಗತ ಎಂದು ಅವತ್ತೇ ಹೇಳಿದ್ದೇನೆ ಎಂದರು.

ದಾವಣಗೆರೆ ದಕ್ಷಿಣವು ಬಿಜೆಪಿ ಐತಿಹಾಸಿಕ ಗೆಲುವಿಗೆ ಸಾಕ್ಷಿ ಆಗಲಿದೆ. ಕಾಂಗ್ರೆಸ್ ತಮಗೆ ಮೋಸ ಮಾಡುತ್ತಿದೆ ಎಂಬುದು ಅಲ್ಲಿಯೂ ಅಲ್ಪಸಂಖ್ಯಾತರಿಗೆ ಮನವರಿಕೆ ಆಗಿದೆ. ಅಲ್ಲಿ ಬಿಜೆಪಿ ಅಭ್ಯರ್ಥಿ ಗೆಲ್ಲುತ್ತಾರೆ. ನಮ್ಮ ಕಾರ್ಯಕರ್ತರ ಪರಿಶ್ರಮದಿಂದ ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ವಿಜಯಪತಾಕೆ ಹಾರಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ಮುಖ್ಯಮಂತ್ರಿಗಳು ಭಯಭೀತರಾಗಿದ್ದಾರೆ ಎಂದು ತಿಳಿಸಿದರು.

# ಕಾನೂನು ಸುವ್ಯವಸ್ಥೆಗೂ ಜಿಡಿಪಿಗೂ ನೇರ ಸಂಬಂಧವಿದೆ: ಸಿಎಂ ಸಿದ್ದರಾಮಯ್ಯ

ಬೆಂಗಳೂರು

ಸೈಬರ್ ಅಪರಾಧಗಳು ಸೇರಿದಂತೆ ನಾನಾ ಅಪರಾಧಗಳಲ್ಲಿ ನಮ್ಮ ರಾಜ್ಯ ರಾಷ್ಟ್ರೀಯ ಸರಾಸರಿಗಿಂತ ಹೆಚ್ಚಾಗಿದ್ದು ಇದನ್ನು ಕಟ್ಟುನಿಟ್ಟಾಗಿ ತಡೆಗಟ್ಟಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚಿಸಿದರು.

ಕೋರಮಂಗಲದ ಪರೇಡ್ ಮೈದಾನದಲ್ಲಿ ಆಯೋಜಿಸಿದ್ದ "ಪೊಲೀಸ್ ಧ್ವಜ ದಿನಾಚರಣೆ" ಕಾರ್ಯಕ್ರಮದಲ್ಲಿ "ಮುಖ್ಯಮಂತ್ರಿಗಳ ಪದಕ" ಪ್ರದಾನ ಮಾಡಿ ಮಾತನಾಡಿದರು.

ಯಾವುದೇ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಆಯಾ ಠಾಣಾಧಿಕಾರಿಯ ಗಮನಕ್ಕೆ ಬರದಂತೆ ಯಾವುದೇ ಅಪರಾಧಗಳು, ಕೆಟ್ಟ ವ್ಯವಹಾರಗಳು ನಡೆಯಲು ಸಾಧ್ಯವಿಲ್ಲ ಎನ್ನುವುದು ನನ್ನ ನಂಬಿಕೆ ಎಂದರು.

ಹಲವು ರೀತಿಯ ಅಪರಾಧ ಪ್ರಕರಣಗಳನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಿ ಶಿಕ್ಷೆ ಪ್ರಮಾಣದಲ್ಲಿ ಕರ್ನಾಟಕ ರಾಜ್ಯ ಮುಂದಿದೆ. ಇದಕ್ಕಾಗಿ ಪೊಲೀಸ್ ಇಲಾಖೆಯನ್ನು ಅಭಿನಂದಿಸುವ ಜೊತೆಗೆ ಪ್ರಮಾಣ ಹೆಚ್ಚಾಗಿರುವ ಅಪರಾಧಗಳ ನಿಯಂತ್ರಣದಲ್ಲೂ



ನಾವು ಶ್ರಮ ಹಾಕಬೇಕಿದೆ ಎಂದು ಸೂಚಿಸಿದರು.

ಸೈಬರ್ ಅಪರಾಧಗಳು ಸೇರಿದಂತೆ ನಾನಾ ರೀತಿಯ ಅಪರಾಧಗಳನ್ನು ತಡೆಯಲು ತಂತ್ರಜ್ಞಾನದ ಅವಕಾಶ ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಮಯದ ಮಿತಿ ಇಲ್ಲದಂತೆ ದಿನದ 24 ಗಂಟೆಯೂ ಕರ್ತವ್ಯ ಪ್ರಜ್ಞೆ ಇಟ್ಟುಕೊಂಡು ಕೆಲಸ ಮಾಡುವುದರಿಂದ ಸಮಾಜದಲ್ಲಿ ನೆಮ್ಮದಿ ಮತ್ತು ಸೌಹಾರ್ದತೆ ನೆಲೆಸಿದೆ ಎಂದರು.

ಮಹಿಳೆಯರು, ಮಕ್ಕಳು ಮತ್ತು ದುರ್ಬಲರು ಹಾಗೂ ಅಸಹಾಯಕರ ನಮ್ಮ ಸರ್ಕಾರ ರಕ್ಷಣೆಗೆ ಮೊದಲ ಆದ್ಯತೆ ನೀಡುತ್ತಿದೆ. ಪೊಲೀಸರೂ ಇದನ್ನು ಗಮನದಲ್ಲಿಟ್ಟುಕೊಂಡು ಕೆಲಸ ಮಾಡಬೇಕು ಎಂದರು.

ರಾಜ್ಯದ ಆರ್ಥಿಕ ಬೆಳವಣಿಗೆಗೂ, ಜಿಡಿಪಿ ಪ್ರಗತಿಗೂ ರಾಜ್ಯದ ಕಾನೂನು ಸುವ್ಯವಸ್ಥೆಗೂ ನೇರಾ ನೇರಾ ಸಂಬಂಧ ಇರುತ್ತದೆ. ಇದನ್ನು ಗಮನದಲ್ಲಿ ಇಟ್ಟುಕೊಂಡು ಪೊಲೀಸ್ ಇಲಾಖೆ ಕಾರ್ಯನಿರ್ವಹಿಸಿದರೆ ಆರ್ಥಿಕತೆಗೂ ದೊಡ್ಡ ಕೊಡುಗೆ ಕೊಟ್ಟಂತಾಗುತ್ತದೆ ಎಂದರು.

ಕರ್ನಾಟಕ ಡ್ರಗ್ಸ್ ಮುಕ್ತ ರಾಜ್ಯ ಆಗಬೇಕು ಎನ್ನುವ ಗುರಿ ನಮ್ಮ ಸರ್ಕಾರದ್ದಾಗಿದೆ. ಇದು ಪೊಲೀಸ್ ಇಲಾಖೆಯ ಗುರಿಯೂ ಆಗಬೇಕಿದೆ ಎಂದರು.

ಪದಕ ವಿಜೇತರೆಲ್ಲರಿಗೂ ಶುಭಾಶಯ ಕೋರಿದ ಮುಖ್ಯಮಂತ್ರಿಗಳು, ಇವರ ಕಾರ್ಯ ಮತ್ತು ವೃತ್ತಿಪರತೆ ಇತರರಿಗೂ ಸ್ಫೂರ್ತಿಯಾಗಲಿ ಎಂದು ಹಾರೈಸಿದರು.

ಗೃಹ ಸಚಿವರಾದ ಜಿ.ಪರಮೇಶ್ವರ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ.ಸಲೀಂ ಅವರುಗಳು ಉಪಸ್ಥಿತರಿದ್ದರು.

# ಬೆಂಗಳೂರಿನ ವಿದ್ಯಾರ್ಥಿ ಮುಘಿಲನ್‌ಗೆ ಏಳು ಸರ್ಕಾರಿ ಪರೀಕ್ಷೆಗಳಲ್ಲಿ ಭರ್ಜರಿ ಜಯ

ಬೆಂಗಳೂರು

ಹೆಚ್ಚಿನ ಆಕಾಂಕ್ಷಿಗಳು ಒಂದೇ ಸರ್ಕಾರಿ ಕೆಲಸದ ಬೆನ್ನಟ್ಟುತ್ತಾ ವರ್ಷಗಳನ್ನು ಕಳೆಯುತ್ತಾರೆ. ಕರ್ನಾಟಕದ ಸ್ಪರ್ಧಾತ್ಮಕ ಪರೀಕ್ಷೆಯ ವಲಯಗಳಲ್ಲಿ ಗಮನ ಸೆಳೆದ ಗಮನಾರ್ಹ ಓಟದಲ್ಲಿ, ಬೆಂಗಳೂರಿನ ವಿಜಯನಗರದ ವೆರಾಂಡಾ ರೇಸ್ ವಿದ್ಯಾರ್ಥಿ ಮುಘಿಲನ್ ಏಳು ಬ್ಯಾಂಕಿಂಗ್ ಮತ್ತು ಕೇಂದ್ರ ಸರ್ಕಾರಿ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿದ್ದು, ಈ ಸಾಧನೆಯು ವೆರಾಂಡಾ ರೇಸ್ ಸಂಸ್ಥೆಯ ಮೊದಲ ಕರ್ನಾಟಕ ಯಶಸ್ಸಿನ ಸಭೆಯ ನಿರ್ಣಾಯಕ ಕಥೆಯಾಯಿತು. 28 ಮಾರ್ಚ್ 2026 ರಂದು ಬೆಂಗಳೂರಿನ ಹಾಲಿಡೇ ಇನ್‌ನಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಬ್ಯಾಂಕಿಂಗ್ ಮತ್ತು ಕೇಂದ್ರ ಸರ್ಕಾರಿ ಪರೀಕ್ಷೆಗಳಲ್ಲಿ ಉತ್ತೀರ್ಣರಾದ 20 ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಬ್ಯಾಂಕಿಂಗ್, SSC ಇವು ಕೇವಲ ಜ್ಞಾನದ ಪರೀಕ್ಷೆಯಲ್ಲ, ಆದರೆ

ಸ್ಥಿರತೆ, ತಂತ್ರ ಮತ್ತು ಒತ್ತಡದಲ್ಲಿ ಕಾರ್ಯನಿರ್ವಹಿಸುವ ಸಾಮರ್ಥ್ಯದ ಪರೀಕ್ಷೆಯಾಗಿವೆ. ವೆರಾಂಡಾ ರೇಸ್ ತಮ್ಮ ಸಂಸ್ಥೆಯ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ




ಉತ್ತೀರ್ಣರಾಗುವುದನ್ನು ನೋಡುವುದನ್ನು ತನ್ನ ಗುರಿಯನಾಗಿಸಿಕೊಂಡಿದ್ದು , ಪರೀಕ್ಷೆಗೆ ವಿದ್ಯಾರ್ಥಿಗಳನ್ನು ಸಿದ್ಧರಾಗಿಸುವುದು, ಅಣುಕು ಪರೀಕ್ಷೆ, ಮೆಂಟರ್ ಶಿಪ್, ಕಂಪ್ಯೂಟರ್ ಲ್ಯಾಬ್ ಸೌಲಭ್ಯಗಳು ಸಂಸ್ಥೆಯ ಪರೀಕ್ಷಾ ತಯಾರಿಯ ವಿಧಾನದ ದೃಢೀಕರಣವಾಗಿದೆ. “ಮುಗಿಲನ್ ಅವರ ಸಾಧನೆ ಅಸಾಧಾರಣ, ಆದರೆ ಅದು ಆಕಸ್ಮಿಕವಲ್ಲ. ಒಬ್ಬ ವಿದ್ಯಾರ್ಥಿಯು ಪ್ರತಿ ಅಣಕು ಪರೀಕ್ಷೆ, ಪ್ರತಿ ಪರಿಷ್ಕರಣೆ, ಪ್ರತಿ ತಡರಾತ್ರಿ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ನಂಬಿದಾಗ ಮಾತ್ರ ಯಶಸ್ಸು ಸಂಭವಿಸುತ್ತದೆ. ಇಂದು ಆ ವೇದಿಕೆಯಲ್ಲಿರುವ ಇಪ್ಪತ್ತು ವಿದ್ಯಾರ್ಥಿಗಳು ಕರ್ನಾಟಕದ ಸಾಧನೆಯ ಕೇವಲ ಆರಂಭವಾಗಿದೆ.”, ಭರತ್ ಸೀಮನ್, ಸಂಸ್ಥಾಪಕ, ವೆರಾಂಡಾ ರೇಸ್

# ‘ತಾಕತ್ತಿದ್ದರೆ ವಿದ್ಯಾರ್ಥಿ ಮತದಾರರನ್ನು ಬಂಧಿಸಿ ತೋರಿಸಿ’

ಬಾಗಲಕೋಟೆ

ಸುರ್ಜೇವಾಲಾ ಅವರೇ, ಸರಕಾರ ನಿಮ್ಮದೇ ಇದೆ. ನಿಮಗೆ ತಾಕತ್ತಿದ್ದರೆ ವಿದ್ಯಾರ್ಥಿ ಮತದಾರರನ್ನು ಇವತ್ತೇ ಬಂಧಿಸಿ ತೋರಿಸಿ ಎಂದು ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ ಅವರು ಸವಾಲು ಹಾಕಿದ್ದಾರೆ.

ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ಯುವಕರು, ಕಾಲೇಜು ವಿದ್ಯಾರ್ಥಿಗಳು ಮತ ಹಾಕಿದರೆ ಬಂಧಿಸುವುದಾಗಿ ಹೇಳುವ ಮೂಲಕ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲಾ ಅವರು ಭಯ ಸೃಷ್ಟಿಸುತ್ತಿದ್ದಾರೆ ಎಂದು ಆಕ್ಷೇಪಿಸಿದರು. ಇದು ಪ್ರಜಾಪ್ರಭುತ್ವಕ್ಕೆ ಅಪಾಯಕಾರಿ ಎಂದು ಖಂಡಿಸಿದರು. ರಾಜ್ಯದಲ್ಲಿ ಇನ್ನೂ ಎಸ್.ಐ.ಆರ್.ಆಗಿಲ್ಲ ಎಂದು ತಿಳಿಸಿದರು.

ಸೋಲಿನ ಭಯದಿಂದ ಈ ರೀತಿ ಮಾತನಾಡುತ್ತಾರೆ. ಆಶಾ– ಅಂಗನವಾಡಿ ಕಾರ್ಯಕರ್ತೆಯರು, ಶಿಕ್ಷಕರನ್ನು ಮನೆ ಮನೆಗೆ ಕಳಿಸಿ ನೀವು ಕಾಂಗ್ರೆಸ್ಸಿಗೆ ಮತ ಹಾಕದೇ ಇದ್ದರೆ, ನಿಮ್ಮ 5 ಗ್ಯಾರಂಟಿ ರದ್ದಾಗುತ್ತವೆ ಎಂದು ಭಯ ಹುಟ್ಟಿಸುತ್ತಿದ್ದಾರೆ. ನಿಮಗೆ ನಾಚಿಕೆ ಆಗಬೇಕು ಎಂದು ಟೀಕಿಸಿದರು.

ವಿಳಾಸ, ಆಧಾರ್ ಕಾರ್ಡ್ ಕೊಟ್ಟು ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸಿದವರಿಗೆ ಒಂದು ಚುನಾವಣೆಯಲ್ಲಿ ಒಂದೇ ಮತದಾನ ಮಾಡಲು ಅವಕಾಶವಿದೆ ಎಂದು ಗಮನ ಸೆಳೆದರು. ಬಾಗಲಕೋಟೆಯಲ್ಲಿ ಸಾವಿರಾರು ವಿದ್ಯಾರ್ಥಿಗಳು 5–6 ವರ್ಷ, 10 ವರ್ಷ ಇಲ್ಲೇ ಇರುತ್ತಾರೆ ಎಂದು ಗಮನ ಸೆಳೆದರು.

# ನೀರಿನ ಸವಾಲುಗಳಿಗೆ ಆದ್ಯತೆ ನೀಡುವ ಪ್ಲಂಬೆಕ್ಸ್ ಇಂಡಿಯಾ 2026

ಮಂಗಳೂರು

ಭಾರತವು ತೀವ್ರ ನಗರೀಕರಣ ಮತ್ತು ಸೀಮಿತ ಕುಡಿಯುವ ನೀರಿನ ಸಂಪನ್ಮೂಲಗಳ ದ್ವಿಗುಣ ಒತ್ತಡದಿಂದ ಅಪಾರ ನೀರಿನ ಬಿಕ್ಕಟ್ಟು ಎದುರಿಸುತ್ತಿದೆ. ನೀತಿ ಆಯೋಗದ ಪ್ರಕಾರ ಸುಮಾರು 600 ಮಿಲಿಯನ್ ಭಾರತೀಯರು ಅತ್ಯಂತ ತೀವ್ರವಾದ ನೀರಿನ ಒತ್ತಡ ಎದುರಿಸುತ್ತಿದ್ದು 21 ಪ್ರಮುಖ ನಗರಗಳಲ್ಲಿ ಅಂತರ್ಜಲದ ಲಭ್ಯಲ್ಲದಂತಾಗಿರುವುದು ವ್ಯವಸ್ಥಿತ ಸುಧಾರಣೆಯ ತುರ್ತನ್ನು ಎತ್ತಿ ತೋರಿಸಿದೆ. 2030ರ ವೇಳೆಗೆ ನೀರಿನ ಬೇಡಿಕೆಯು ದುಪ್ಪಟ್ಟಾಗಲಿದ್ದು ಪೂರೈಕೆ ಕಡೆಯಲ್ಲಿನ ವಿಸ್ತರಣೆಯಿಂದ ಬೇಡಿಕೆಯ–ಪ್ರೇರಿತ, ದಕ್ಷತೆಯ ನೀರಿನ ನಿರ್ವಹಣೆಯು ಹೆಚ್ಚು ಮುಖ್ಯವಾಗಿದೆ. ಬೆಂಗಳೂರಿನಂತಹ ನಗರ ಕೇಂದ್ರಗಳು ಈ ಬಿಕ್ಕಟ್ಟಿ ತೀವ್ರತೆಯನ್ನು ನಿರೂಪಿಸುತ್ತವೆ. ಒಂದೊಮ್ಮೆ 1,000ಕ್ಕೂ ಹೆಚ್ಚು ಪರಸ್ಪರ ಸಂಪರ್ಕ ಹೊಂದಿರುವ ಕೆರೆಗಳನ್ನು ಹೊಂದಿದ್ದ ನಗರವು ಈಗ ಕೇವಲ 100




ಜಲಮೂಲಗಳಿಗೆ ಇಳಿದಿದೆ, ಅವುಗಳಲ್ಲಿ ಬಹಳಷ್ಟು ಮಾಲಿನ್ಯ ಹೊಂದಿವೆ ಅಥವಾ ಒತ್ತುವರಿಗೆ ಒಳಗಾಗಿವೆ. ಭಾರತೀಯ ವಿಜ್ಞಾನ ಸಂಸ್ಥೆಯ ಅಧ್ಯಯನಗಳ ಪ್ರಕಾರ ಬೆಂಗಳೂರಿನ ಶೇ.85ರಷ್ಟು ಕೆರೆಗಳು ಮಲಿನಗೊಂಡು ಜೀವ ವೈವಿಧ್ಯತೆಗೆ ಬೆಂಬಲಿಸುವ ಅಥವಾ ಅಂತರ್ಜಲ ಮರುಪೂರಣ ಮಾಡುವ ಸಾಮರ್ಥ್ಯ ಕಳೆದುಕೊಂಡಿವೆ. ನೈಸರ್ಗಿಕ ಮರುಪೂರಣ ವ್ಯವಸ್ಥೆಗಳು ಕುಸಿತಗೊಳ್ಳುತ್ತಿದ್ದಂತೆ ಸುಸ್ಥಿರವಲ್ಲದ ಜಲ ಸಂಪನ್ಮೂಲಗಳ ಮೇಲೆ ಬೆಂಗಳೂರು ಆಧಾರಪಡುವುದು ಹೆಚ್ಚಾಗಿದೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಪ್ರಚಾರ ಕಾರ್ಯದಲ್ಲಿ ತೊಡಗಿಸಿಕೊಂಡು ಇಲ್ಲಿನ ಶಿವಾಜಿನಗರದಲ್ಲಿರುವ ಹಜರತ್ ಖಡಕ್ ಶಾ ವಲಿ ದರ್ಗಾಗೆ ಭೇಟಿ ನೀಡಿ ಪ್ರಾರ್ಥನೆಯಲ್ಲಿ ಪಾಲ್ಗೊಂಡರು. ಸಚಿವರಾದ ಈಶ್ವರ್ ಖಂಡ್ರೆ, ಎಸ್.ಎಸ್.ಮಲ್ಲಿಕಾರ್ಜುನ್ ಮತ್ತು ವಿಧಾನ ಪರಿಷತ್ ಸದಸ್ಯರಾದ ಗೋವಿಂದರಾಜು ಸೇರಿ ಹಲವು ನಾಯಕರು ಉಪಸ್ಥಿತರಿದ್ದರು.

# ಉಪ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸೋಲಿನ ಭೀತಿ: ಶ್ರೀರಾಮುಲು

ದಾವಣಗೆರೆ

ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸೋಲಿನ ಭೀತಿ ಮತ್ತು ಭಯ ಆರಂಭವಾಗಿದೆ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಅವರು ತಿಳಿಸಿದ್ದಾರೆ.

ದಾವಣಗೆರೆ ದಕ್ಷಿಣ ಕ್ಷೇತ್ರದ ಉಪ ಚುನಾವಣೆಯ ಹಿನ್ನೆಲೆಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರ ಸರ್ಕಾರ ಹುಟ್ಟಿದ್ದೇ ಸುಳ್ಳಿನಿಂದ. ಅದಕ್ಕೆ ಈಗಲೂ ಅವರು ಸುಳ್ಳು ಹೇಳುತ್ತಿದ್ದಾರೆ. ಬಾಗಲಕೋಟೆ ಮತ್ತು ದಾವಣಗೆರೆಯಲ್ಲಿ ಬಿಜೆಪಿ ಗೆದ್ದರೆ ಗ್ಯಾರಂಟಿಗಳನ್ನು ಬಂದ್ ಮಾಡುತ್ತೇವೆ ಎಂದು ಸಿಎಂ ಹೇಳುತ್ತಾರೆ. ಕರ್ನಾಟಕದಲ್ಲಿ ಇರುವುದು ಕಾಂಗ್ರೆಸ್ ಸರ್ಕಾರವೇ ಹೊರತು ಬಿಜೆಪಿ ಸರ್ಕಾರವಲ್ಲ. ಆದ್ದರಿಂದ ಗ್ಯಾರಂಟಿ ನಿಲ್ಲಿಸುವುದಿದ್ದರೆ ಅವರೇ ನಿಲ್ಲಿಸಬೇಕು ಎಂದರು.

ಕಾಂಗ್ರೆಸ್‌ನವರು ಮೊದಲಿನಿಂದಲೂ ಜನರು ದಡ್ಡರು ಅಂತ ತಿಳಿದಿದ್ದಾರೆ. ಆದರೆ ಈಗ ಎರಡೂ ಕಡೆ ಸೋಲುತ್ತಿದ್ದೇವೆ ಎಂಬ ಮನವರಿಕೆ ಅವರಿಗೆ ಆಗಿದೆ. ದಕ್ಷಿಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸ್ ಕರಿಯಲ್ಲ ಅವರ ಪರವಾಗಿ ಎಲ್ಲರೂ ಒಂದಾಗಿ ಕೆಲಸ ಮಾಡುತ್ತಿದ್ದೇವೆ. ಇದರಿಂದ ಕಾಂಗ್ರೆಸ್‌ಗೆ ಸೋಲಿನ ಭೀತಿ ಪ್ರಾರಂಭವಾಗಿದೆ ಎಂದರು.

ಸಿದ್ದರಾಮಯ್ಯ ಅವರಿಗೆ ಡಿ ಕೆ ಶಿವಕುಮಾರ್ ಅವರನ್ನು ಕಂಡರೂ ಭಯ ಆರಂಭವಾಗಿದೆ. ಈ ಉಪ ಚುನಾವಣೆ ಬಂದ ನಂತರ ಬಿಜೆಪಿ ಕಂಡರೂ ಭಯವಾಗುತ್ತಿದೆ ಎಂದು ನುಡಿದರು.

2018 ರಲ್ಲಿ ಚುನಾವಣೆ ನಡೆದಾಗ ದಲಿತ ನಾಯಕ ಡಾ. ಜಿ ಪರಮೇಶ್ವರ್ ಅವರನ್ನು ಮುಖ್ಯಮಂತ್ರಿ ಮಾಡಬೇಕು ಎಂದು ಆಗಿತ್ತು. ಆಗ ಸಿದ್ದರಾಮಯ್ಯ ಪರಮೇಶ್ವರ್ ಅವರನ್ನು ಸೋಲಿಸಿದರು. ಈಗ ಕಾಲ ಬದಲಾಗಿದೆ. ಅಹಿಂದ ಹೆಸರು ಹೇಳಿಕೊಂಡು ತಮ್ಮ ಬೇಳೆ ಬೇಯಿಸಿಕೊಳ್ಳುತ್ತಿದ್ದಾರೆ. ಅಧಿಕಾರ ಹಂಚಿಕೆ ಮಾಡುವಾಗ ಅಹಿಂದ ಇಲ್ಲ. ಬೇಕಾದವರಿಗೆ ಮಾತ್ರ ಅಧಿಕಾರ ಕೊಟ್ಟರು ಎಂದರು.



ಬೆಂಗಳೂರು ಕುಮಾರ ಕೃಪಾ ಅತಿಥಿಗೃಹದ ಸ್ವಾಗತಕಾರರಾದ ಮಂಜುನಾಥ್.ಕೆ.ಆರ್ ಅವರಿಗೆ ಕರ್ನಾಟಕ ಸುಮನ ಸಾಧಕ ಪ್ರಶಸ್ತಿ 2026 ನೀಡಿ ಗೌರವಿಸಲಾಯಿತು. ಕರ್ನಾಟಕ ಸರ್ಕಾರದ ಶಿಷ್ಟಾಚಾರ ಇಲಾಖೆಯಲ್ಲಿ ಮಂಜುನಾಥ್.ಕೆ.ಆರ್ ಅವರು 33 ವರ್ಷಗಳ ಕಾಲ ಸಲ್ಲಿಸಿದ ಪ್ರಾಮಾಣಿಕ ಸೇವೆಯನ್ನು ಪರಿಗಣಿಸಿ ಕರ್ನಾಟಕ ಸುಮನ ಸಾಧಕ ಪ್ರಶಸ್ತಿ 2026 ನೀಡಿ ಗೌರವಿಸಲಾಗಿದೆ.

# 14ರೊಳಗೆ ಅಂಬೇಡ್ಕರ್ ಪ್ರತಿಮೆ ಅನಾವರಣಕ್ಕೆ ಪ್ರಯತ್ನ

ದೇವನಹಳ್ಳಿ

ದೇವನಹಳ್ಳಿ ತಾಲ್ಲೂಕಿನ ಜಿಲ್ಲಾ ಪಂಚಾಯತ್ ಸಭಾಂಗಣ, ಜಿಲ್ಲಾಡಳಿತ ಭವನದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನ ರಾಂ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ, ಅವರ ಜಯಂತಿ ಆಚರಣೆ ಸಂಬಂಧ ಪೂರ್ವಭಾವಿ ಸಭೆ ನಡೆಸಲಾಯಿತು.

ದಿನಾಂಕ ಏಪ್ರಿಲ್ 5ರಂದು ನಡೆಯಲಿರುವ ಡಾ. ಬಾಬು ಜಗಜೀವನ ರಾಂ ಅವರ 119ನೇ ಜಯಂತಿ ಹಾಗೂ ಏಪ್ರಿಲ್ 14ರಂದು ನಡೆಯಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಮತ್ತು ಗೌರವಯುತವಾಗಿ ಆಚರಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಎರಡೂ ಮಹನೀಯರ ಆದರ್ಶಗಳು, ಸಮಾಜಮುಖಿ ಚಿಂತನೆಗಳು ಹಾಗೂ ಸಮಾನತೆಗಾಗಿ ಅವರು ನೀಡಿದ ಮಹತ್ವದ ಕೊಡುಗೆಗಳನ್ನು ಸ್ಮರಿಸಲಾಯಿತು.



ಸಾರ್ವಜನಿಕರ ಪಾಲ್ಗೊಳ್ಳುವಿಕೆಯಿಂದ ಜಯಂತಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸುವ ಕುರಿತು ಅಧಿಕಾರಿಗಳು ಮತ್ತು ಮುಖಂಡರು ಅಭಿಪ್ರಾಯ ಹಂಚಿಕೊಂಡರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ನಿರ್ಮಾಣವಾಗಿರುವ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಯ ಅನಾವರಣ ಶೀಘ್ರದಲ್ಲೇ ನಡೆಯಲಿದ್ದು, ಮುಖ್ಯಮಂತ್ರಿ ಅವರಿಂದಲೇ ಉದ್ಘಾಟನೆ ಮಾಡಬೇಕು ಎಂಬ ಬೇಡಿಕೆ ಹಿನ್ನೆಲೆಯಲ್ಲಿ ಈಗಾಗಲೇ ಮುಖ್ಯಮಂತ್ರಿ ಅವರೊಂದಿಗೆ ಮಾತುಕತೆ ನಡೆಸಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಈ ಕುರಿತು ಮತ್ತೊಮ್ಮೆ ಚರ್ಚಿಸಿ ದಿನಾಂಕ ನಿಗದಿಪಡಿಸಲಾಗುವುದು. ಸಾಧ್ಯವಾದರೆ ಏಪ್ರಿಲ್ 14ರೊಳಗೆ ಪ್ರತಿಮೆ ಲೋಕಾರ್ಪಣೆಗೊಳಿಸಲು ಎಲ್ಲಾ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಲಾಯಿತು.

ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ, ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಿವಕುಮಾರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಪ್ರೇಮ, ಡಿವೈಎಸ್ಪಿ ಪಾಂಡುರಂಗ, ದೇವನಹಳ್ಳಿ ತಹಶೀಲ್ದಾರ್ ಅನಿಲ್, ಇಒ ಶ್ರೀನಾಥ್ ಗೌಡ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಕೆಎಸ್‌ಆರ್‌ಟಿಸಿಗೆ ಕೇರಳ ಲೀಡರ್‌ಶಿಪ್ ಪ್ರಶಸ್ತಿ ಪ್ರದಾನ




ಬೆಂಗಳೂರು

ಹೆಣ್ಣುಮಕ್ಕಳು ಯಾವುದೇ ಕ್ಷೇತ್ರದಲ್ಲಿ ನಿಷ್ಠೆಯಿಂದ ಕೆಲಸ ಮಾಡಬಲ್ಲರು ಎನ್ನುವುದನ್ನು ಕೆಎಸ್‌ಆರ್‌ಟಿಸಿಯಲ್ಲಿ ಕಾರ್ಯನಿರ್ವಹಿಸುವ ಕರ್ನಾಟಕದ ಇಬ್ಬರು ಮಹಿಳೆಯರು ನಿರೂಪಿಸಿದ್ದಾರೆ. ಹೀಗಾಗಿ ಇವರಿಗೆ ವಿಶ್ವ ಹೆಚ್ ಆರ್ ಡಿ ಕಾಂಗ್ರೆಸ್ ಪ್ರಶಸ್ತಿಯ ಅತ್ಯುತ್ತಮ ತರಬೇತಿ ಮತ್ತು ಸಂಘಟನಾ ಅಭಿವೃದ್ಧಿಯ ವರ್ಗದಲ್ಲಿ ‘ಕೇರಳ ಲೀಡರ್ ಶಿಪ್ ಪ್ರಶಸ್ತಿ–2026 ಲಭಿಸಿದೆ.

ಕೊಚ್ಚಿಯಲ್ಲಿ ನಡೆದ ಸಮಾರಂಭದಲ್ಲಿ ಕ್ಯಾಪ್ಟನ ಕಾಲೇಜ್ ಆಫ್ ಶಿಫ್ ಟೆಕ್ನಾಲಜಿ ನಿರ್ದೇಶಕ ಎಸ್.ಟಿ.ಶ್ರೀಧರನ್ ನಿಗಮಕ್ಕೆ ಪ್ರಶಸ್ತಿ ಪ್ರದಾನ ಮಾಡಿದ್ದಾರೆ. ನಿಗಮದ ಪರವಾಗಿ ಕೆ ಎಸ್ ಆರ್ ಟಿ ಸಿ ಮಂಡಳಿ ಕಾರ್ಯದರ್ಶಿ ಹಾಗೂ ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ.ಟಿ.ಎಸ್.ಲತಾ ಮತ್ತು ಹಾಸನ ತರಬೇತಿ ಕೇಂದ್ರದ ಪ್ರಾಂಶುಪಾಲೆ ಎ.ಎಸ್ ಗೀತಾಂಜಲಿ ಅವರು ಈ ಪ್ರಶಸ್ತಿ ಸ್ವೀಕರಿಸಿದ್ದಾರೆ.

ಕೆಎಸ್‌ಆರ್‌ಟಿಸಿ ಹಮ್ಮಿಕೊಂಡಿರುವ ಉತ್ತಮ ತರಬೇತಿ ಕಾರ್ಯಕ್ರಮಗಳಿಗೆ ‘ಸಂಘಟನಾ ಅಭಿವೃದ್ಧಿಯಲ್ಲಿ ಅತ್ಯುತ್ತಮ ತರಬೇತಿ’ ವರ್ಗದಡಿ ನಿಗಮವು ತನ್ನ ವ್ಯಾಪ್ತಿಯಲ್ಲಿನ ತರಬೇತಿ ಕೇಂದ್ರಗಳಲ್ಲಿ ವಿವಿಧ ಮಾದರಿಯ ತರಬೇತಿ ಕಾರ್ಯಕ್ರಮಗಳನ್ನು ನಡೆಸಿತ್ತು. ಅದಕ್ಕಾಗಿ ವಿಶ್ವ ಎಚ್ ಆರ್ ಡಿ ಕಾಂಗ್ರೆಸ್ ಪ್ರಶಸ್ತಿಯ ಅತ್ಯುತ್ತಮ ತರಬೇತಿ ಮತ್ತು ಸಂಘಟನಾ



ಸಾದಹಳ್ಳಿ ಗ್ರಾಮದ ಶ್ರೀ ಸೀತಾರಾಮ ಮಂದಿರದಲ್ಲಿ ಶೃಂಗೇರಿ ಶಾರದಾ ಪೀಠದ ಪೂಜ್ಯ ಶ್ರೀ ಶ್ರೀ ವಿಧುಶೇಖರ ಭಾರತಿ ಮಹಾಸ್ವಾಮಿಗಳಿಂದ ಸಚಿವ ಕೆ.ಎಚ್. ಮುನಿಯಪ್ಪ ಅವರು ಆಶೀರ್ವಾದ ಪಡೆದರು. ರಾಜ್ಯದ ಹಾಗೂ ದೇವನಹಳ್ಳಿ ಕ್ಷೇತ್ರದ ಪ್ರತಿಯೊಂದೂ ಕುಟುಂಬದ ಆರೋಗ್ಯ ಹಾಗೂ ಯೋಗಕ್ಷೇಮ ಉತ್ತಮವಾಗಿರಲಿ ರಾಜ್ಯಕ್ಕೆ ಒಳಿತಾಗಲಿ ಎಂದು ಪ್ರಾರ್ಥಿಸಿದರು.

# ಜಮೀರ್ ಅಹಮದ್ ಖಾನ್‌ಗೆ ಎಐಸಿಸಿ ಮಟ್ಟದಲ್ಲಿ ಸ್ಥಾನಮಾನ

ಬೆಂಗಳೂರು

ಕೇರಳ ವಿಧಾನ ಸಭೆ ಚುನಾವಣೆ ಸ್ಟಾರ್ ಪ್ರಚಾರಕರಾಗಿ ಹತ್ತು ದಿನಗಳಿಂದ ಪ್ರಚಾರ ನಡೆಸುತ್ತಿರುವ ಸಚಿವ ಜಮೀರ್ ಅಹಮದ್ ಖಾನ್ ಅವರಿಗೆ ಎಐಸಿಸಿ ಮಟ್ಟದಲ್ಲಿ ಮಹತ್ವದ ಸ್ಥಾನಮಾನ ದೊರೆತಿದೆ. ಎಐಸಿಸಿ ಅಲ್ಪಸಂಖ್ಯಾತರ ಘಟಕದ ಸಲಹಾ ಪರಿಷತ್ ನಲ್ಲಿ ಜಮೀರ್ ಅಹಮದ್ ಖಾನ್ ಅವರಿಗೆ ಸ್ಥಾನ ದೊರೆತಿದೆ.



ತಾರೀಖ್ ಅನ್ವರ್, ಸಲ್ಮಾನ್ ಖುರ್ಶಿದ್, ಅಭಿಷೇಕ್ ಮನು ಸಿಂಗ್ವಿ, ಇಮ್ರಾನ್ ಪ್ರತಾಪ್ ಗಡಿ ಅವರು ಈ ಪರಿಷತ್ ನಲ್ಲಿದ್ದಾರೆ.

# ಪ್ರತಿ ಹಳ್ಳಿಗೆ 5ರಿಂದ 10 ಲಕ್ಷ ಹಣ ಹಂಚಿಕೆ?

ಬೆಂಗಳೂರು

ರಾಹುಲ್ ಗಾಂಧಿಯವರು ಅಷ್ಟು ಕೆಟ್ಟದಾಗಿ ಮಾತನಾಡುವುದಕ್ಕೂ ಮೋದಿಜೀ ಕಾರಣರೇ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಪ್ರಶ್ನಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ “ಜಗನ್ನಾಥ ಭವನ”ದಲ್ಲಿ ಇಂದು ಅವರು ಮಾಧ್ಯಮಗಳ ಜೊತೆ ಮಾತನಾಡಿ ಪ್ರಶ್ನೆಗೆ ಉತ್ತರ ನೀಡಿದರು. ಮಧ್ಯ ಪ್ರಾಚ್ಯದಲ್ಲಿ ಯುದ್ಧ ಪ್ರಾರಂಭವಾಗಿದೆ. ಕಚ್ಚಾ ತೈಲಕ್ಕಾಗಿ ನಾವು ಗಲ್ಫ್ ರಾಷ್ಟಗಳನ್ನು ಅವಲಂಬಿಸಿದ್ದೇವೆ. ಅದರಿಂದ ಅವುಗಳ ಬೆಲೆಯಲ್ಲಿ ಏರಿಕೆ ಆಗಬಹುದು. ಕಾಂಗ್ರೆಸ್ಸಿನವರು ಗ್ಯಾರಂಟಿ ಮುಂದಿಟ್ಟು ಬೆಲೆ ಏರಿಸುತ್ತಲೇ ಬಂದಿದ್ದಾರೆ. ಇವರ ಜನವಿರೋಧಿ ನೀತಿಗಳಿಗೆ ಬಿಜೆಪಿಯನ್ನು ಟ್ಯಾಗ್ ಮಾಡುವುದು ಸರಿಯಲ್ಲ ಎಂದು ತಿಳಿಸಿದರು.

# ನಗೆಮಲ್ಲಿಗೆಯ ಮೂರ್ಖರ ದಿನಾಚರಣೆ

ತುಮಕೂರು

ಕಳೆದ 31 ವರ್ಷಗಳಿಂದ ಪ್ರತಿ ಏಪ್ರಿಲ್ 1ರಂದು ಮೂರ್ಖರ ದಿನಾಚರಣೆ ಮೂಲಕ ಸದಭಿರುಚಿ ಹಾಸ್ಯ, ರಂಜನೆ ಕಾರ್ಯಕ್ರಮಗಳನ್ನು ಏರ್ಪಡಿಸಿ ಜನಪ್ರೀತಿಗಳಿಸಿರುವ ನಗೆಮಲ್ಲಿಗೆ ಬಳಗ ಈ ಬಾರಿ ಬುಧವಾರ ನಗರದ ಕನ್ನಡ ಭವನದಲ್ಲಿ ಆಯೋಜಿಸಿದ್ದ ಹಾಸ್ಯಪ್ರಧಾನ ಕಾರ್ಯಕ್ರಮ ಯಶಸ್ವಿಯಾಯಿತು.

ನಗೆಮಲ್ಲಿಗೆ ಬಳಗ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ, ಯೋಗಗುರು ಎಂ.ಕೆ. ನಾಗರಾಜರಾವ್ ಅವರಿಗೆ ಪರಿಷತ್ತನಿಂದ 5 ಸಾವಿರ ರೂ. ನಗದು ಒಳಗೊಂಡ ಗೌಡನಕಟ್ಟೆ ತಿಮ್ಮಯ್ಯ ದತ್ತಿ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಹಿರಿಯ ಹಾಸ್ಯ ಸಾಹಿತಿ ದಿ. ಗೌಡನಕಟ್ಟೆ ತಿಮ್ಮಯ್ಯನವರು ಸಂಸ್ಥಾಪಿಸಿದ ನಗೆಮಲ್ಲಿಗೆ ಸಂಸ್ಥೆಯ ಕಾರ್ಯಕ್ರಮಗಳನ್ನು ನಗೆಮಲ್ಲಿಗೆ ಬಳಗ ಮುಂದುವರೆಸಿಕೊಂಡು ಹೋಗುತ್ತಿದೆ. ಬಳಗದ ಅಧ್ಯಕ್ಷೆ ಬಾ.ಹ. ರಮಾಕುಮಾರಿ ಅವರ ಅಧ್ಯಕ್ಷತೆಯಲ್ಲಿ ಬುಧವಾರ ಸಂಜೆ 31ನೇ ವರ್ಷದ ಮೂರ್ಖರ ದಿನಾಚರಣೆ, ಗೌ.ತಿ. ದತ್ತಿ ಪ್ರಶಸ್ತಿ ಪ್ರದಾನ ಹಾಗೂ ಹಾಸ್ಯಗೋಷ್ಠಿ ಹಮ್ಮಿಕೊಳ್ಳಲಾಗಿತ್ತು.

ನಗೆಬರಹಗಾರ ಮಣ್ಣೆ ರಾಜು ಕಾರ್ಯಕ್ರಮ ಉದ್ಘಾಟಿಸಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್.ಸಿದ್ಧಲಿಂಗಪ್ಪ ಅವರು ಎಂ.ಕೆ. ನಾಗರಾಜರಾವ್ ಅವರಿಗೆ ದತ್ತಿ ಪ್ರಶಸ್ತಿ ಪ್ರದಾನ ಮಾಡಿದರು. ನಂತರ ಮಾತನಾಡಿದ ಕೆ.ಎಸ್. ಸಿದ್ಧಲಿಂಗಪ್ಪ, ಸಾಹಿತ್ಯ ಪರಿಷತ್ತಿನ ಸಾಹಿತ್ಯ ಚಟುವಟಿಕೆಗಳಿಗೆ ಸಹಕಾರಿಯಾಗಿ ದತ್ತಿನಿಧಿ ಸ್ಥಾಪನೆ ಮಾಡುವುದು ಸ್ವಾಗತಾರ್ಹ. ನಗೆಮಲ್ಲಿಗೆ ಬಳಗದವರು ಪರಿಷತ್ತಿನಲ್ಲಿ ಗೌಡನಕಟ್ಟೆ ತಿಮ್ಮಯ್ಯನವರ ಹೆಸರಿನಲ್ಲಿ ದತ್ತಿನಿಧಿ ಸ್ಥಾಪಿಸಿ ಅವರ ಸ್ಮರಣೆ ಹಾಗೂ ಹಾಸ್ಯ ಕಾರ್ಯಕ್ರಮಗಳು ಪ್ರತಿ ವರ್ಷ ನಡೆದುಕೊಂಡು ಹೋಗಲು ನೆರವಾಗಿದ್ದಾರೆ. ಸಾಹಿತ್ಯ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಪೂರಕವಾಗಿ ಸಾರ್ವಜನಿಕರು ಪರಿಷತ್ತಿನಲ್ಲಿ ದತ್ತಿ ಸ್ಥಾಪನೆ ಮಾಡಬೇಕು ಎಂದು ಮನವಿ ಮಾಡಿದರು.

ಹಾಸ್ಯ ಸಾಹಿತಿ ವೈ.ವಿ. ಗುಂಡೂರಾವ್ ಅವರು ತಮ್ಮ ಹಾಸ್ಯ ಭಾಷಣದ ಮೂಲಕ ಸಭಿಕರನ್ನು ರಂಜಿಸಿದರು. ಕ್ರಿಯಾಶೀಲತೆ ಬೆಳೆಸಿಕೊಂಡು ದೈನಂದಿನ ಬದುಕಿನಲ್ಲಿ ಹಾಸ್ಯ ಹುಡುಕಿ ಆನಂದಿಸಬೇಕು. ಎಲ್ಲವನ್ನೂ ವಕ್ರ ದೃಷ್ಟಿಯಲ್ಲಿ ನೋಡಿದರೆ ಹಾಸ್ಯ ಹುಟ್ಟುತ್ತದೆ. ಆದರೆ ಬದುಕನ್ನು ವಕ್ರವಾಗಿ ನೋಡಿದರೆ ತತ್ವಶಾಸ್ತ್ರ ಹುಟ್ಟುತ್ತದೆ ಎಂದು ಹೇಳಿದರು. ಹಾಸ್ಯ ಮನೋಭಾವ, ಹೊಂದಾಣಿಕೆ ಮನಸ್ಥಿತಿ ಬೆಳೆಸಿಕೊಂಡರೆ ಜೀವನದಲ್ಲಿ ಶಾಂತಿ, ನೆಮ್ಮದಿ, ಆರೋಗ್ಯದಿಂದ ಬಾಳಲು ಸಾಧ್ಯವಿದೆ ಎಂದ ಅವರು, ಅನೇಕ ಹಾಸ್ಯ ಪ್ರಸಂಗ, ಅಣಕವಾಡುಗಳನ್ನು ಹೇಳಿ ಸುಮಾರು ಒಂದೂವರೆ ಗಂಟೆ ಕಾಲ ಪ್ರೇಕ್ಷಕರನ್ನು ನಗೆಗಡಲಲ್ಲಿ ತೇಲಿಸಿ ಹಗುರಾಗಿಸಿದರು. ಇದಕ್ಕೂ ಮೊದಲು ನಡೆದ ಹಾಸ್ಯಗೋಷ್ಠಿಯಲ್ಲಿ ಕಲಾ ಮಂಜುನಾಥ್, ಜಗನ್ನಾಥ್, ಎಲ್.ಆರ್. ಚಂದ್ರಶೇಖರ್, ಓ.ಕೆ. ವೀಣಾ ಚೆನ್ನಬಸಪ್ಪ, ಶೈಲಜಾ ಬಾಬು, ಸಿಹಿಜೀವಿ ವೆಂಕಟೇಶ್ವರ, ಮಾರುತೇಶ್ ಕಸಾಪುರ, ದೊಂಬರನಹಳ್ಳಿ ನಾಗರಾಜ್ ಅವರು ಪ್ರೇಕ್ಷಕರನ್ನು ರಂಜಿಸಿದರು.

# ರೈತರಿಗೆ ಬಂಪರ್ ಕೊಡುಗೆ!

ಕನಕಪುರ



"ರೈತರ ಅಭ್ಯುದಯವೇ ನಮ್ಮ ಒಕ್ಕೂಟದ ಮೂಲ ಉದ್ದೇಶ. ಹೀಗಾಗಿ ಬಮೂಲ್ ಗಳಿಸಿರುವ ಸುಮಾರು 60 ಕೋಟಿ ರೂಪಾಯಿ ಲಾಭಾಂಶದಲ್ಲಿ ರೈತರಿಗೆ ಪ್ರತಿ ಲೀಟರ್‌ಗೆ ಒಂದು ರೂಪಾಯಿಯಂತೆ ಸಹಾಯಧನ ನೀಡಲಾಗುವುದು," ಎಂದು ಬೆಂಗಳೂರು ಹಾಲು ಒಕ್ಕೂಟದ (ಬಮೂಲ್) ಅಧ್ಯಕ್ಷ ಡಿ.ಕೆ. ಸುರೇಶ್ ಘೋಷಿಸಿದರು.

ನಗರದ ಹೊರವಲಯದ ಶಿವನಹಳ್ಳಿ ಬಳಿಯ ಬಮೂಲ್ ಮೆಗಾ ಡೈರಿ ಆವರಣದಲ್ಲಿ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಹಾಗೂ ಉಡುಗೊರೆ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಒಕ್ಕೂಟದ ಪ್ರಗತಿಯ ಕುರಿತು ಮಾತನಾಡಿದ ಡಿ.ಕೆ. ಸುರೇಶ್, "ಸುಮಾರು 14.5 ಕೋಟಿ ರೂಪಾಯಿ ನಷ್ಟದಲ್ಲಿದ್ದ ಒಕ್ಕೂಟವನ್ನು ಕೇವಲ 9 ತಿಂಗಳಲ್ಲಿ 60 ಕೋಟಿ ರೂಪಾಯಿ ಲಾಭದತ್ತ ತರಲಾಗಿದೆ. ಇದಕ್ಕೆ ಆಡಳಿತ ಮಂಡಳಿ, ಸಿಬ್ಬಂದಿ ಮತ್ತು ರೈತರ ಶ್ರಮವೇ ಕಾರಣ. ಈ ಲಾಭದ ಹಣವನ್ನು ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು ಹಾಗೂ ಕಾರ್ಮಿಕರಿಗೆ ಉಡುಗೊರೆ ರೂಪದಲ್ಲಿ ನೀಡಲಾಗುವುದು," ಎಂದು ತಿಳಿಸಿದರು.

ಉದ್ಯೋಗದಲ್ಲಿ ರೈತರ ಮಕ್ಕಳಿಗೆ ಮೀಸಲಾತಿ:

ಜಾಗತಿಕ ಉದ್ಯೋಗ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಒಕ್ಕೂಟದ ನೇಮಕಾತಿಯಲ್ಲಿ ಮಹತ್ವದ ಬದಲಾವಣೆ ತರುವುದಾಗಿ ಅವರು ಭರವಸೆ ನೀಡಿದರು.

ಶೇ. 30: ರೈತರ ಮಕ್ಕಳಿಗೆ ಮೀಸಲಾತಿ.

ಶೇ. 10: ಸಿಬ್ಬಂದಿಯ ಮಕ್ಕಳಿಗೆ.

ಶೇ. 5: ಕಾರ್ಮಿಕರು ಹಾಗೂ ಡೀಲರ್‌ಗಳಿಗೆ ಮೀಸಲಿಡಲಾಗುವುದು.

ಶಿಕ್ಷಣಕ್ಕೆ ಒತ್ತು: 10 ಪಬ್ಲಿಕ್ ಶಾಲೆಗಳ ಸ್ಥಾಪನೆ:

"ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮಾರ್ಗದರ್ಶನದಲ್ಲಿ ತಾಲೂಕಿನಾದ್ಯಂತ 10 ಪಬ್ಲಿಕ್ ಶಾಲೆಗಳನ್ನು ತೆರೆಯಲಾಗಿದೆ. ಗ್ರಾಮೀಣ ಭಾಗದ ಮಕ್ಕಳು ಗುಣಮಟ್ಟದ ಶಿಕ್ಷಣ ಪಡೆದು ಮೊಬೈಲ್ ಗೀಳಿನಿಂದ ಹೊರಬರಬೇಕು," ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಇದೇ ಸಂದರ್ಭದಲ್ಲಿ ಸುಮಾರು 500 ವಿದ್ಯಾರ್ಥಿಗಳು, 900 ಕಾರ್ಮಿಕರು ಹಾಗೂ 1800 ಹೊರಗುತ್ತಿಗೆ ನೌಕರರಿಗೆ ಉಡುಗೊರೆಗಳನ್ನು ವಿತರಿಸಲಾಯಿತು.

ಬಮೂಲ್ ಒಕ್ಕೂಟ ರೈತರ ಸ್ವತ್ತೇ ಹೊರತು ಯಾವ ರಾಜಕಾರಣಿಯದ್ದಲ್ಲ. ಈ ನಾಡಿನ ಶಕ್ತಿಯಾಗಿರುವ ರೈತರ ಬದುಕನ್ನು ಹಸನು ಮಾಡುವುದು ನಮ್ಮೆಲ್ಲರ ಕರ್ತವ್ಯ ಎಂದು ಬಮೂಲ್ ಅಧ್ಯಕ್ಷರಾದ ಡಿ.ಕೆ. ಸುರೇಶ್ ಹೇಳಿದರು.

# ಮದ್ಯಕ್ಕೆ ಹಣ ನೀಡದ ಅಳಿಯನನ್ನೇ ಕೊಂದ ಮಾವನಿಗೆ ಜೀವಾವಧಿ ಶಿಕ್ಷೆ

ಕಾರವಾರ

ಮದ್ಯ ಸೇವಿಸಲು ಹಣ ನೀಡಲಿಲ್ಲ ಹಾಗೂ ಮನೆಯಿಂದ ಹೊರಹಾಕಬೇಕು ಎಂಬ ಕ್ಷುಲ್ಲಕ ಕಾರಣಕ್ಕಾಗಿ ತನ್ನ ಸ್ವಂತ ಮನೆ ಅಳಿಯನನ್ನೇ ತಲೆಗೆ ಬಲವಾಗಿ ಹೊಡೆದು ಕೊಲೆ ಮಾಡಿದ ಆರೋಪಿಗೆ ಶಿರಸಿಯ ನ್ಯಾಯಾಲಯವು ಜೀವಾವಧಿ ಶಿಕ್ಷೆ ಹಾಗೂ 10,000 ರೂ. ದಂಡ ವಿಧಿಸಿ ತೀರ್ಪು ನೀಡಿದೆ.

ಶಿರಸಿ ತಾಲೂಕಿನ ಮಳಲಿಯಲ್ಲಿ ವಾಸವಿದ್ದ ವೆಂಕಟರಮಣ ಗಣಪ ಗೌಡ ಎಂಬಾತ ತನ್ನ ಮನೆ ಅಳಿಯನಾದ ಮಂಜುನಾಥ ರಾಮಾ ಗೌಡ (40 ವರ್ಷ) ಎಂಬಾತನನ್ನು ಮನೆಯಿಂದ ಓಡಿಸಬೇಕು ಎಂಬ ಉದ್ದೇಶ ಹೊಂದಿದ್ದನು. ಅಲ್ಲದೆ ತನಗೆ ಸಾರಾಯಿ ಕುಡಿಯಲು ಹಣ ಕೊಡುತ್ತಿಲ್ಲ ಎಂಬ ದ್ವೇಷದಿಂದ, ಕಳೆದ 2024ರ ಮೇ 2 ರಂದು ಮಧ್ಯಾಹ್ನ 1.10 ರಿಂದ 1.30 ರ ನಡುವಿನ ಅವಧಿಯಲ್ಲಿ ಮನೆಯವರು ಮದುವೆ ಕಾರ್ಯಕ್ರಮಕ್ಕೆ ಹೋಗಿದ್ದಾಗ ಈ ಕೃತ್ಯ ಎಸಗಿದ್ದಾನೆ. ಯಾರೂ ಇಲ್ಲದ ಸಮಯ ನೋಡಿ ಮಂಜುನಾಥ್ ಅವರ ತಲೆಗೆ ಕಟ್ಟಿಗೆಯ ಬಡಿಗೆಯಿಂದ ಬಲವಾಗಿ ಹೊಡೆದು ಸ್ಥಳದಲ್ಲೇ ಸಾಯುವಂತೆ ಮಾಡಿದ್ದನು.

# ಮಹನೀಯರ ಜಯಂತಿ ಪೂರ್ವಭಾವಿ ಸಭೆ: ಎಲ್ಲರ ಒಮ್ಮತಕ್ಕೆ ಸಚಿವರ ಮನ್ನಣೆ

ದೇವನಹಳ್ಳಿ



"ಡಾ. ಬಾಬು ಜಗಜೀವನ್ ರಾಮ್ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಗಳನ್ನು ಸಮಾಜದ ಎಲ್ಲಾ ಮುಖಂಡರ ಒಮ್ಮತದೊಂದಿಗೆ ಜಿಲ್ಲಾ ಮಟ್ಟದಲ್ಲಿ ಅತ್ಯಂತ ಅರ್ಥಪೂರ್ಣವಾಗಿ ಮತ್ತು ವಿಜೃಂಭಣೆಯಿಂದ ಆಚರಿಸಲಾಗುವುದು" ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶನಿವಾರ ನಡೆದ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯ ಆರಂಭದಲ್ಲಿ ಮಹನೀಯರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿದ ಸಚಿವರು, "ಏಪ್ರಿಲ್ 5 ರಂದು ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ್ ರಾಮ್ ಅವರ 119ನೇ ಜಯಂತಿ ಹಾಗೂ ಏಪ್ರಿಲ್ 14 ರಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಆಚರಿಸಲಾಗುತ್ತಿದೆ. ಈ ಮಹಾನ್ ನಾಯಕರ ಸಮಾನತೆಯ ಚಿಂತನೆಗಳು ಇಂದಿನ ಸಮಾಜಕ್ಕೆ ದಾರಿದೀಪವಾಗಿದ್ದು, ಅವರ ಗೌರವಕ್ಕೆ ಚ್ಯುತಿ ಬರದಂತೆ ಕಾರ್ಯಕ್ರಮ ರೂಪಿಸಬೇಕು," ಎಂದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಅಂಬೇಡ್ಕರ್ ಪುತ್ಥಳಿಯನ್ನು ಮುಖ್ಯಮಂತ್ರಿಗಳ ಅಮೃತಹಸ್ತದಿಂದ ಉದ್ಘಾಟಿಸಬೇಕೆಂಬ ಮುಖಂಡರ ಬೇಡಿಕೆಗೆ ಸ್ಪಂದಿಸಿದ ಸಚಿವರು, "ಈಗಾಗಲೇ ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿದ್ದೇನೆ. ಮತ್ತೊಮ್ಮೆ ಮಾತನಾಡಿ ದಿನಾಂಕ ನಿಗದಿಪಡಿಸಲಾಗುವುದು. ಏಪ್ರಿಲ್ 14ರ ಒಳಗಾಗಿಯೇ ಪುತ್ಥಳಿ ಲೋಕಾರ್ಪಣೆಗೊಳಿಸಲು ಎಲ್ಲಾ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು," ಎಂದು ಭರವಸೆ ನೀಡಿದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ, ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಜಿ.ಪಂ. ಉಪ ಕಾರ್ಯದರ್ಶಿ ಶಿವಕುಮಾರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಪ್ರೇಮ, ಡಿವೈಎಸ್ಪಿ ಪಾಂಡುರಂಗ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಮಾಜದ ಗಣ್ಯ ಮುಖಂಡರು ಭಾಗವಹಿಸಿದ್ದರು.

# ಮನೆಗಳ್ಳತನ: ಆರೋಪಿ ಸೆರೆ

ಕನಕಪುರ

ತಾಲೂಕಿನ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯ ಶಿವನಹಳ್ಳಿ ಗ್ರಾಮದಲ್ಲಿ ನಡೆದಿದ್ದ ಕಳ್ಳತನ ಪ್ರಕರಣವನ್ನು ಪೊಲೀಸರು ಯಶಸ್ವಿಯಾಗಿ ಭೇದಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಕಾನೂನು ಸಂಘರ್ಷಕ್ಕೊಳಗಾದ ಬಾಲಕನನ್ನು ವಶಕ್ಕೆ ಪಡೆಯಲಾಗಿದ್ದು, ಕಳವು ಮಾಡಲಾಗಿದ್ದ ಸ್ವತ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಶಿವನಹಳ್ಳಿ ಗ್ರಾಮದ ಪೈಪ್‌ಲೈನ್ ರಸ್ತೆಯಲ್ಲಿರುವ ಮನೆಯೊಂದರ ಬೀಗ ಮುರಿದು ಒಳನುಗ್ಗಿದ್ದ ಕಳ್ಳರು, ಮನೆಯಲ್ಲಿದ್ದ ಚಿನ್ನದ ಆಭರಣಗಳು, ನಗದು ಹಾಗೂ ಬೆಲೆಬಾಳುವ ರೇಷ್ಮೆ ಸೀರೆಗಳನ್ನು ದೋಚಿದ್ದರು. ಈ ಕುರಿತು ಮಾರ್ಚ್ 6, 2026 ರಂದು ಮನೆಯ ಮಾಲೀಕರು ನೀಡಿದ ದೂರಿನನ್ವಯ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು.

ಪ್ರಕರಣದ ತನಿಖೆ ಕೈಗೆತ್ತಿಕೊಂಡ ಆರಕ್ಷಕ ಸಿಬ್ಬಂದಿ (ಮೊ.ಸಂ: 30/2026, ಕಲಂ: 305, 331 (4) ಬಿಎನ್‌ಎಸ್ ಅಡಿ), ಕ್ಷಿಪ್ರ ಕಾರ್ಯಾಚರಣೆ ನಡೆಸಿ ಕೃತ್ಯದಲ್ಲಿ ಭಾಗಿಯಾಗಿದ್ದ ಅಪ್ರಾಪ್ತ ಬಾಲಕನನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ. ಸದ್ಯ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ. ಗ್ರಾಮೀಣ ಭಾಗದಲ್ಲಿ ಹಗಲು ಹೊತ್ತಿನಲ್ಲೇ ನಡೆಯುತ್ತಿರುವ ಇಂತಹ ಕೃತ್ಯಗಳ ಬಗ್ಗೆ ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ಪೊಲೀಸರು ಮನವಿ ಮಾಡಿದ್ದಾರೆ.

# ಕೈವಾರದಲ್ಲಿ ಚೈತ್ರ ಹುಣ್ಣಿಮೆ ಸಡಗರ: ವೈಭವದ ರಥೋತ್ಸವ, ಗಿರಿಪ್ರದಕ್ಷಿಣೆ

ಕೈವಾರ

ಇಲ್ಲಿನ ಪ್ರಸಿದ್ಧ ಪುಣ್ಯಕ್ಷೇತ್ರ ಸದ್ಗುರು ಶ್ರೀ ಯೋಗಿನಾರೇಯಣ ಮಠದಲ್ಲಿ ಚೈತ್ರ ಮಾಸದ ಹುಣ್ಣಿಮೆಯ ಅಂಗವಾಗಿ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ಹಾಗೂ ರಥೋತ್ಸವವು ಅಪಾರ ಭಕ್ತ ಸಾಗರದ ನಡುವೆ ಅತ್ಯಂತ ವಿಜೃಂಭಣೆಯಿಂದ ನೆರವೇರಿತು.





ಹುಣ್ಣಿಮೆಯ ವಿಶೇಷ ಸಂದರ್ಭದಲ್ಲಿ ಶ್ರೀದೇವಿ, ಭೂದೇವಿ ಸಮೇತ ಶ್ರೀ ಅಮರನಾರೇಯಣಸ್ವಾಮಿ ಹಾಗೂ ಸದ್ಗುರು ಶ್ರೀ ಯೋಗಿನಾರೇಯಣ ತಾತಯ್ಯನವರ ಉತ್ಸವ ಮೂರ್ತಿಗಳಿಗೆ ವಿಶೇಷ ಅಭಿಷೇಕ ಮತ್ತು ಅಷ್ಟಾವಧಾನ ಸೇವೆಯನ್ನು ಸಲ್ಲಿಸಲಾಯಿತು. ಗರ್ಭಗುಡಿಯಲ್ಲಿನ ತಾತಯ್ಯನವರ ಮೂಲ ವಿಗ್ರಹಕ್ಕೆ ವಿವಿಧ ಬಗೆಯ ಪುಷ್ಪಗಳಿಂದ ಮನಮೋಹಕವಾಗಿ ಅಲಂಕರಿಸಲಾಗಿತ್ತು. ಮಹಾಮಂಗಳಾರತಿಯ ನಂತರ ನಡೆದ ರಥೋತ್ಸವದಲ್ಲಿ ಭಕ್ತಾಧಿಗಳು ಭಕ್ತಿಯಿಂದ ಪಾಲ್ಗೊಂಡರು.

ಸಾಂಸ್ಕೃತಿಕ ಕಾರ್ಯಕ್ರಮದ ಭಾಗವಾಗಿ ಶ್ರೀ ಯೋಗಿನಾರೇಯಣ ಸಂಕೀರ್ತನ ಯೋಜನೆಯ ಕಲಾವಿದರಿಂದ ನಾದಸುಧಾರಸ ಸಂಕೀರ್ತನೆ ಜರುಗಿತು. ಹುಣ್ಣಿಮೆಯ ಪ್ರಯುಕ್ತ ಮಠದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಖಂಡ ಸಂಕೀರ್ತನೆಯು ಭಕ್ತರ ಮನ ಸೆಳೆಯಿತು.

ಕ್ಷೇತ್ರದ ಸಮೀಪದ ಆಲಂಬಗಿರಿ ದೇವಾಲಯದ ಬೆಟ್ಟದ ತಪ್ಪಲಿನಲ್ಲಿ ಸಂಕೀರ್ತನಾ ಗಿರಿಪ್ರದಕ್ಷಿಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕೈವಾರ ಕ್ಷೇತ್ರದ ಧರ್ಮಾಧಿಕಾರಿಗಳಾದ ಡಾ. ಎಂ.ಆರ್. ಜಯರಾಮ್ ಅವರು ಸ್ವತಃ ಗಿರಿಪ್ರದಕ್ಷಿಣೆಯಲ್ಲಿ ಪಾಲ್ಗೊಂಡು ಭಕ್ತರಿಗೆ ಮಾರ್ಗದರ್ಶನ ನೀಡಿದರು. ಪ್ರಕೃತಿಯ ಮಡಲಿನಲ್ಲಿ ನಡೆದ ಈ ಗಿರಿಪ್ರದಕ್ಷಿಣೆಯಲ್ಲಿ ನೂರಾರು ಭಕ್ತರು ಗೋವಿಂದ ನಾಮಸ್ಮರಣೆ ಮಾಡುತ್ತಾ ಸಾಗಿದರು.

# ಸರ್ಕಾರಿ ಶಾಲೆಯ ಹೈಟೆಕ್ ಸೌಂದರ್ಯಕ್ಕೆ ಟೊಯೊಟಾ ಸಾಥ್: ಶಾಸಕ ಬಿ. ಸುರೇಶ್‌ಗೌಡ ಹರ್ಷ

ತುಮಕೂರು

ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಮುಖಪುಟವನ್ನೇ ಬದಲಿಸುವ ನಿಟ್ಟಿನಲ್ಲಿ ತುಮಕೂರು ಗ್ರಾಮಾಂತರ ಕ್ಷೇತ್ರದ ಶಾಸಕ ಬಿ. ಸುರೇಶ್ ಗೌಡ ಅವರು ದೊಡ್ಡ ಯಶಸ್ಸು ಕಂಡಿದ್ದಾರೆ. ಕ್ಷೇತ್ರದ ನಾಗವಲ್ಲಿ ಕೆಪಿಎಸ್ ಶಾಲೆಗೆ ಬೆಂಗಳೂರಿನ ಪ್ರತಿಷ್ಠಿತ ಟೊಯೊಟಾ ಕಿರ್ಲೊಸ್ಕರ್ ಕಂಪನಿಯು ತನ್ನ ಸಿಎಸ್‌ಆರ್ ನಿಧಿಯಡಿ 3 ಕೋಟಿ ರೂಪಾಯಿ ಅನುದಾನ ನೀಡಲು ಒಪ್ಪಿಗೆ ಸೂಚಿಸಿದೆ.



ಶಾಸಕರೊಂದಿಗೆ ಗುರುವಾರ ನಾಗವಲ್ಲಿ ಶಾಲೆಗೆ ಭೇಟಿ ನೀಡಿದ ಟೊಯೊಟಾ ಕಂಪನಿಯ ಜನರಲ್ ಮ್ಯಾನೇಜರ್ ಕಿರಣ್ ಹಾಗೂ ಮ್ಯಾನೇಜರ್‌ಗಳಾದ ಪ್ರಶಾಂತ್ ಮತ್ತು ರಮೇಶ್ ಅವರು ಶಾಲೆಯ ಪ್ರಗತಿಯನ್ನು ಕಂಡು ಮೆಚ್ಚುಗೆ ವ್ಯಕ್ತಪಡಿಸಿದರು. ಶಾಲೆಯ ಆವರಣದಲ್ಲಿ ಈಗಾಗಲೇ ಸರ್ಕಾರ ಹಾಗೂ ಶಾಸಕರ ನಿಧಿಯಿಂದ 3.5 ಕೋಟಿ ರೂ. ವೆಚ್ಚದಲ್ಲಿ 16 ಕೊಠಡಿಗಳ ನಿರ್ಮಾಣವಾಗುತ್ತಿದೆ. ಇದಕ್ಕೆ ಪೂರಕವಾಗಿ ಕಂಪನಿಯು ನೀಡಲಿರುವ 3 ಕೋಟಿ ರೂ. ಮೊತ್ತದಲ್ಲಿ ಶಾಲೆಗೆ ಹೈಟೆಕ್ ಸ್ಪರ್ಶ ನೀಡಲು ನಿರ್ಧರಿಸಲಾಗಿದೆ.

ಏನೆಲ್ಲಾ ಸೌಲಭ್ಯಗಳು ಸಿಗಲಿವೆ?

ಟೊಯೊಟಾ ನೆರವಿನಿಂದ ಶಾಲೆಯಲ್ಲಿ ಈ ಕೆಳಗಿನ ಮೂಲಸೌಕರ್ಯಗಳು ಸಜ್ಜಾಗಲಿವೆ.

12 ನೂತನ ಸುಸಜ್ಜಿತ ಕೊಠಡಿಗಳು.

ಆಧುನಿಕ ಕಂಪ್ಯೂಟರ್ ಲ್ಯಾಬ್ ಮತ್ತು ವಿಜ್ಞಾನ ಪ್ರಯೋಗಾಲಯದ ಸಾಮಗ್ರಿಗಳು.

ಸಮೃದ್ಧ ಗ್ರಂಥಾಲಯಕ್ಕೆ ಬೇಕಾದ ಪುಸ್ತಕಗಳು.

ಬೋಧನೆಗೆ ಅನುಕೂಲವಾಗಲು ಶಿಕ್ಷಕರಿಗೆ ಲ್ಯಾಪ್‌ಟ್ಯಾಪ್‌ಗಳು.

ಎಲ್‌ಕೆಜಿ ಮತ್ತು ಯುಕೆಜಿ ಪುಟ್ಟ ಮಕ್ಕಳಿಗೆ ಆಟವಾಡಲು ಆಟಿಕೆ ಸಾಮಾನುಗಳು. ನಾಗವಲ್ಲಿ ಶಾಲೆಯನ್ನು ರಾಜ್ಯದಲ್ಲೇ ಮಾದರಿ ಶಾಲೆಯನ್ನಾಗಿ ಮಾಡುವುದು ನನ್ನ ಕನಸು. ಬಡವರ ಮಕ್ಕಳು ಖಾಸಗಿ ಶಾಲೆಗಳಿಗಿಂತಲೂ ಉತ್ತಮ ಸೌಲಭ್ಯದೊಂದಿಗೆ ಶಿಕ್ಷಣ ಪಡೆದು ಜಗತ್ತಿನಾದ್ಯಂತ ಆತ್ಮಗೌರವದಿಂದ ಬದುಕಬೇಕು ಎನ್ನುವುದೇ ನನ್ನ ಗುರಿಯಾಗಿದೆ ಎಂದು ಶಾಸಕ ಬಿ. ಸುರೇಶ್ ಗೌಡ ತಿಳಿಸಿದರು. ಕ್ಷೇತ್ರದ ಶಿಕ್ಷಣ ಕ್ರಾಂತಿಗೆ ಕೇವಲ ಟೊಯೊಟಾ ಮಾತ್ರವಲ್ಲದೆ, ಇನ್‌ಕ್ಯಾಪ್ (ಫಿನ್ಲೆಂಡ್), ಬಾಷ್, ಜಪಾನ್‌ನ ಟೀಮ್ಯಾಕ್, ಸಾಯಿ ಗಾರ್ಮೆಂಟ್ಸ್, ಕಾಪ್‌ರಾಡ್, ಟಿವಿಎಸ್ ಮತ್ತು ಜಿಂದಾಲ್ ಅಲ್ಯುಮಿನಿಯಂ ಅಂತಹ ಕಂಪನಿಗಳು ಕೂಡ ಈಗಾಗಲೇ ಕೈಜೋಡಿಸಿವೆ ಎಂದು ಶಾಸಕರು ಸ್ಮರಿಸಿದ್ದಾರೆ. ನಾಗವಲ್ಲಿ ಶಾಲೆಯ ಜೊತೆಗೆ ಕಂಪನಿಯ ಅಧಿಕಾರಿಗಳು ಕ್ಷೇತ್ರದಲ್ಲಿ ಈಗಾಗಲೇ ಅಭಿವೃದ್ಧಿ ಹೊಂದುತ್ತಿರುವ ಮಸ್ಕಲ್, ಹೊನ್ನುಡಿಕೆ ಹಾಗೂ ಹೊನಸಗೆರೆ ಶಾಲೆಗಳಿಗೂ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಟೊಯೊಟಾ ಕಂಪನಿಯ ಈ ಉದಾರ ನೆರವಿಗೆ ಕ್ಷೇತ್ರದ ಜನತೆಯ ಪರವಾಗಿ ಶಾಸಕರು ಕೃತಜ್ಞತೆ ಸಲ್ಲಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮುಕ್ತಾಯ: ನಿರಾಳರಾದ ವಿದ್ಯಾರ್ಥಿಗಳು

ಕೋಲಾರ




ಜಿಲ್ಲಾದ್ಯಂತ 65 ಕೇಂದ್ರಗಳಲ್ಲಿ ಗುರುವಾರ ನಡೆದ ಸಮಾಜ ವಿಜ್ಞಾನ ವಿಷಯದ ಪರೀಕ್ಷೆಯೊಂದಿಗೆ ಈ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆ ಸುಗಮವಾಗಿ ಮುಕ್ತಾಯವಾಗಿದ್ದು, ಇದಕ್ಕೆ ಸಹಕಾರ ನೀಡಿದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ, ಪೋಷಕರು, ಶಿಕ್ಷಕರು,ವಿದ್ಯಾರ್ಥಿಗಳಿಗೆ ಡಿಡಿಪಿಐ ಅಲ್ಮಾಸ್ ಫರ್ವಿನ್ ತಾಜ್ ಧನ್ಯವಾದ ಸಲ್ಲಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಜಿಲ್ಲಾದ್ಯಂತ ಎಸ್ಸೆಸ್ಸೆಲ್ಸಿ ಪರೀಕ್ಷೆ ಯಾವುದೇ ಗೊಂದಲಗಳಿಗೆ ಅವಕಾಶವಿಲ್ಲದಂತೆ ಮುಕ್ತಾಯಗೊಂಡಿದೆ, ಇನ್ನು ಮೌಲ್ಯಮಾಪನ ಬಾಕಿ ಇದ್ದು, ಎಲ್ಲಿಯೂ ಗೊಂದಲ, ಸಮಸ್ಯೆಗಳಿಗೆ ಅವಕಾಶವಾಗಿಲ್ಲ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

ಸುಗಮ ಪರೀಕ್ಷೆಗೆ ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ ,ಎಸ್ಪಿ ಕನ್ನಿಕಾ ಸಕ್ರಿವಾಲ್, ಜಿಪಂ ಸಿಇಒ ಪ್ರವೀಣ್ ಬಿ. ಬಾಗೇವಾಡಿ, ಅಪರ ಜಿಲ್ಲಾಧಿಕಾರಿ ಮಂಗಳಾ ಅವರು ನೀಡಿದ ಮಾರ್ಗದರ್ಶನ, ಇಲಾಖೆಗಳ ಪೂರ್ಣ ಸಹಕಾರ, ಆರೋಗ್ಯ ಇಲಾಖೆ, ರಕ್ಷಣೆ ನೀಡಿದ ಪೊಲೀಸ್ ಇಲಾಖೆ, ನಗರಸಭೆ, ಗ್ರಾಮ ಪಂಚಾಯಿತಿ, ಮುಖ್ಯ ಅಧೀಕ್ಷಕರು, ಕಸ್ಟೋಡಿಯನ್ಸ್, ಶಿಕ್ಷಕರು, ಜಾಗೃತದಳ ಸಿಬ್ಬಂದಿ, ಶಿಕ್ಷಣ ಇಲಾಖೆ ಅಧಿಕಾರಿ,ಸಿಬ್ಬಂದಿ, ಪೋಷಕರು, ಮಾಧ್ಯಮ ಬಂಧುಗಳು, ವಿದ್ಯಾರ್ಥಿಗಳಿಗೆ ಅವರು ಧನ್ಯವಾದ ಸಲ್ಲಿಸಿದ್ದಾರೆ.

ಸಮಾಜ ವಿಜ್ಞಾನಕ್ಕೆ 215 ಮಂದಿ ಗೈರು:

ಎಸ್ಸೆಸ್ಸೆಲ್ಸಿ ಪರೀಕ್ಷೆಯ ಕೊನೆ ದಿನವಾದ ಗುರುವಾರ ನಡೆದ ಸಮಾಜ ವಿಜ್ಞಾನ ಪರೀಕ್ಷೆಯೂ ಗೊಂದಲಗಳಿಗೆ ಅವಕಾಶವಿಲ್ಲದೇ ಸುಗಮವಾಗಿ ನಡೆದಿದ್ದು, ಪರೀಕ್ಷೆಗೆ ನೋಂದಾಯಿಸಿದ್ದ 18897 ಮಂದಿ ಪೈಕಿ ಮಂದಿ 18682 ಮಂದಿ ಹಾಜರಾಗಿದ್ದರು. ಇಂದು ಒಟ್ಟು 215 ಮಂದಿ ಗೈರಾಗಿದ್ದು, ಶೇ. 98.86 ಹಾಜರಿ ಇತ್ತು ಎಂದು ಡಿಡಿಪಿಐ ಅಲ್ಮಾಸ್ ಫರ್ವಿನ್‌ತಾಜ್ ತಿಳಿಸಿದ್ದಾರೆ.

ಕೋಲಾರದ ಅಂಜುಮಾನ್ ಪ್ರೌಢಶಾಲೆ ಕೇಂದ್ರದಲ್ಲಿ ಪರೀಕ್ಷೆ ಅತ್ಯಂತ ಸುಗಮವಾಗಿ ನಡೆದಿದ್ದು, ಇಲ್ಲಿ ಮುಖ್ಯ ಅಧೀಕ್ಷಕರಾಗಿ ಸುಭಾಷ್ ಶಾಲೆ ಮುಖ್ಯ ಶಿಕ್ಷಕ ವೇಣುಗೋಪಾಲ್, ಕಸ್ಟೋಡಿಯನ್ ಆಗಿ ಸರ್ಕಾರಿ ಬಾಲಕಿಯರ ಪಿಯು ಕಾಲೇಜಿನ ಮಂಜುಳಾ, ಸ್ಥಾನಿಕ ಜಾಗೃತದಳವಾಗಿ ಕೆ.ಗಣೇಶಯ್ಯ ಕಾರ್ಯ ನಿರ್ವಹಿಸಿದರು.

ತಾಲ್ಲೂಕುವಾರು ಹಾಜರಿ ವಿವರ:

ಬಂಗಾರಪೇಟೆ ತಾಲ್ಲೂಕಿನ 8 ಕೇಂದ್ರಗಳಲ್ಲಿ ಸಮಜ ವಿಜ್ಞಾನ ವಿಷಯಕ್ಕೆ 2501 ಮಂದಿ ನೊಂದಾಯಿಸಿದ್ದು, 2480 ಮಂದಿ ಹಾಜರಾಗಿ 21 ಮಂದಿ ಗೈರಾಗಿದ್ದಾರೆ, ಕೆಜಿಎಫ್ ತಾಲ್ಲೂಕಿನ 9 ಕೇಂದ್ರಗಳಲ್ಲಿ 3254 ಮಕ್ಕಳು ಹೆಸರು ನೊಂದಾಯಿಸಿದ್ದು, 3216 ಮಂದಿ ಹಾಜರಾಗಿ 38 ಮಂದಿ ಗೈರಾಗಿದ್ದಾರೆ.

ಕೋಲಾರ ತಾಲ್ಲೂಕಿನ 18 ಕೇಂದ್ರಗಳಲ್ಲಿ 4806 ಮಂದಿ ಹೆಸರು ನೊಂದಾಯಿಸಿದ್ದು, 4761 ಮಂದಿ ಹಾಜರಾಗಿ ಕೇವಲ 45 ಮಂದಿ ಗೈರಾಗಿದ್ದಾರೆ. ಮಾಲೂರು ತಾಲ್ಲೂಕಿನ 8 ಕೇಂದ್ರಗಳಲ್ಲಿ 2963 ಮಂದಿ ಹೆಸರು ನೊಂದಾಯಿಸಿದ್ದು, 2928 ಮಂದಿ ಹಾಜರಾಗಿದ್ದು, 35 ಮಂದಿ ಗೈರಾಗಿದ್ದಾರೆ.

ಮುಳಬಾಗಿಲು ತಾಲ್ಲೂಕಿನ 12 ಕೇಂದ್ರಗಳಲ್ಲಿ 2817 ಮಂದಿ ನೊಂದಾಯಿಸಿದ್ದು, 2762 ಮಂದಿ ಹಾಜರಾಗಿದ್ದು, 55 ಮಂದಿ ಗೈರಾಗಿದ್ದಾರೆ, ಶ್ರೀನಿವಾಸಪುರ ತಾಲ್ಲೂಕಿನ 10 ಕೇಂದ್ರಗಳಲ್ಲಿ 2556 ಮಂದಿ ಹೆಸರು ನೊಂದಾಯಿಸಿದ್ದು, 2535 ಮಂದಿ ಹಾಜರಾಗಿದ್ದು, 21ಮಂದಿ ಗೈರಾಗಿದ್ದಾರೆ.

ಪರೀಕ್ಷೆ ಮುಕ್ತಾಯ ವಿದ್ಯಾರ್ಥಿಗಳ ಸಂಭ್ರಮ:

ಗುರುವಾರ ಎಸ್ಸೆಸ್ಸೆಲ್ಸಿ ಪರೀಕ್ಷೆಯ ಕೊನೆ ದಿನವಾಗಿದ್ದು, ಪರೀಕ್ಷೆ ಮುಗಿಯುತ್ತಿದ್ದಂತೆ ವಿದ್ಯಾರ್ಥಿಗಳು ನಿರಾಳವಾಗಿ ಸಂಭ್ರಮದಿಂದ ಹೊರಗೋಡಿ ಬಂದರಲ್ಲದೇ ನಗರದ ಅಲಮಿನ್ ಪ್ರೌಢಶಾಲೆ ಆವರಣದಲ್ಲಿ ಯಶಸ್ಸಿನ ಸಂಕೇತ ತೋರಿಸಿ ಸಂಭ್ರಮಿಸಿದರು.

ಅಲಮಿನ್ ಪ್ರೌಢಶಾಲೆ ಪರೀಕ್ಷಾ ಕೇಂದ್ರದಲ್ಲಿ ಮುಖ್ಯ ಅಧೀಕ್ಷಕ ವೇಣುಗೋಪಾಲ್, ಪ್ರಶ್ನೆಪತ್ರಿಕೆ ಅಭಿರಕ್ಷಕಿ ಸಿದ್ದೇಶ್ವರಿ, ಸ್ಥಾನಿಕ ಜಾಗೃತದಳದ ಕೆ.ಗಣೇಶಯ್ಯ, ಮೊಬೈಲ್ ಸ್ವಾಧೀನಾಧಿಕಾರಿ ಸಿಆರ್‌ಪಿ ಮೀನಾ, ಶಿಕ್ಷಕರಾದ ಎಂ.ಆರ್. ಗೋಪಾಲಕೃಷ್ಣ, ಭವಾನಿ, ಕೆ.ಬಿ.ಶಿವಶಂಕರರೆಡ್ಡಿ, ತಯಿಬಖಾನಂ, ಉಷಾರಾಣಿ, ಶ್ರೀನಿವಾಸಲು, ವಾಣಿಶ್ರೀ, ಶಿಲ್ಪಶ್ರೀ, ರೇಣುಕಾಲಕ್ಷ್ಮಿ, ಸವಿತ, ಫರೀದಾ ವಖಾನಂ, ಪುಷ್ಪ ಬಿ, ಯಾಸ್ಮೀನ್, ನಂಜುಂಡಪ್ಪ, ರಮೇಶ್, ಮಂಜುನಾಥ್, ಜರೀನ್ ತಾಜ್, ಹರಿನಾಥ್ ಮತ್ತಿತರರಿದ್ದು, ಯಾವುದೇ ಗೊಂದಲಕ್ಕೆ ಅವಕಾಶವಿಲ್ಲದೇ ಪರೀಕ್ಷೆ ಯಶಸ್ವಿಯಾಗಿ ಮುಗಿದಿದ್ದಕ್ಕಾಗಿ ಮಕ್ಕಳೊಂದಿಗೆ ಖುಷಿ ಹಂಚಿಕೊಂಡರು.

ಡಿಡಿಪಿಐ ಅಲ್ಮಾಸ್ ಫರ್ವಿನ್‌ತಾಜ್, ಶಿಕ್ಷಣಾಧಿಕಾರಿ ಡಾ. ವೀಣಾ, ಡಿವೈಪಿಸಿಗಳಾದ ರಾಜೇಶ್ವರಿ, ನಹೀದ್ ಫಾತಿಮಾ, ಪರೀಕ್ಷಾ ನೋಡಲ್ ಅಧಿಕಾರಿ ಶಂಕರೇಗೌಡ, ಬಿಇಒಗಳಾದ ಮಧುಮಾಲತಿ ಪಡುವಣೆ, ಶಶಿಕಲಾ, ನಾರಾಯಣಸ್ವಾಮಿ, ಕೆಂಪಯ್ಯ, ರಾಮಚಂದ್ರ, ಮುನಿಲಕ್ಷ್ಮಯ್ಯ ವಿಷಯ ಪರಿವೀಕ್ಷಕರಾದ ಸಮೀವುಲ್ಲಾ, ಕ್ರಿಸ್ಟಿನಾಬಬಿತಾ ಯಶಸ್ವಿ ಪರೀಕ್ಷೆಗೆ ಸಹಕರಿಸಿದ ಜಿಲ್ಲಾಧಿಕಾರಿಗಳು, ಎಸ್ಪಿ, ಜಿಲ್ಲಾ ಪಂಚಾಯತ್ ಸಿಇಒ, ತಹಸೀಲ್ದಾರರು,

# ಮಕ್ಕಳಲ್ಲಿ ಸಾಹಿತ್ಯಾಸಕ್ತಿ ಬೆಳೆಸಿ: ಡಾ.ಎನ್.ಎಸ್. ಜಯಕುಮಾರ್

ತುಮಕೂರು

ಸಮೃದ್ಧ ಜಾನಪದ ಸಾಹಿತ್ಯ ಒಳಗೊಂಡ ನಮ್ಮ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಅನೇಕ ಸಾಹಿತಿಗಳು ಶ್ರೇಷ್ಠ ಕೃತಿಗಳ ಮೂಲಕ ದೊಡ್ಡ ಕೊಡುಗೆ ನೀಡಿ ಶ್ರೀಮಂತಗೊಳಿಸಿದ್ದಾರೆ. ನಮ್ಮ ನಾಡಿನ ಸಂಸ್ಕೃತಿಯ ಭಾಗವಾಗಿರುವ ಕನ್ನಡ ಸಾಹಿತ್ಯವನ್ನು ಬೆಳೆಸುವ, ಕನ್ನಡ ಕೃತಿಗಳನ್ನು ಕೊಂಡು ಓದಿ ಪ್ರೋತ್ಸಾಹಿಸಲು ಎಲ್ಲರೂ ಸಹಕರಿಸಬೇಕು. ಮಕ್ಕಳಲ್ಲಿ ಸಾಹಿತ್ಯಾಸಕ್ತಿ ಬೆಳೆಸಬೇಕು ಎಂದು ಟಿಎಂಸಿಸಿ ಅಧ್ಯಕ್ಷ ಡಾ.ಎನ್.ಎಸ್. ಜಯಕುಮಾರ್ ಹೇಳಿದರು.



ಗುರುವಾರ ನಗರದ ಬಾಯರ್ಸ್ ಕ್ಯಾಂಟಿನ್‌ನಲ್ಲಿ ನಿವೃತ್ತ ಪ್ರಾಚಾರ್ಯ, ಸಾಹಿತಿ ಕೆ.ಹೆಚ್. ವೆಂಕಟೇಶ್ ರಚಿಸಿರುವ, ಆನಂದ್ ಪಬ್ಲಿಕೇಷನ್‌ನವರು ಪ್ರಕಾಶಿಸಿರುವ 'ಏರಿ ಮೇಲಿನ ಮಾವಿನ ಮರ ಮತ್ತು ಇತರೆ ಕಥೆಗಳು' ಎಂಬ ಕಥಾ ಸಂಕಲನ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ಕಥೆಗಾರ ವೆಂಕಟೇಶ್ ಅವರು ಗ್ರಾಮೀಣ ಸೊಗಡಿನ ಭಾಷೆಯನ್ನು ಉತ್ತಮವಾಗಿ ಬಳಸಿಕೊಂಡು ಆಕರ್ಷಕವಾಗಿ ಬರೆದಿರುವ ಕಥೆಗಳು ಓದುಗರ ಗಮನ ಸೆಳೆಯುತ್ತವೆ. ಇಂತಹ ಕೃತಿಗಳು ಹೆಚ್ಚೆಚ್ಚು ಹೊರಬರಲಿ ಎಂದು ಆಶಿಸಿದರು.

ಕನ್ನಡ ಸಾಹಿತ್ಯವು ಆಯಾ ಕಾಲಘಟ್ಟದ ನಮ್ಮ ಜೀವನಶೈಲಿ ಪರಿಚಯಿಸುವ ಪ್ರಮುಖ ಆಕರಗಳಾಗಿ ರೂಪುಗೊಳ್ಳುತ್ತವೆ. ಕನ್ನಡ ಭಾಷೆಯ ಹಿರಿಮೆ, ಮಹತ್ವದ ಬಗ್ಗೆ ಮಕ್ಕಳಲ್ಲಿ ಅಭಿಮಾನ ಬೆಳೆಸಬೇಕು, ಅವರಲ್ಲಿ ಸಾಹಿತ್ಯಾಸಕ್ತಿ ಬೆಳೆಸಬೇಕು. ಆ ಮೂಲಕ ಕನ್ನಡ ಸಾಹಿತ್ಯವನ್ನು ಉಳಿಸಿಬೆಳೆಸುವ ಕೆಲಸವಾಗಬೇಕು ಎಂದು ಡಾ.ಎನ್.ಎಸ್. ಜಯಕುಮಾರ್ ತಿಳಿಸಿದರು.

ಕೃತಿ ಕುರಿತು ಮಾತನಾಡಿದ ಹಿರಿಯ ಸಾಹಿತಿ ಈಚನೂರು ಇಸ್ಮಾಯಿಲ್, ಯುದ್ಧಗಳ ಕಾರ್ಮೋಡಗಳ ನಡುವೆ ಇಂದು ಜಗತ್ತು ಆತಂಕ ಸ್ಥಿತಿಯಲ್ಲಿದೆ. ಯಾವುದೇ ತತ್ವ, ಸಿದ್ಧಾಂತಗಳಿಂದಲೂ ಯುದ್ಧ ಶಮನ ಮಾಡಿ, ಶಾಂತಿ ಸ್ಥಾಪಿಸಲು ಸಾಧ್ಯವಾಗಿಲ್ಲ. ಆದರೆ ಸಾಹಿತ್ಯಪ್ರೇಮ ಬೆಳೆಸುವ ಮೂಲಕ ಜಗತ್ತಿನಲ್ಲಿ ಶಾಂತಿ, ಸೌಹಾರ್ದತೆ ಬೆಳೆಸಲು ಸಾಧ್ಯವಿದೆ. ಅಂತಹ ವಾತಾವರಣ ಎಲ್ಲೆಡೆ ಮೂಡಬೇಕಾಗಿದೆ ಎಂದರು.

ಕಥೆಗಾರ ಕೆ.ಹೆಚ್. ವೆಂಕಟೇಶ್ ಅವರು ಗ್ರಾಮೀಣ ಪ್ರದೇಶದ ಬದುಕಿನ ತಲ್ಲಣಗಳನ್ನು ಸಹಜವಾಗಿ, ಸರಳವಾಗಿ ಕಥೆಗಳಾಗಿ ಬರೆದು ಗಮನ ಸೆಳೆದಿದ್ದಾರೆ. ಕನ್ನಡ ಸಾಹಿತ್ಯದಲ್ಲಿ ಸಣ್ಣಕಥೆಗಳ ಪ್ರಾಕಾರ ಉನ್ನತ ಸ್ಥಾನದಲ್ಲಿದೆ. ನಮ್ಮ ಕನ್ನಡದ ಲೇಖಕಿ ಬಾನು ಮುಸ್ತಾಕ್ ಅವರ ಸಣ್ಣ ಕಥೆಗಳ ಕೃತಿಗೆ ಬೂಕರ್ ಪ್ರಶಸ್ತಿ ದೊರಕಿರುವುದು ಕನ್ನಡಿಗರು ಹೆಮ್ಮೆ ಪಡುವ ವಿಚಾರ ಎಂದು ಹೇಳಿದರು,

ಕಥೆಗಾರ ಕೆ.ಹೆಚ್. ವೆಂಕಟೇಶ್, ಆನಂದ್ ಪಬ್ಲಿಕೇಷನ್‌ನ ಶಂಕರಾನಂದ್, ಹಿರಿಯ ಕ್ರೀಡಾಪಟು ಟಿ.ಕೆ. ಆನಂದ್, ಸಮಾಜ ಸೇವಕ ಪದ್ಮನಾಭ್ (ಮಧು) ಹಾಗೂ ವಿವಿಧ ಸಂಘಸಂಸ್ಥೆಗಳ ಪ್ರಮುಖರು ಸಮಾರಂಭದಲ್ಲಿ ಭಾಗವಹಿಸಿದ್ದರು.

## ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕ ಬೆಲೆ ಸಿಗದೆ ಸಂಕಷ್ಟದ ಸುಳಿಯಲ್ಲಿ ರೈತರು: ಕೆ. ಸಾಯಿ ರೆಡ್ಡಿ ಕಳವಳ

ಕೋಲಾರ

ರೈತರು ಬೆಳೆದ ಬೆಳೆಗಳಿಗೆ ಮಾರುಕಟ್ಟೆಯಲ್ಲಿ ಸರಿಯಾದ ವೈಜ್ಞಾನಿಕ ಬೆಲೆ ಸಿಗುತ್ತಿಲ್ಲ. ಇದರಿಂದಾಗಿ ಅನ್ನದಾತರು ನಿರಂತರವಾಗಿ ನಷ್ಟ ಅನುಭವಿಸುತ್ತಿದ್ದು, ಸಂಕಷ್ಟದ ಸುಳಿಗೆ ಸಿಲುಕಿದ್ದಾರೆ ಎಂದು ಭಾರತೀಯ ಕಿಸಾನ್ ಸಂಘದ (ಬಿಕೆಎಸ್) ರಾಷ್ಟ್ರೀಯ ಅಧ್ಯಕ್ಷ ಕೆ. ಸಾಯಿ ರೆಡ್ಡಿ ಅಭಿಮತ ವ್ಯಕ್ತಪಡಿಸಿದರು.



ನಗರದ ಬಿಕೆಎಸ್ ಕಾರ್ಯಾಲಯದಲ್ಲಿ ನಡೆದ ಜಿಲ್ಲಾ ಮಟ್ಟದ ಪದಾಧಿಕಾರಿಗಳ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮುಂದಿನ ವರ್ಷ ಸಂಘಕ್ಕೆ 50ರ ಸಂಭ್ರಮವಿದ್ದು, ಈ ಹಿನ್ನೆಲೆಯಲ್ಲಿ ಸಂಘಟನೆಯನ್ನು ಬಲಪಡಿಸಲು ನಿರ್ಧರಿಸಲಾಗಿದೆ. ಪ್ರಸ್ತುತ ದೇಶದ 73 ಸಾವಿರ ಗ್ರಾಮಗಳಲ್ಲಿರುವ ಸಂಘವನ್ನು ಮುಂದಿನ ಸದಸ್ಯತ್ವ ಅಭಿಯಾನದ ವೇಳೆಗೆ ಒಂದು ಲಕ್ಷ ಗ್ರಾಮಗಳಿಗೆ ವಿಸ್ತರಿಸುವ ಗುರಿ ಇದೆ. ಕೋಲಾರ ಜಿಲ್ಲೆಯಲ್ಲಿ ಕನಿಷ್ಠ 500 ಗ್ರಾಮಗಳಲ್ಲಿ ಸಮಿತಿ ರಚಿಸಿ, ರೈತರ ಬಿಕ್ಕಟ್ಟುಗಳನ್ನು ಬಗೆಹರಿಸಲು ಸರ್ಕಾರದ ಮೇಲೆ ಒತ್ತಡ ಹೇರಬೇಕೆಂದು ಪದಾಧಿಕಾರಿಗಳಿಗೆ ಕರೆ ನೀಡಿದರು.

ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಜೀವನಾಡಿಯಾದ ಕೃಷ್ಣಾ ನದಿ ನೀರು ಹಂಚಿಕೆ ಕುರಿತು ಮಾತನಾಡಿದ ಅವರು, “ನೀರಾವರಿ ತಜ್ಞರ ತಂಡದೊಂದಿಗೆ ಅಧ್ಯಯನ ನಡೆಸಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಗಮನ ಸೆಳೆಯಲಾಗುವುದು. ಈ ಭಾಗದ ನೀರಾವರಿ ಬೇಡಿಕೆ ಈಡೇರಿಸಲು ಅಂಕಿ–ಅಂಶಗಳ ಸಮೇತ ಗಂಭೀರ ಹೋರಾಟ ರೂಪಿಸಲಾಗುವುದು,” ಎಂದರು.

ರಾಸಾಯನಿಕ ಗೊಬ್ಬರಗಳ ಬಳಕೆ ಕಡಿಮೆ ಮಾಡಿ, ಮಣ್ಣಿನ ಆರೋಗ್ಯ ಕಾಪಾಡಲು ಗೋ ಆಧಾರಿತ ಕೃಷಿಗೆ ಒತ್ತು ನೀಡಬೇಕು. ಇದರಿಂದ ರೈತರ ಖರ್ಚು ಕಡಿಮೆಯಾಗಿ ಲಾಭದ ಪ್ರಮಾಣ ಹೆಚ್ಚುತ್ತದೆ. ಹಳ್ಳಿಗಳಲ್ಲಿ ‘ಪಂಚ ಪರಿವರ್ತನೆ’ ಮೂಲಕ ಐಕ್ಯತೆ ಮೂಡಿಸಿ ದೇಶ ಕಟ್ಟುವ ಕೆಲಸವಾಗಬೇಕು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಬಿಕೆಎಸ್ ದಕ್ಷಿಣ ಪ್ರಾಂತ ಉಪಾಧ್ಯಕ್ಷ ಅಪ್ಪಾಜಿಗೌಡ, ಸಂಘಟನಾ ಕಾರ್ಯದರ್ಶಿ ನಾರಾಯಣಸ್ವಾಮಿ, ಮುಖಂಡರಾದ ಇ. ಸುಬ್ರಮಣಿ, ಅಮೃತ, ಅರಹಳ್ಳಿ ಶ್ರೀನಿವಾಸ ಗೌಡ, ಕೆ. ಗೋಪಾಲರೆಡ್ಡಿ, ವಿ. ಜಯಪ್ಪ ಸೇರಿದಂತೆ ಹಲವು ತಾಲೂಕುಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ವೈದ್ಯಕೀಯ ಕಾಲೇಜಿಗೆ 15 ದಿನದೊಳಗೆ ಡಿಪಿಆರ್ ಸಲ್ಲಿಸಿ: ಶಾಸಕ

ಕೋಲಾರ

ಜಿಲ್ಲೆಯ ಬಹುದಿನಗಳ ಕನಸಾದ ಸರ್ಕಾರಿ ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ಕಾಲ ಕೂಡಿಬಂದಿದೆ. ಮುಂದಿನ 15 ದಿನಗಳ ಒಳಗೆ ಯೋಜನಾ ವರದಿ ಸಿದ್ಧಪಡಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ಇನ್ನು ಮೂರು ತಿಂಗಳ ಅವಧಿಯಲ್ಲಿ ಕಾಮಗಾರಿ ಆರಂಭಿಸುವ ಗುರಿ ಇದೆ ಎಂದು ಶಾಸಕ ಕೊತ್ತೂರು ಮಂಜುನಾಥ್ ತಿಳಿಸಿದರು.



ನಗರದ ಹೊರವಲಯದ ಸ್ಯಾನಿಟೋರಿಯಂ ಬಳಿ ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ಗುರುತಿಸಲಾಗಿರುವ ಸ್ಥಳವನ್ನು ಬುಧವಾರ ಅಧಿಕಾರಿಗಳೊಂದಿಗೆ ಪರಿಶೀಲಿಸಿದ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಕಾಲೇಜು ನಿರ್ಮಾಣಕ್ಕೆ ಗುರುತಿಸಿರುವ 22 ಎಕರೆ 36 ಗುಂಟೆ ಜಾಗವು ಅರಣ್ಯ ಇಲಾಖೆಗೆ ಸೇರಿದ್ದಾಗಿದೆ. ಇದಕ್ಕೆ ಪರ್ಯಾಯವಾಗಿ ಮದನಹಳ್ಳಿ ಬಳಿಯ ಸರ್ವೆ ನಂಬರ್ 125ರಲ್ಲಿ ಅರಣ್ಯ ಇಲಾಖೆಗೆ ಭೂಮಿ ನೀಡಲು ನಿರ್ಧರಿಸಲಾಗಿದೆ. “ಅರಣ್ಯ ಇಲಾಖೆ ಅಧಿಕಾರಿಗಳು ಈ ಪ್ರಸ್ತಾವನೆಗೆ ಒಪ್ಪಿಗೆ ಸೂಚಿಸಿದ್ದಾರೆ. ಮರಗಳನ್ನು ಕಡಿಯುವುದಕ್ಕೆ ನಿಯಮಾನುಸಾರ ಹಣ ಪಾವತಿಸಲಾಗುವುದು, ಆದಷ್ಟು ಮರಗಳನ್ನು ಉಳಿಸಿಕೊಂಡೇ ಕಟ್ಟಡ ನಿರ್ಮಿಸುವುದು ನಮ್ಮ ಉದ್ದೇಶ,” ಎಂದು ಶಾಸಕರು ವಿವರಿಸಿದರು.

ರಾಜ್ಯ ಬಜೆಟ್‌ನಲ್ಲಿ ಹೊಸ ವೈದ್ಯಕೀಯ ಕಾಲೇಜುಗಳಿಗಾಗಿ ರೂ. 800 ಕೋಟಿ ಮೀಸಲಿಡಲಾಗಿದೆ. ಇದರಲ್ಲಿ ವಿಜಯಪುರ ಹಾಗೂ ಕೋಲಾರಕ್ಕೆ ಸಮಾನವಾಗಿ ಅನುದಾನ ಹಂಚಿಕೆಯಾಗಲಿದ್ದು, ಕೋಲಾರಕ್ಕೆ ಸುಮಾರು ರೂ. 400 ಕೋಟಿ ಲಭಿಸುವ ನಿರೀಕ್ಷೆಯಿದೆ. ಮೊದಲ ಹಂತದಲ್ಲಿ ರೂ. 200 ಕೋಟಿ ಬಿಡುಗಡೆಯಾದರೆ ಕಾಮಗಾರಿ ವೇಗವಾಗಿ ಆರಂಭವಾಗಲಿದೆ. ಇಲ್ಲಿ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಕಟ್ಟಡಗಳು, ಹಾಸ್ಟೆಲ್ ಹಾಗೂ ಡಿಎಚ್‌ಓ ಆಸ್ಪತ್ರೆ ತಲೆ ಎತ್ತಲಿವೆ.


ಕಾಮಗಾರಿ ವಿಳಂಬವಾಗದಂತೆ ಆರೋಗ್ಯ, ಕಂದಾಯ, ಲೋಕೋಪಯೋಗಿ ಮತ್ತು ನಗರಸಭೆ ಅಧಿಕಾರಿಗಳು ಸಮನ್ವಯ ಸಾಧಿಸಬೇಕು. ವಾಟ್ಸಾಪ್ ಗ್ರೂಪ್ ರಚಿಸಿಕೊಂಡು ನಿರಂತರ ಸಂಪರ್ಕದಲ್ಲಿರಬೇಕು. ವಾಸ್ತು ಪ್ರಕಾರವೇ ಕಟ್ಟಡದ ನಕ್ಷೆ ಸಿದ್ಧಪಡಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಂ.ಎಲ್. ಅನಿಲ್ ಕುಮಾರ್, ಕುಡಾ ಅಧ್ಯಕ್ಷ ಮೊಹಮ್ಮದ್ ಹನೀಫ್, ತಹಶೀಲ್ದಾರ್ ಡಾ. ನಯನಾ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಜಿ. ಶ್ರೀನಿವಾಸ್ ಸೇರಿದಂತೆ ವಿವಿಧ ಇಲಾಖೆಯ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಮ್ಮಸಂದ್ರದಲ್ಲಿ ಶ್ರೀ ವೇಣುಗೋಪಾಲಸ್ವಾಮಿ ರಥೋತ್ಸವ ಸಂಭ್ರಮ

ಬೇತಮಂಗಲ

ವಿಶ್ವಪ್ರಸಿದ್ಧ ಯಾತ್ರಾಸ್ಥಳವಾದ ಕಮ್ಮಸಂದ್ರದ (ಕೋಟಿಲಿಂಗೇಶ್ವರ) ಶ್ರೀ ವೇಣುಗೋಪಾಲಸ್ವಾಮಿ ರಥೋತ್ಸವವು ಅಪಾರ ಭಕ್ತಾಧಿಗಳ ಹರ್ಷೋದ್ಗಾರ ಹಾಗೂ ಧಾರ್ಮಿಕ ವಿಧಿವಿಧಾನಗಳೊಂದಿಗೆ ಗುರುವಾರ ಅತ್ಯಂತ ವಿಜೃಂಭಣೆಯಿಂದ ನೆರವೇರಿತು.



ರಥೋತ್ಸವದ ಅಂಗವಾಗಿ ರಥವನ್ನು ಬಣ್ಣಬಣ್ಣದ ಬಟ್ಟೆಗಳು ಹಾಗೂ ವಿವಿಧ ಬಗೆಯ ಹೂವುಗಳಿಂದ ಆಕರ್ಷಕವಾಗಿ ಅಲಂಕರಿಸಲಾಗಿತ್ತು. ಬೆಳಿಗ್ಗೆಯಿಂದಲೇ ಶ್ರೀ ವೇಣುಗೋಪಾಲಸ್ವಾಮಿ ದೇವರಿಗೆ ವಿಶೇಷ ಅಭಿಷೇಕ, ಪೂಜಾ ಕೈಂಕರ್ಯಗಳು ನಡೆದವು. ನಂತರ ಉತ್ಸವ ಮೂರ್ತಿಯನ್ನು ಮಂಗಲವಾದ್ಯಗಳ ಘೋಷದೊಂದಿಗೆ ಮೆರವಣಿಗೆ ಮೂಲಕ ತಂದು, ಶಾಸ್ತ್ರೋಕ್ತವಾಗಿ ರಥದಲ್ಲಿ ಪ್ರತಿಷ್ಠಾಪಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಮಧ್ಯಾಹ್ನದ ಶುಭ ಲಗ್ನದಲ್ಲಿ ಕೆಜಿಎಫ್ ಕ್ಷೇತ್ರದ ಶಾಸಕಿ ರೂಪಕಲಾ ಶಶಿಧರ್ ಅವರು ರಥೋತ್ಸವಕ್ಕೆ ಚಾಲನೆ ನೀಡಿದರು. ಸಾವಿರಾರು ಭಕ್ತರು ‘ಗೋವಿಂದ ಗೋವಿಂದ’ ನಾಮಸ್ಮರಣೆ ಮಾಡುತ್ತಾ ರಥ ಎಳೆದು ಪುನೀತರಾದರು. ರಥ ಸಾಗುವ ಹಾದಿಯುದ್ದಕ್ಕೂ ಭಕ್ತರು ಹಣ್ಣು– ಜವನ ಎಸೆದು ಭಕ್ತಿ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗರಾಜ್, ಜಿಲ್ಲಾ ಪಂಚಾಯತಿ ಮಾಜಿ ಸದಸ್ಯರಾದ ಅ.ಮು. ಲಕ್ಷ್ಮೀನಾರಾಯಣ, ಡಾ. ಶಿವಪ್ರಸಾದ್, ವಕೀಲ ರಾಜಗೋಪಾಲ್ ಗೌಡ, ಓ.ಎಂ. ಗೋಪಾಲಪ್ಪ ಸೇರಿದಂತೆ ಸಾವಿರಾರು ಭಕ್ತಾಧಿಗಳು ಪಾಲ್ಗೊಂಡಿದ್ದರು.

## ಕೆಜಿಎಫ್‌ನಲ್ಲಿ ಡಿಜಿಟಲ್ ಜನಗಣತಿ ಹಬ್ಬಕ್ಕೆ ಚಾಲನೆ

ಕೆಜಿಎಫ್

ದೇಶದಲ್ಲಿಯೇ ಮೊದಲ ಬಾರಿಗೆ ನಡೆಯಲಿರುವ ಸಂಪೂರ್ಣ ಡಿಜಿಟಲ್ ಜನಗಣತಿ ಪ್ರಕ್ರಿಯೆಗೆ ಕೆಜಿಎಫ್ ನಗರದಲ್ಲಿ ಚಾಲನೆ ದೊರೆತಿದೆ. ಶಾಸಕಿ ರೂಪಕಲಾ ಶಶಿಧರ್ ಅವರು ತಮ್ಮ ಮನೆಯಿಂದಲೇ ಗಣತಿ ಕಾರ್ಯಕ್ಕೆ ಚಾಲನೆ ನೀಡುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಏಪ್ರಿಲ್ 1 ರಿಂದ 15 ರವರೆಗೆ ಮೊದಲ ಹಂತದ ‘ಮನೆಗಳ ಪಟ್ಟಿ ಮತ್ತು ಮನೆ ಗಣತಿ’ ಕಾರ್ಯ ನಡೆಯಲಿದ್ದು, ಸಾರ್ವಜನಿಕರು ಈ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಶಾಸಕರು ಮನವಿ ಮಾಡಿದರು.

ತಹಶೀಲ್ದಾರ್ ಎಚ್.ಜೆ. ಭರತ್ ಮಾತನಾಡಿ, “2027ರ ಭಾರತದ ಜನಗಣತಿಯ ಮೊದಲ ಹಂತವನ್ನು ತ್ವರಿತಗೊಳಿಸಲು ಭಾರತ ಸರ್ಕಾರವು selfenumeration.census.gov.in ಎಂಬ ವಿಶೇಷ ವೆಬ್ ಪೋರ್ಟಲ್ ಅಭಿವೃದ್ಧಿಪಡಿಸಿದೆ. ನಾಗರಿಕರು ತಮ್ಮ ಮನೆಯ ವಿವರಗಳನ್ನು ಸ್ವಯಂ ಆಗಿ ಡಿಜಿಟಲ್ ರೂಪದಲ್ಲಿ ದಾಖಲಿಸಲು ಇಲ್ಲಿ ಅವಕಾಶ ಕಲ್ಪಿಸಲಾಗಿದೆ,” ಎಂದು ತಿಳಿಸಿದರು.

ಡಿಜಿಟಲ್ ಗಣತಿಯ ಪ್ರಮುಖ ಅಂಶಗಳು ಹೀಗಿವೆ:

ಸಮಯ: ಕುಟುಂಬದ ಒಬ್ಬ ಸದಸ್ಯರು ಕೇವಲ 15 ರಿಂದ 20 ನಿಮಿಷಗಳಲ್ಲಿ ಮನೆಯ ವಿವರಗಳನ್ನು ಒದಗಿಸಬಹುದು.

ಐಡಿ ಜನರೇಟ್: ಮಾಹಿತಿ ದಾಖಲಿಸಿದ ನಂತರ ಮೊಬೈಲ್ ಅಥವಾ ಇಮೇಲ್‌ಗೆ ‘ಸ್ವಯಂ–ಗಣತಿ ಐಡಿ’ (ID) ಬರಲಿದೆ.

ಗಣತಿದಾರರಿಗೆ ಸಹಕಾರ: ಸರ್ಕಾರಿ ಗಣತಿದಾರರು ಮನೆಗೆ ಭೇಟಿ ನೀಡಿದಾಗ, ಈ ಐಡಿಯನ್ನು ಅವರಿಗೆ ತೋರಿಸುವ ಮೂಲಕ ದತ್ತಾಂಶ ಸಲ್ಲಿಕೆಯನ್ನು ಅಂತಿಮಗೊಳಿಸಬಹುದು.

ಪೌರಾಯುಕ್ತ ಶ್ರೀಧರ್ ಮಾತನಾಡಿ, “ಇದು ಸಂಪೂರ್ಣ ಡಿಜಿಟಲ್ ರೂಪದ ಗಣತಿಯಾಗಿದ್ದು, ಹಳೆಯ ಕಾಗದ–ಪೆನ್ನು ಪದ್ಧತಿಯನ್ನು ಕೈಬಿಡಲಾಗಿದೆ. ಮೊದಲ ಹಂತದಲ್ಲಿ ಮನೆಗಳ ಪಟ್ಟಿ ಮತ್ತು ಎರಡನೇ ಹಂತದಲ್ಲಿ ಜನಗಣತಿ ನಡೆಯಲಿದೆ. ನಾಗರಿಕರು ತಂತ್ರಜ್ಞಾನವನ್ನು ಬಳಸಿಕೊಂಡು ಈ ಅಭಿಯಾನವನ್ನು ಯಶಸ್ವಿಗೊಳಿಸಬೇಕು,” ಎಂದು ತಿಳಿಸಿದರು.

ಸರ್ಕಾರದ ಎಲ್ಲಾ ಇಲಾಖೆಗಳು, ನಿಗಮ ಮತ್ತು ಮಂಡಳಿಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಾರ್ವಜನಿಕರಿಗೆ ಈ ಬಗ್ಗೆ ಅರಿವು ಮೂಡಿಸಬೇಕು ಎಂದು ಅಧಿಕಾರಿಗಳು ಈ ಸಂದರ್ಭದಲ್ಲಿ ನಿರ್ದೇಶನ ನೀಡಿದರು.



## ಹರಿ- ಹರರ ಕಲ್ಲುಗಾಲಿ ಬ್ರಹ್ಮರಥೋತ್ಸವ ವೈಭವ; ಮಕ್ಕಳಿಂದಲೇ ಸಾಗಿತು ರುದ್ರದೇವರ ತೇರು

ವಿಜಯಪುರ

ಪಟ್ಟಣದ ಐತಿಹಾಸಿಕ ಹಿನ್ನೆಲೆಯುಳ್ಳ ಹರಿ–ಹರರ ಕಲ್ಲುಗಾಲಿ ಬ್ರಹ್ಮರಥೋತ್ಸವ ಹಾಗೂ ಬಲಮುರಿ ವಿನಾಯಕ, ಶ್ರೀಭದ್ರಕಾಳಿ ಸಮೇತ ರುದ್ರದೇವರ ಬ್ರಹ್ಮರಥೋತ್ಸವವು ಬುಧವಾರ ಸಹಸ್ರಾರು ಭಕ್ತರ ಜಯಘೋಷಗಳ ನಡುವೆ ಅತ್ಯಂತ ವಿಜೃಂಭಣೆಯಿಂದ ನೆರವೇರಿತು. ಈ ಬಾರಿ ರುದ್ರದೇವರ ರಥವನ್ನು ಮಕ್ಕಳೇ ಎಳೆದಿದ್ದು ಹಬ್ಬದ ವಿಶೇಷ ಆಕರ್ಷಣೆಯಾಗಿತ್ತು.

ರಥೋತ್ಸವದ ಅಂಗವಾಗಿ ನಗರೇಶ್ವರಸ್ವಾಮಿ ದೇವಾಲಯದಲ್ಲಿ ಮುಂಜಾನೆಯಿಂದಲೇ ವಿವಿಧ ಧಾರ್ಮಿಕ ಪೂಜೆಗಳು ನಡೆದವು. ಅಭಿಷೇಕ, ಸುಪ್ರಭಾತ ಸೇವೆ, ಗಿರಿಜಾ ಕಲ್ಯಾಣೋತ್ಸವ, ತಿರು ಕಲ್ಯಾಣೋತ್ಸವ ಹಾಗೂ ರಥಾಂಗ ಹೋಮ ಸೇರಿದಂತೆ ಹಲವು ಸೇವೆಗಳನ್ನು ಭಕ್ತಿಯಿಂದ ನೆರವೇರಿಸಲಾಯಿತು. ನಂತರ ನಗರೇಶ್ವರಸ್ವಾಮಿ ಉತ್ಸವ ಮೂರ್ತಿಯನ್ನು ಮಂಗಳವಾದ್ಯಗಳು, ತಮಟೆ ವಾದನ ಹಾಗೂ ವೀರಗಾಸೆ ಕುಣಿತದೊಂದಿಗೆ ಮೆರವಣಿಗೆ ಮೂಲಕ ರಥದ ಬಳಿ ತರಲಾಯಿತು. ಬಲಮುರಿ ವಿನಾಯಕ ಹಾಗೂ ಶ್ರೀಭದ್ರಕಾಳಿ ಸಮೇತ ರುದ್ರದೇವರ ಕಲ್ಲುಗಾಲಿ ಬ್ರಹ್ಮರಥವನ್ನು ಸಣ್ಣ ಮಕ್ಕಳು ಅತ್ಯಂತ ಉತ್ಸಾಹದಿಂದ ಎಳೆದರು. “ಗೋವಿಂದ ಗೋವಿಂದ” ಎನ್ನುತ್ತಾ ಮಕ್ಕಳು ರಥವನ್ನು ಗಂಗಾತಾಯಿ ದೇವಾಲಯದವರೆಗೂ ಎಳೆದು ತಂದ ದೃಶ್ಯ ನೆರೆದಿದ್ದವರ ಗಮನ ಸೆಳೆಯಿತು. ಗ್ರಾಮದ ಮುಖಂಡರು ಹಾಗೂ ಯಲ್ಲಮ್ಮದೇವಿ ಕರಗದ ಪೂಜಾರಿ ದೇವರಾಜ್ ಅವರು ರಥಗಳಿಗೆ ಪೂಜೆ ಸಲ್ಲಿಸಿದ ನಂತರ ಅಧಿಕೃತವಾಗಿ ಚಾಲನೆ ನೀಡಲಾಯಿತು. ರಥೋತ್ಸವಕ್ಕೆ ಆಗಮಿಸಿದ್ದ ಸಾವಿರಾರು ಭಕ್ತರಿಗೆ ನಗರೇಶ್ವರಸ್ವಾಮಿ ದಾಸೋಹ ಸಮಿತಿಯ ವತಿಯಿಂದ ನವಗ್ರಹ ದೇವಾಲಯದ ಆವರಣದಲ್ಲಿ ಅನ್ನದಾನ ಏರ್ಪಡಿಸಲಾಗಿತ್ತು. ಬಿಸಿಲ ಬೇಗೆಯನ್ನು ತಣಿಸಲು ದಾನಿಗಳು ಅಲ್ಲಲ್ಲಿ ಕೋಸಂಬರಿ, ಪಾನಕ ಹಾಗೂ ಮಜ್ಜಿಗೆಯನ್ನು ವಿತರಿಸಿದರು. ಭಕ್ತರು ರಥಕ್ಕೆ ಬಾಳೆಹಣ್ಣಿನ ಬದಲಿಗೆ ಹೂಗಳನ್ನು ಎಸೆದು ತಮ್ಮ ಹರಕೆ ತೀರಿಸಿದ್ದು ವಿಶೇಷವಾಗಿತ್ತು. ಈ ಸಂದರ್ಭದಲ್ಲಿ ವೀರಕುಮಾರರು, ಗ್ರಾಮದ ಹಿರಿಯ ಮುಖಂಡರು ಹಾಗೂ ಸುತ್ತಮುತ್ತಲಿನ ಹಳ್ಳಿಗಳ ಸಾವಿರಾರು ಭಕ್ತಾದಿಗಳು ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾದರು.



## ‘ಸಾರ್ವಜನಿಕರ ದಾರಿ ಒತ್ತುವರಿ ತೆರವಿಗೆ ಗ್ರಾಮಸ್ಥರ ಪಟ್ಟು’

ಕೋಲಾರ

ತಾಲ್ಲೂಕಿನ ನಂದನಬಳ್ಳಿ ಗ್ರಾಮದಿಂದ ಚಿಯಾಂಡಹಳ್ಳಿ ಮಾರ್ಗವಾಗಿ ಹಾದುಹೋಗುವ ನಕಾಶೆಯಲ್ಲಿರುವ ಸಾರ್ವಜನಿಕ ದಾರಿಯು ಒತ್ತುವರಿಯಾಗಿದ್ದು, ಕೂಡಲೇ ಅದನ್ನು ತೆರವುಗೊಳಿಸಿ ಜನಸಾಮಾನ್ಯರ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕೆಂದು ಗ್ರಾಮದ ಮುಖಂಡ ಜೆ. ರಘುಪತಿ ಸಂಬಂಧಪಟ್ಟ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

ದಾರಿ ಒತ್ತುವರಿಯ ಬಗ್ಗೆ 2024ರ ಫೆಬ್ರವರಿಯಲ್ಲೇ ಕಂದಾಯ ಸಚಿವರು, ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳಿಗೆ ಗ್ರಾಮದ ನಕಾಶೆ ಸಮೇತ ದೂರು ನೀಡಲಾಗಿತ್ತು. ಈ ದೂರನ್ನು ಗಂಭೀರವಾಗಿ ಪರಿಗಣಿಸಿದ್ದ ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳು ಒತ್ತುವರಿ ತೆರವುಗೊಳಿಸುವಂತೆ ತಹಶೀಲ್ದಾರರಿಗೆ ಸ್ಪಷ್ಟ ಆದೇಶ ನೀಡಿದ್ದರು. ಆದರೆ, ಮೇಲಧಿಕಾರಿಗಳ ಆದೇಶವನ್ನೂ ಇಲ್ಲಿನ ಅಧಿಕಾರಿಗಳು ಕ್ಯಾರೆ ಎನ್ನುತ್ತಿಲ್ಲ ಎಂಬ ದೂರು ಕೇಳಿಬಂದಿದೆ.

“ಕಳೆದ ಎರಡು ವರ್ಷಗಳಿಂದ ದಾರಿಗಾಗಿ ಸರ್ಕಾರಿ ಕಚೇರಿಗಳಿಗೆ ಅಲೆಯುತ್ತಿದ್ದರೂ ನ್ಯಾಯ ಸಿಕ್ಕಿಲ್ಲ. 2025ರ ಮಾರ್ಚ್‌ನಿಂದ ಹಿಡಿದು ಈಚೆಗೆ 2026ರ ಫೆಬ್ರವರಿವರೆಗೆ ಸುಮಾರು ಏಳೆಂಟು ಬಾರಿ ಅಧಿಕಾರಿಗಳು ಸ್ಥಳಕ್ಕೆ ಬಂದು ಪರಿಶೀಲನೆ ನಡೆಸಿದ್ದಾರೆ. ಆದರೆ, ಪ್ರತಿ ಬಾರಿಯೂ ಒತ್ತುವರಿದಾರರೊಂದಿಗೆ ಶಾಮೀಲಾಗಿ, ದಾರಿ ತೆರವು ಮಾಡದೆ ವಾಪಸ್ ಹೋಗುತ್ತಿದ್ದಾರೆ” ಎಂದು ರಘುಪತಿ ಅವರು ಅಧಿಕಾರಿಗಳ ವಿರುದ್ಧ ನೇರ ಆರೋಪ ಮಾಡಿದ್ದಾರೆ.

ಕಂದಾಯ ಇಲಾಖೆಯು 2023ರ ಅಕ್ಟೋಬರ್‌ನಲ್ಲಿ ಹೊರಡಿಸಿರುವ ಆದೇಶದ ಪ್ರಕಾರ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿಲ್ಲ. ಗ್ರಾಮದ ನಕಾಶೆಯಲ್ಲಿರುವ ದಾರಿಯನ್ನು ಉಳಿಸಿಕೊಡಲು ಅಧಿಕಾರಿಗಳು ಹಿಂದೇಟು ಹಾಕುತ್ತಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಈಗಲಾದರೂ ಜಿಲ್ಲಾಡಳಿತ ಎಚ್ಚೆತ್ತು ನಿರ್ಲಕ್ಷ್ಯ ವಹಿಸಿರುವ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡು, ಸಾರ್ವಜನಿಕ ದಾರಿಯನ್ನು ಮುಕ್ತಗೊಳಿಸಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ಅಂಬೇಡ್ಕರ್ ಜಯಂತಿಗೆ ಬಂಗಾರಪೇಟೆ ಸಜ್ಜು



ಬಂಗಾರಪೇಟೆ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಯಾವುದೇ ಒಂದು ಜಾತಿಗೆ ಸೀಮಿತವಾದವರಲ್ಲ, ಅವರು ಇಡೀ ಮಾನವಕುಲದ ಆಶಾಕಿರಣ. ಈ ಹಿನ್ನೆಲೆಯಲ್ಲಿ ತಾಲ್ಲೂಕು ಆಡಳಿತ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಹಯೋಗದೊಂದಿಗೆ ಈ ಬಾರಿ ಜಯಂತಿಯನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಶಾಸಕ ಎಸ್.ಎನ್. ನಾರಾಯಣಸ್ವಾಮಿ ತಿಳಿಸಿದರು.

ಪಟ್ಟಣದ ಪುರಸಭಾ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ ಅಂಬೇಡ್ಕರ್ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ತಬ್ಧಚಿತ್ರಗಳ ಮೆರವಣಿಗೆಗೆ ವಿಶೇಷ ಆಕರ್ಷಣೆ: ಜಯಂತಿಯ ಅಂಗವಾಗಿ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳು, ಸರ್ಕಾರಿ ಹಾಗೂ ಖಾಸಗಿ ಶಾಲೆಗಳು ಮತ್ತು ಸಂಘ–ಸಂಸ್ಥೆಗಳಿಂದ ಕಡ್ಡಾಯವಾಗಿ ಸ್ತಬ್ಧಚಿತ್ರಗಳು ಪಾಲ್ಗೊಳ್ಳಬೇಕು ಎಂದು ಶಾಸಕರು ಮನವಿ ಮಾಡಿದರು.

ಮೆರವಣಿಗೆಯಲ್ಲಿ ಭಾಗವಹಿಸುವ ಅತ್ಯುತ್ತಮ ಮೂರು ಸ್ತಬ್ಧಚಿತ್ರಗಳಿಗೆ ಆಕರ್ಷಕ ಬಹುಮಾನ ನೀಡಲಾಗುವುದು.

ಭಾಗವಹಿಸುವ ಎಲ್ಲಾ ಸ್ತಬ್ಧಚಿತ್ರಗಳಿಗೂ ಸಮಾಧಾನಕರ ಬಹುಮಾನ ನೀಡಲು ನಿರ್ಧರಿಸಲಾಗಿದೆ.

ಅಂಬೇಡ್ಕರ್ ಭವನಕ್ಕೆ 3 ಕೋಟಿ ರೂ. ಹೆಚ್ಚುವರಿ ಅನುದಾನ:

ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಅಂಬೇಡ್ಕರ್ ಭವನದ ಬಗ್ಗೆ ಮಾಹಿತಿ ನೀಡಿದ ಶಾಸಕರು, “ಭವನಕ್ಕೆ ಹೆಚ್ಚುವರಿಯಾಗಿ 3 ಕೋಟಿ ರೂ. ಅನುದಾನ ಮಂಜೂರು ಮಾಡಲಾಗಿದೆ. ಇಲ್ಲಿ ವಿಶೇಷವಾಗಿ ಐಎಎಸ್, ಐಪಿಎಸ್ ಹಾಗೂ ಕೆಎಎಸ್ ಪರೀಕ್ಷೆಗಳಿಗೆ ತರಬೇತಿ ನೀಡುವ ವಿನೂತನ ಕೇಂದ್ರವನ್ನು ಸ್ಥಾಪಿಸಲಾಗುವುದು. ಮುಂದಿನ ಆರು ತಿಂಗಳೊಳಗೆ ಭವನವನ್ನು ಲೋಕಾರ್ಪಣೆ ಮಾಡಲಾಗುವುದು,” ಎಂದರು. ಅಲ್ಲದೆ, ಭವನದ ಮುಂದಿನ ರಸ್ತೆಯನ್ನು ಅಗಲೀಕರಣಗೊಳಿಸಿ ಸಿಮೆಂಟ್ ರಸ್ತೆಯನ್ನಾಗಿ ಪರಿವರ್ತಿಸಲಾಗುವುದು ಎಂದು ಭರವಸೆ ನೀಡಿದರು.

ವೇದಿಕೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಆರ್. ಮುನಿರಾಜು, ತಹಶೀಲ್ದಾರ್ ಸುಜಾತ, ತಾ.ಪಂ. ಇಒ ರವಿಕುಮಾರ್, ಪುರಸಭಾ ಮುಖ್ಯಾಧಿಕಾರಿ ಸತ್ಯನಾರಾಯಣ, ಸಮಾಜ ಕಲ್ಯಾಣಾಧಿಕಾರಿ ಶಿವಕುಮಾರಿ ಹಾಗೂ ಪ್ರಮುಖ ಮುಖಂಡರಾದ ಸೂಲಿಕುಂಟೆ ಆನಂದ್, ಹುಣಸನಹಳ್ಳಿ ವೆಂಕಟೇಶ್ ಮತ್ತಿತರರು ಉಪಸ್ಥಿತರಿದ್ದರು.

## ಸರ್ಕಾರಿ ಜಯಂತಿಗಳ ಬಹಿಷ್ಕಾರಕ್ಕೆ ನಿರ್ಧಾರ



ಕುಣಿಗಲ್

ರಾಜ್ಯ ಕಾಂಗ್ರೆಸ್ ಸರ್ಕಾರವು ಚುನಾವಣಾ ಪೂರ್ವದಲ್ಲಿ ನೀಡಿದ್ದ ಭರವಸೆಯಂತೆ ಒಳ ಮೀಸಲಾತಿಯನ್ನು ಜಾರಿಗೊಳಿಸಲು ವಿಳಂಬ ಮಾಡುತ್ತಿರುವುದನ್ನು ಖಂಡಿಸಿ, ಏಪ್ರಿಲ್ ತಿಂಗಳಲ್ಲಿ ನಡೆಯುವ ಡಾ. ಬಾಬು ಜಗಜೀವನ್ ರಾಮ್ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಸರ್ಕಾರಿ ಜಯಂತಿ ಕಾರ್ಯಕ್ರಮಗಳನ್ನು ಸಾಮೂಹಿಕವಾಗಿ ಬಹಿಷ್ಕರಿಸಲು ತಾಲ್ಲೂಕು ಮಾದಿಗ ಸಂಘಟನೆಗಳ ಒಕ್ಕೂಟ ನಿರ್ಧರಿಸಿದೆ.

ಮಾದಿಗ ಮಹಾಸಭಾ ಜಿಲ್ಲಾಧ್ಯಕ್ಷ ವೈ.ಎಚ್. ಹುಚ್ಚಯ್ಯ ಮಾತನಾಡಿ, “ಕಳೆದ 35 ವರ್ಷಗಳಿಂದ ಒಳ ಮೀಸಲಾತಿಗಾಗಿ ನಿರಂತರ ಹೋರಾಟ ನಡೆಯುತ್ತಿದೆ. ಚಿತ್ರದುರ್ಗದ ಸಮಾವೇಶದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಮೊದಲ ಅಧಿವೇಶನದಲ್ಲೇ ಒಳ ಮೀಸಲಾತಿ ಜಾರಿ ಮಾಡುವುದಾಗಿ ಭರವಸೆ ನೀಡಿತ್ತು. ಆದರೆ ಅಧಿಕಾರಕ್ಕೆ ಬಂದು ವರ್ಷ ಕಳೆದರೂ ಸರ್ಕಾರ ಈ ಬಗ್ಗೆ ಮೌನ ವಹಿಸಿರುವುದು ಸಮುದಾಯಕ್ಕೆ ಮಾಡಿದ ದ್ರೋಹ” ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಹಿಷ್ಕಾರದ ವಿವರಗಳು:

ಏಪ್ರಿಲ್ 5: ತಾಲ್ಲೂಕು ಆಡಳಿತ ಆಚರಿಸುವ ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ್ ರಾಮ್ ಜಯಂತಿ ಬಹಿಷ್ಕಾರ.

ಏಪ್ರಿಲ್ 14: ಸರ್ಕಾರಿ ವತಿಯಿಂದ ನಡೆಯುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮಕ್ಕೆ ಬಹಿಷ್ಕಾರ.

ಸಮುದಾಯದ ಯಾವುದೇ ಬಂಧುಗಳು ಸರ್ಕಾರದ ಈ ಅಧಿಕೃತ ಕಾರ್ಯಕ್ರಮಗಳಲ್ಲಿ ಭಾಗವಹಿಸಬಾರದೆಂದು ಮನವಿ ಮಾಡಲಾಗಿದೆ.

ತಾಲ್ಲೂಕು ಮಾದಿಗ ಮಾದರ ಮಹಾಸಭಾಧ್ಯಕ್ಷ ಹಾಗೂ ಮಾಜಿ ಪುರಸಭಾ ಉಪಾಧ್ಯಕ್ಷ ಮಲ್ಲಿಪಾಳ್ಯ ಶ್ರೀನಿವಾಸ್ ಮಾತನಾಡಿ, “ನಮ್ಮ ಹಕ್ಕಿನ ಮೀಸಲಾತಿಗಾಗಿ ನಾವು ಬೀದಿಗೆ ಇಳಿಯಬೇಕಾದ ಅನಿವಾರ್ಯತೆ ಬಂದಿದೆ. ಸರ್ಕಾರ ಕೂಡಲೇ ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು” ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿಯ ಸಂಚಾಲಕ ವಿ. ಶಿವಶಂಕರ್, ಮಾದಿಗ ದಂಡೂರದ ಅಧ್ಯಕ್ಷ ನರಸಿಂಹಮೂರ್ತಿ, ಮುಖಂಡರಾದ ರಾಮಚಂದ್ರಯ್ಯ, ಕೆ.ಆರ್. ರಂಗನಾಥ್, ಕೆ.ಸಿ. ರಾಜು, ವೈ.ಟಿ. ಸಿದ್ದೇಶ್ ಕುಮಾರ್ ಸೇರಿದಂತೆ ಸಮುದಾಯದ ಅನೇಕ ಮುಖಂಡರು ಉಪಸ್ಥಿತರಿದ್ದರು.

## ಸಿದ್ದಗಂಗಾ ಶ್ರೀಗಳ ಆದರ್ಶ ಪಾಲಿಸೋಣ: ಚಂದ್ರಾರೆಡ್ಡಿ



ಬಂಗಾರಪೇಟೆ

ಸಿದ್ದಗಂಗಾ ಮಠದ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರು ಕೇವಲ ಒಬ್ಬ ವ್ಯಕ್ತಿಯಲ್ಲ, ಅವರು ಈ ಸಮಾಜಕ್ಕೆ ಸನ್ಮಾರ್ಗ ತೋರಿದ ಮಹಾಪುರುಷ. ಬಡವರ ಪಾಲಿಗೆ ಅನ್ನದಾತರಾಗಿ ಮತ್ತು ಲಕ್ಷಾಂತರ ವಿದ್ಯಾರ್ಥಿಗಳ ಪಾಲಿಗೆ ವಿದ್ಯಾದಾತರಾಗಿ ಅವರು ಸಲ್ಲಿಸಿರುವ ಸೇವೆ ಅನನ್ಯ ಎಂದು ಕಾಂಗ್ರೆಸ್ ಜಿಲ್ಲಾ ಮಾಜಿ ಅಧ್ಯಕ್ಷ ಕೆ. ಚಂದ್ರಾರೆಡ್ಡಿ ಬಣ್ಣಿಸಿದರು.

ನಗರದ ಹಳೆಯ ಪುರಸಭೆ ಕಚೇರಿ ಸಮೀಪ ಶ್ರೀವಾರಿ ಎಂಟರ್‌ಪ್ರೈಸಸ್ ಹಾಗೂ ಹಳೆಯ ವಿದ್ಯಾರ್ಥಿಗಳ ಸಹಯೋಗದಲ್ಲಿ ಬುಧವಾರ ಆಯೋಜಿಸಲಾಗಿದ್ದ ಶಿವಕುಮಾರ ಸ್ವಾಮೀಜಿ ಅವರ 119ನೇ ಜನ್ಮ ಜಯಂತ್ಯುತ್ಸವದ ಅಂಗವಾಗಿ ನಡೆದ ಅನ್ನ ದಾಸೋಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

“ಸಿದ್ದಗಂಗಾ ಮಠವು ಗ್ರಾಮೀಣ ಭಾಗದ ಸಾವಿರಾರು ಬಡ ಮಕ್ಕಳಿಗೆ ಉಚಿತ ಶಿಕ್ಷಣ ಮತ್ತು ಪ್ರಸಾದ ನೀಡುವ ಮೂಲಕ ಅವರ ಬದುಕಿಗೆ ದಾರಿದೀಪವಾಗಿದೆ. ಇಲ್ಲಿ ಅಕ್ಷರ ಕಲಿತ ಅನೇಕರು ಇಂದು ದೇಶ–ವಿದೇಶಗಳಲ್ಲಿ ವಿವಿಧ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜಕ್ಕೆ ಕೀರ್ತಿ ತರುತ್ತಿದ್ದಾರೆ. ಸ್ವಾಮೀಜಿಗಳ ಕೀರ್ತಿ ಕೇವಲ ರಾಜ್ಯಕ್ಕಷ್ಟೇ ಸೀಮಿತವಾಗದೆ ಇಡೀ ದೇಶಾದ್ಯಂತ ಪಸರಿಸಿದೆ” ಎಂದು ಶ್ಲಾಘಿಸಿದರು.

ಅನ್ನ, ಅಕ್ಷರ ಹಾಗೂ ಭಕ್ತಿ ಎಂಬ ತ್ರಿವಿಧ ದಾಸೋಹ ತತ್ವವನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡಿದ್ದ ಶ್ರೀಗಳು ತೋರಿಸಿದ ಮಾರ್ಗದಲ್ಲಿ ನಾವೆಲ್ಲರೂ ಸಾಗಬೇಕು. ಇಂತಹ ಮಹನೀಯರ ಜನ್ಮದಿನವನ್ನು ಆಚರಿಸುವುದು ನಮಗೆಲ್ಲರಿಗೂ ಪುಣ್ಯದ ಕಾರ್ಯವಾಗಿದೆ ಎಂದು ಚಂದ್ರಾರೆಡ್ಡಿ ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕರಿಗೆ ಅನ್ನ ದಾಸೋಹ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಸಬ್ ರಿಜಿಸ್ಟ್ರಾರ್ ಸುಮಲತಾ, ಶ್ರೀವಾರಿ ಎಂಟರ್‌ಪ್ರೈಸಸ್ ಮಾಲೀಕ ರವಿಕುಮಾರ್, ಮಾಜಿ ಪುರಸಭೆ ಸದಸ್ಯ ಯುವರಾಜ್, ಎಸ್. ವೆಂಕಟೇಶ್, ವಸಂತ್ ರೆಡ್ಡಿ, ಜೀವನ್ ಪ್ರಕಾಶ್ ಹಾಗೂ ಇನ್ನಿತರ ಗಣ್ಯರು ಮತ್ತು ನೂರಾರು ಭಕ್ತಾಧಿಗಳು ಉಪಸ್ಥಿತರಿದ್ದರು.

## ನಾಳೆ ಡಾ. ಬಾಬು ಜಗಜೀವನ ರಾಂ ಜಯಂತಿ

ಹೊಸಪೇಟೆ

ಜಿಲ್ಲಾಡಾಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಸಿರು ಕ್ರಾಂತಿ ಹರಿಕಾರ ಮತ್ತು ಮಾಜಿ ಉಪಪ್ರಧಾನಿಗಳಾದ ಡಾ. ಬಾಬು ಜಗಜೀವನ ರಾಂ ರವರ 119ನೇ ಜಯಂತಿ ಪ್ರಯುಕ್ತ ಏಪ್ರಿಲ್ 5 ಬೆಳಗ್ಗೆ 9 ಗಂಟೆಗೆ ನಗರಾಭಿವೃದ್ಧಿ ಪ್ರಾಧಿಕಾರ ಕಚೇರಿಯ ಮುಂದಿನ ವೃತ್ತದಲ್ಲಿರುವ ಡಾ. ಬಾಬು ಜಗಜೀವನ ರಾಂ ರವರ ಪುತ್ಥಳಿಗೆ ಮಾಲಾರ್ಪಣೆ ಮತ್ತು ಪೂಜಾ ಕಾರ್ಯಕ್ರಮ ಆಯೀಜಿಸಲಾಗಿದೆ.

# ವೃತ್ತಿಗೆ ನಿವೃತ್ತಿಯಿದೆ, ಪ್ರವೃತ್ತಿಗಲ್ಲ: ಚಂದ್ರಶೇಖರ್



ಚಿಕ್ಕಬಳ್ಳಾಪುರ

"ವೃತ್ತಿಯಿಂದ ನಿವೃತ್ತರಾಗಬಹುದು, ಆದರೆ ಸಾಹಿತ್ಯದಂತಹ ಸೃಜನಶೀಲ ಪ್ರವೃತ್ತಿಗೆ ಎಂದಿಗೂ ನಿವೃತ್ತಿಯಿಲ್ಲ. ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಲೇ ಬಿಡುವಿನ ವೇಳೆಯಲ್ಲಿ 45 ಕೃತಿಗಳನ್ನು ರಚಿಸಿರುವ ಸರಸಮ್ಮ ಅವರ ಸಾಹಿತ್ಯ ಕೃಷಿ ನಾಡಿಗೆ ಮಾದರಿ," ಎಂದು ಹಿರಿಯ ಸಾಹಿತಿ ಹಾಗೂ ವಿಮರ್ಶಕ ಚಂದ್ರಶೇಖರ್ ಬಣ್ಣಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ಜಿಲ್ಲಾ ನಿವೃತ್ತ ನೌಕರರ ಸಂಘ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಹಿರಿಯ ಸಾಹಿತಿ ಸರಸಮ್ಮ ಅವರ 'ಮಾನವ ಬಂಧುತ್ವ', 'ಸತ್ಯ ದರ್ಶನ' ಮತ್ತು 'ಬಾಳದೀವಿಗೆ' ಎಂಬ ಮೂರು ಕೃತಿಗಳನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಸರಸಮ್ಮ ಅವರ ಕೃತಿಗಳ ಬಗ್ಗೆ ವಿಶ್ಲೇಷಿಸಿದ ಚಂದ್ರಶೇಖರ್ ಅವರು, "ಸಮಸಮಾಜದ ಆಶಯಗಳಿಗೆ ಜೀವ ತುಂಬುವ ಮೌಲ್ಯಗಳೇ ಇವರ ಸಾಹಿತ್ಯದ ಜೀವಾಳ. ಇವರ 'ಮಾನವ ಬಂಧುತ್ವ' ಕಾದಂಬರಿಯು ಮುದ್ದಣ್ಣನ ರಾಮಾಶ್ವಮೇಧದ ಮನೋರಮೆಯ ಪ್ರಸಂಗವನ್ನು ನೆನಪಿಸುವಂತಿದೆ. ಸಾಮಾನ್ಯ ಚಿತ್ರಕ್ಕೆ ಸುವರ್ಣದ ಚೌಕಟ್ಟು ಹಾಕಿದಂತೆ ಈ ಕೃತಿಯನ್ನು ಬಹಳ ಸೊಗಸಾಗಿ ರಚಿಸಿದ್ದಾರೆ," ಎಂದು ಶ್ಲಾಘಿಸಿದರು.

ಕಾರ್ಯಕ್ರಮದ ಕೇಂದ್ರಬಿಂದು ಹಾಗೂ ಲೇಖಕಿ ಸರಸಮ್ಮ ಮಾತನಾಡಿ, "ಸಾಹಿತ್ಯವೇ ನನ್ನ ಬದುಕಿನ ಜೀವಾಳ. ಇಂದಿನ ಮಹಿಳೆಯರು ಟಿವಿ ಧಾರಾವಾಹಿಗಳ ವ್ಯಾಮೋಹವನ್ನು ಬಿಟ್ಟು ಸಾಹಿತ್ಯ, ಕಲೆ ಹಾಗೂ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಪುಸ್ತಕಗಳನ್ನು ಕೊಂಡು ಓದುವ ಮೂಲಕ ಸಾಹಿತಿಗಳನ್ನು ಪ್ರೋತ್ಸಾಹಿಸಬೇಕು," ಎಂದು ಕರೆ ನೀಡಿದರು.

ನಿವೃತ್ತ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಿ.ವಿ. ಕೃಷ್ಣ ಮಾತನಾಡಿ, ಸರಸಮ್ಮ ಅವರ ಸಾಹಿತ್ಯದ ಮೇಲಿನ ನಿರಂತರ ಆಸಕ್ತಿ ಎಲ್ಲರಿಗೂ ಆದರ್ಶಪ್ರಾಯ ಎಂದರು. ವೇದಿಕೆಯಲ್ಲಿ ಕಸಾಪ ಜಿಲ್ಲಾಧ್ಯಕ್ಷ ಡಾ. ಕೋಡಿರಂಗಪ್ಪ, ನಿವೃತ್ತ ಅಧಿಕಾರಿ ಸಿ. ಅಶ್ವತ್ಥನಾರಾಯಣ, ಡಾ. ಶ್ಯಾಮಸುಂದರ್, ಹಿರಿಯ ಸಾಹಿತಿ ಗೋಪಾಲಗೌಡ ಕಲ್ವಮಂಜಲಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಶೌರ್ಯ ಜಾಗೃತಿಗಾಗಿ ಗದಾಪೂಜೆ: ರಾಮರಾಜ್ಯ ಸ್ಥಾಪನೆಗೆ ಭಕ್ತರ ಪ್ರತಿಜ್ಞೆ

ಬೆಂಗಳೂರು

ಜಗತ್ತು ಯುದ್ಧದ ಅಂಚಿನಲ್ಲಿರುವ ಈ ಸಂಕಷ್ಟದ ಸಮಯದಲ್ಲಿ ಸಮಾಜದಲ್ಲಿ ಶೌರ್ಯ ಮತ್ತು ಭಕ್ತಿಯ ಜಾಗೃತಿ ಮೂಡಿಸುವ ಉದ್ದೇಶದಿಂದ, ಹನುಮ ಜಯಂತಿಯ ಅಂಗವಾಗಿ ಹಿಂದೂ ಜನಜಾಗೃತಿ ಸಮಿತಿಯ ವತಿಯಿಂದ ದೇಶಾದ್ಯಂತ 850ಕ್ಕೂ ಹೆಚ್ಚು ಸ್ಥಳಗಳಲ್ಲಿ ಹಮ್ಮಿಕೊಂಡಿದ್ದ 'ಸಾಮೂಹಿಕ ಗದಾಪೂಜೆ' ಕಾರ್ಯಕ್ರಮವು ಅತ್ಯಂತ ಯಶಸ್ವಿಯಾಗಿ ಸಂಪನ್ನಗೊಂಡಿತು.

ಬೆಂಗಳೂರಿನ ವಿವಿಧೆಡೆ ನಡೆದ ಈ ಕಾರ್ಯಕ್ರಮಗಳಲ್ಲಿ ಸಾವಿರಾರು ಯುವಕರು ಪಾಲ್ಗೊಂಡು ರಾಮರಾಜ್ಯದ ಸ್ಥಾಪನೆಗಾಗಿ ವಿಜಯದ ಸಂಕಲ್ಪ ಮಾಡಿದರು.

ಕಾರ್ಯಕ್ರಮದ ಕುರಿತು ಮಾತನಾಡಿದ ಸಮಿತಿಯ ಪದಾಧಿಕಾರಿಗಳು, "ಇತಿಹಾಸದ ಪುಟಗಳನ್ನು ಗಮನಿಸಿದರೆ ಹನುಮಂತನು ಎಲ್ಲಿದ್ದಾನೋ ಅಲ್ಲಿ ವಿಜಯ ನಿಶ್ಚಿತ ಎಂಬುದು ಸಾಬೀತಾಗಿದೆ. ರಾಮಾಯಣದಲ್ಲಿ ರಾವಣನ ಸಂಹಾರವಿರಲಿ ಅಥವಾ ಮಹಾಭಾರತದ ಯುದ್ಧದಲ್ಲಿ ಅರ್ಜುನನ ರಥದ ಧ್ವಜದ ಮೇಲೆ ವಿರಾಜಮಾನನಾಗಿದ್ದ ಮಾರುತಿಯೇ ಇರಲಿ, ಅಧರ್ಮದ



ವಿರುದ್ಧ ಧರ್ಮಕ್ಕೆ ಬಲ ನೀಡಿದ ಶಕ್ತಿ ಹನುಮಂತನದ್ದು. ಛತ್ರಪತಿ ಶಿವಾಜಿ ಮಹಾರಾಜರ ಕಾಲದಲ್ಲಿ ಸಮರ್ಥ ರಾಮದಾಸ ಸ್ವಾಮಿಗಳು ಗ್ರಾಮಗಳಲ್ಲಿ ಮಾರುತಿ ಮಂದಿರಗಳನ್ನು ಸ್ಥಾಪಿಸಿ ಬಲೋಪಾಸನೆ ಆರಂಭಿಸಿದ್ದು ಸ್ವರಾಜ್ಯ ಸ್ಥಾಪನೆಗೆ ಅಡಿಪಾಯವಾಯಿತು" ಎಂದು ಸ್ಮರಿಸಿದರು.

ಧಾರ್ಮಿಕ ವಿಧಿವಿಧಾನಗಳು: ಗದಾಪೂಜೆಯ ಅಂಗವಾಗಿ ವಿಶೇಷ ಪೂಜಾ ವಿಧಿಗಳು ನಡೆದವು.

ಗಣಪತಿ ಪೂಜೆ ಹಾಗೂ ಗದಾಪೂಜೆ: ಶ್ರದ್ಧಾಭಕ್ತಿಯಿಂದ ಹನುಮಂತನ ಅಸ್ತ್ರವಾದ ಗದೆಗೆ ಪೂಜೆ ಸಲ್ಲಿಸಲಾಯಿತು.

ನಾಮಜಪ ಮತ್ತು ಸ್ತೋತ್ರ: ಮಾರುತಿ ಸ್ತೋತ್ರ ಪಠಣ ಹಾಗೂ 'ಶ್ರೀ ಹನುಮತೇ ನಮಃ' ಎಂಬ ಸಾಮೂಹಿಕ ನಾಮಜಪ ಮಾಡಲಾಯಿತು.

ಶಂಖನಾದ: ಕಾರ್ಯಕ್ರಮದ ಆರಂಭದಲ್ಲಿ ಶಂಖನಾದ ಮಾಡುವ ಮೂಲಕ ಭಕ್ತಿಯ ವಾತಾವರಣ ನಿರ್ಮಿಸಲಾಯಿತು.

ಕಾರ್ಯಕ್ರಮದ ಕೊನೆಯಲ್ಲಿ 'ರಾಮರಾಜ್ಯದ ಸ್ಥಾಪನೆಗಾಗಿ ಮಾರುತಿಯ ಗುಣಗಳನ್ನು ಅಳವಡಿಸಿಕೊಳ್ಳುವುದು ಹೇಗೆ?' ಎಂಬ ವಿಷಯದ ಬಗ್ಗೆ ಮಾರ್ಗದರ್ಶನ ನೀಡಲಾಯಿತು. ಇದೇ ವೇಳೆ ಪಾಲ್ಗೊಂಡಿದ್ದ ಎಲ್ಲಾ ಹಿಂದುತ್ವನಿಷ್ಠರು ಮತ್ತು ಶ್ರದ್ಧಾಳುಗಳು ಧರ್ಮ ಸಂಸ್ಥಾಪನೆಗಾಗಿ ಸಾಮೂಹಿಕವಾಗಿ ಪ್ರತಿಜ್ಞಾವಿಧಿ ಸ್ವೀಕರಿಸಿದರು. ಕಳೆದ ನಾಲ್ಕು ವರ್ಷಗಳಿಂದ ನಿರಂತರವಾಗಿ ಈ ಕಾರ್ಯಕ್ರಮವನ್ನು ಆಯೋಜಿಸುತ್ತಾ ಬರುತ್ತಿರುವ ಸಮಿತಿಯು, ಈ ಬಾರಿಯೂ ಯುವಜನತೆಯಿಂದ ಅಭೂತಪೂರ್ವ ಸ್ಪಂದನೆ ಪಡೆದಿದೆ.

ಕಾರ್ಯಕ್ರಮದಲ್ಲಿ ಹಿಂದೂ ಜನಜಾಗೃತಿ ಸಮಿತಿಯ ಬೆಂಗಳೂರು ಜಿಲ್ಲಾ ಸಮನ್ವಯಕಾರರಾದ ಶರತ್ ಕುಮಾರ್ ಹಾಗೂ ವಿವಿಧ ಹಿಂದೂ ಪರ ಸಂಘಟನೆಗಳ ಪ್ರತಿನಿಧಿಗಳು ಮತ್ತು ಸಾವಿರಾರು ಭಕ್ತರು ಉಪಸ್ಥಿತರಿದ್ದರು.



# ಗ್ಯಾಸ್ ಬಂಕ್ ಬಳಿ ಆಟೋ ಚಾಲಕರ ಧರಣಿ

ಬಳ್ಳಾರಿ

ಆಟೋ ಚಾಲಕರಿಗೆ ಗ್ಯಾಸ್ ಸ್ಟಾಕ್ ಇಲ್ಲವೆಂದು ಎಲ್‌ಪಿಜಿ ಗ್ಯಾಸ್ ಬಂಕ್ ನವರು ಸಾಗ ಹಾಕುತ್ತಿರುವ ಹಿನ್ನೆಲೆ ಬಳ್ಳಾರಿಯಲ್ಲಿ ಜನಜಾಗೃತಿ ಸಂಘದಿಂದ ತುರ್ತು ಪ್ರತಿಭಟನೆ ನಡೆಸಿ ಗ್ಯಾಸ್ ಹಾಕುವಂತೆ ಒತ್ತಾಯಿಸಿದ ಪ್ರಸಂಗ ಜರುಗಿದೆ.

ಸಂಘದ ಅಧ್ಯಕ್ಷ ಹುಂಡೇಕಾರ್ ರಾಜೇಶ್ ಅವರ ನೇತೃತ್ವದಲ್ಲಿ ನಗರದ ಆಟೋ ಚಾಲಕರೆಲ್ಲ ಒಗ್ಗೂಡಿ ಸ್ಥಳೀಯ ದುರ್ಗಮ್ಮ ಗುಡಿ ದೇವಸ್ಥಾನ ಬಳಿಯ ಗಾಂಧಿನಗರ ರಸ್ತೆಯಲ್ಲಿರುವ ಗ್ಯಾಸ್ ಬಂಕ್ ಮುಂದೆ ಧರಣಿ ನಡೆಸಿದರು. ನಗರದಲ್ಲಿರುವ ವಿವಿಧ ಬಂಕ್‌ನಲ್ಲಿ ಒಂದೊಂದು ದರ ನಿಗದಿಯಾಗಿದೆ. ಗಾಂಧಿನಗರ ಮಾರ್ಗದಲ್ಲಿರುವ ಎಲ್.ಪಿ.ಜಿ. ಗ್ಯಾಸ್ ಬಂಕ್ ನಲ್ಲಿ ಗ್ಯಾಸ್ ಇಲ್ಲವೆಂದು ಸ್ಪಷ್ಟಪಡಿಸಿದ್ದಾರೆ. ಅಧಿಕಾರಿಗಳು ಗ್ಯಾಸ್ ಕೊರತೆ ಇಲ್ಲವೆಂದು ಹೇಳುತ್ತಿದ್ದಾರೆ. ಇದರಿಂದ ಆಟೋ ಚಾಲಕರು ಗೊಂದಲಕ್ಕೀಡಾಗಿದ್ದಾರೆ.ದರಿಂದ ತೊಂದರೆ ಆಗುತ್ತಿದೆ. ಆಟೋ ನಂಬಿ ಜೀವನ ನಡೆಸುತ್ತಿರುವ ಚಾಲಕರಿಗೆ ಕಷ್ಟವಾಗುತ್ತಿದೆ. ಜಿಲ್ಲಾಧಿಕಾರಿಗಳು ಮಧ್ಯೆ ಪ್ರವೇಶಿಸಿ ನಗರದಲ್ಲಿರುವ ಎಲ್ಲ ಎಲ್.ಪಿ.ಜಿ. ಗ್ಯಾಸ್ ಬಂಕ್‌ಗಳಲ್ಲಿ ಗ್ಯಾಸ್ ಲಭ್ಯವಾಗುವಂತೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

# 15ರವರೆಗೆ ಸ್ವಯಂ ಗಣನೆಗೆ ಡಿಸಿ ಕರೆ



ತುಮಕೂರು

ಭಾರತ ಸರ್ಕಾರದ ಜನಗಣತಿ-2027 ಕಾರ್ಯದ ಅಂಗವಾಗಿ ತುಮಕೂರು ಜಿಲ್ಲೆಯಲ್ಲಿ ಇದೇ 15ರವರೆಗೆ ಸ್ವಯಂ ಗಣನೆ ಪ್ರಕ್ರಿಯೆಯನ್ನು ನಡೆಸಲಾಗುತ್ತದೆ ಎಂದು ಡಿಸಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಈ ಅವಧಿಯಲ್ಲಿ ಜಿಲ್ಲೆಯ ಎಲ್ಲಾ ಕುಟುಂಬಗಳು ತಮಗೆ ಸಂಬಂಧಿಸಿದ ಜನಗಣತಿ ಮಾಹಿತಿಯನ್ನು ಸ್ವಯಂವಾಗಿ ಆನ್‌ಲೈನ್ ಮೂಲಕ ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. ಸ್ವಯಂ ಗಣನೆ ಪ್ರಕ್ರಿಯೆಯಲ್ಲಿ ಭಾಗವಹಿಸುವುದರಿಂದ ಜನಗಣತಿ ಕಾರ್ಯವು ವೇಗವಾಗಿ, ಸುಲಭವಾಗಿ ಮತ್ತು ಶುದ್ಧತೆಯಿಂದ ಪೂರ್ಣಗೊಳ್ಳಲು ಸಹಕಾರಿ ಆಗುತ್ತದೆ. ಭಾರತ ಸರ್ಕಾರದ ಅಧಿಕೃತ ಪೋರ್ಟಲ್, ಮೊಬೈಲ್ ಆಪ್ ಮೂಲಕ ಆನ್‌ಲೈನ್‌ನಲ್ಲಿ ಪ್ರಶ್ನಾವಳಿಯನ್ನು ಭರ್ತಿ ಮಾಡಬಹುದು. ಮಾಹಿತಿಯನ್ನು ಪೂರ್ಣಗೊಳಿಸಿದ ನಂತರ, ಒಂದು ಕೋಡ್ ರಚನೆಯಾಗುತ್ತದೆ. ನಂತರ ಗಣತಿ ಸಿಬ್ಬಂದಿ ಮನೆಗೆ ಭೇಟಿ ನೀಡುವ ಸಂದರ್ಭದಲ್ಲಿ, ಈ ಕೋಡ್ ಅನ್ನು ಸ್ಕ್ಯಾನ್ ಮಾಡಿ ಮಾಹಿತಿಯನ್ನು ಪರಿಶೀಲಿಸಲಾಗುತ್ತದೆ. ಸ್ವಯಂ ಗಣನೆ ಮಾಡದ ಕುಟುಂಬಗಳಿಗೆ ನಂತರ ಜನಗಣತಿ ಸಿಬ್ಬಂದಿ ಮನೆ-ಮನೆಗೆ ಭೇಟಿ ನೀಡಿ ಮಾಹಿತಿಯನ್ನು ಸಂಗ್ರಹಿಸುವರು. ಜಿಲ್ಲೆಯ ಎಲ್ಲಾ ನಾಗರಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು, ಸಮಯಕ್ಕೆ ಸರಿಯಾಗಿ ಸ್ವಯಂ ಗಣನೆ ಪ್ರಕ್ರಿಯೆಯಲ್ಲಿ ಭಾಗವಹಿಸಿ ಎಂದು ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಗ್ರಾಮಾಂತರ ವ್ಯಾಪ್ತಿಯ ಸಮೀಪದ ತಾಲ್ಲೂಕು ಕಚೇರಿ ಮತ್ತು ನಗರ ಪ್ರದೇಶಗಳ ವ್ಯಾಪ್ತಿಯ ನಗರ ಸ್ಥಳೀಯ ಸಂಸ್ಥೆಗಳ ಜನಗಣತಿ ಕಚೇರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

# ಮಾಲೂರಿನಲ್ಲಿ ಜನಗಣತಿ ಅಭಿಯಾನಕ್ಕೆ ನ್ಯಾಯಾಧೀಶ ದಯಾನಂದ್ ಚಾಲನೆ

ಮಾಲೂರು

ದೇಶದ ಭವಿಷ್ಯದ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲು ಜನಗಣತಿ ಅತ್ಯಂತ ಪ್ರಮುಖ ಆಧಾರವಾಗಿದೆ. 2027ರ ಜನಗಣತಿಯ ಮೊದಲ ಹಂತದ ಮನೆಪಟ್ಟಿ ಕಾರ್ಯಾಚರಣೆಯು ಏಪ್ರಿಲ್ 1 ರಿಂದ 15 ರವರೆಗೆ ನಡೆಯಲಿದ್ದು, ಸಾರ್ವಜನಿಕರು ಗಣತಿದಾರರು ಕೇಳುವ 33 ಪ್ರಶ್ನೆಗಳಿಗೆ ಸಮರ್ಪಕ ಮಾಹಿತಿ ನೀಡುವ ಮೂಲಕ ಈ ರಾಷ್ಟ್ರೀಯ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಹಿರಿಯ ಶ್ರೇಣಿ ನ್ಯಾಯಾಧೀಶರಾದ ದಯಾನಂದ್ ತಿಳಿಸಿದರು.

ಗುಡ್ನಹಳ್ಳಿ ರಸ್ತೆಯ ನ್ಯಾಯಾಧೀಶರ ವಸತಿ ಸಂಕೀರ್ಣದಲ್ಲಿರುವ ತಮ್ಮ ನಿವಾಸದಲ್ಲಿ ಮೊಬೈಲ್ ಮೂಲಕ 'ಸ್ವಯಂ ಗಣತಿ' ನೊಂದಾಯಿಸುವ ಮೂಲಕ ಅವರು ಅಭಿಯಾನಕ್ಕೆ ಚಾಲನೆ ನೀಡಿದರು.

ಸರ್ಕಾರದ ಯೋಜನೆಗಳಿಗೆ ಜನಗಣತಿಯೇ ಅಡಿಪಾಯ: ನ್ಯಾಯಾಧೀಶರು ಮಾತನಾಡಿ, "ಪ್ರತಿ 10 ವರ್ಷಕ್ಕೊಮ್ಮೆ ನಡೆಯುವ ಈ ಪ್ರಕ್ರಿಯೆಯು



ಸರ್ಕಾರಗಳಿಗೆ ಹೊಸ ಯೋಜನೆಗಳನ್ನು ರೂಪಿಸಲು ಅನುಕೂಲ ಮಾಡಿಕೊಡುತ್ತದೆ. ನಗರ ಪ್ರದೇಶದಲ್ಲಿ ಸುಮಾರು 100 ಬ್ಲಾಕ್‌ಗಳನ್ನು ಗುರುತಿಸಲಾಗಿದ್ದು, ಏಪ್ರಿಲ್ 15 ರವರೆಗೆ ಸಾರ್ವಜನಿಕರು ಸ್ವಯಂ ಮಾಹಿತಿ ದಾಖಲಿಸಲು ಅವಕಾಶವಿದೆ. ಏಪ್ರಿಲ್ 16 ರಿಂದ ಮೇ 15 ರವರೆಗೆ ಗಣತಿದಾರರು ಮನೆ ಮನೆಗೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳಲಿದ್ದಾರೆ," ಎಂದು ವಿವರಿಸಿದರು.

ಗಣತಿದಾರರ ತಂಡ ಸಜ್ಜು: ನಗರಸಭೆಯ ಅಧಿಕಾರಿಗಳು, ಸಿಬ್ಬಂದಿ, ಶಿಕ್ಷಕರು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಗಣತಿದಾರರಾಗಿ ಕಾರ್ಯನಿರ್ವಹಿಸಲಿದ್ದಾರೆ. ಸಾರ್ವಜನಿಕರು ಯಾವುದೇ ಆತಂಕವಿಲ್ಲದೆ ಸಮೀಕ್ಷೆದಾರರಿಗೆ ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಶ್ರೀನಿವಾಸ್, ನಂದೀಶ್, ನಗರಸಭೆ ಸಿಬ್ಬಂದಿ ಹಾಗೂ ನ್ಯಾಯಾಲಯದ ಸಿಬ್ಬಂದಿ ಪವನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎಲ್‌ಪಿಜಿ ಕೊರತೆಯಿಲ್ಲ: ಆಟೋ ಎಲ್‌ಪಿಜಿ ಪೂರೈಕೆ ಮತ್ತಷ್ಟು ಹೆಚ್ಚಳ

ದೊಡ್ಡಬಳ್ಳಾಪುರ

ರಾಜ್ಯದ ಎಲ್ಲಾ ವಲಯಗಳಿಗೂ ಯಾವುದೇ ಅಡೆತಡೆಯಿಲ್ಲದೆ ಎಲ್‌ಪಿಜಿ ಸರಬರಾಜು ಮಾಡಲಾಗುತ್ತಿದ್ದು, ವಿಶೇಷವಾಗಿ ಆಟೋ ಎಲ್‌ಪಿಜಿ ಪೂರೈಕೆಯಲ್ಲಿ ಯಾವುದೇ ಕೊರತೆಯಿಲ್ಲ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸ್ಪಷ್ಟಪಡಿಸಿದೆ.

ರಾಜ್ಯ ಸರ್ಕಾರವು ಎಲ್‌ಪಿಜಿ ಪೂರೈಕೆ ವ್ಯವಸ್ಥೆಯನ್ನು ನಿಕಟವಾಗಿ ಗಮನಿಸುತ್ತಿದೆ. ಪ್ರಸ್ತುತ ಕರ್ನಾಟಕದಾದ್ಯಂತ ಒಟ್ಟು 72 ಆಟೋ ಎಲ್‌ಪಿಜಿ ಡಿಸ್ಪೆನ್ಸಿಂಗ್ ಸ್ಟೇಷನ್‌ಗಳು ಕಾರ್ಯನಿರ್ವಹಿಸುತ್ತಿವೆ. ಇವುಗಳಲ್ಲಿ ಬೆಂಗಳೂರು ನಗರವೊಂದರಲ್ಲೇ 31 ಕೇಂದ್ರಗಳು ಲಭ್ಯವಿವೆ. ಪ್ರಮುಖ ತೈಲ ಕಂಪನಿಗಳಾದ



ಮತ್ತು ಮೂಲಕ ಸದ್ಯ ಪ್ರತಿ ಲೀಟರ್‌ಗೆ ರೂ. 77.74 ರ ದರದಲ್ಲಿ ಆಟೋ ಎಲ್‌ಪಿಜಿ ಪೂರೈಸಲಾಗುತ್ತಿದೆ.

ಕಳೆದ ವಾರದಲ್ಲಿ ದಿನಕ್ಕೆ ಸರಾಸರಿ 64.9 ಮೆಟ್ರಿಕ್ ಟನ್ ಆಟೋ ಎಲ್‌ಪಿಜಿಯನ್ನು ವಿತರಿಸಲಾಗಿದೆ. ಈ ಹಿಂದೆ (ಸಂಘರ್ಷದ ಮೊದಲು) ಈ ಪ್ರಮಾಣವು ದಿನಕ್ಕೆ 57.6 ಮೆಟ್ರಿಕ್ ಟನ್ ಇತ್ತು. ಇದು ಪೂರೈಕೆಯಲ್ಲಿನ ಗಮನಾರ್ಹ ಹೆಚ್ಚಳವನ್ನು ತೋರಿಸುತ್ತಿದ್ದು, ವಾಹನ ಸವಾರರು ಆತಂಕ ಪಡುವ ಅಗತ್ಯವಿಲ್ಲ ಎಂದು ಇಲಾಖೆ ತಿಳಿಸಿದೆ.

ಗೃಹ ಮತ್ತು ವಾಣಿಜ್ಯ ಬಳಕೆಯ ಅಂಕಿ-ಅಂಶ: ರಾಜ್ಯದಾದ್ಯಂತ ಪ್ರತಿದಿನ ಸುಮಾರು 4 ಲಕ್ಷ ಗೃಹ ಬಳಕೆ ಎಲ್‌ಪಿಜಿ ಸಿಲಿಂಡರ್‌ಗಳು. 18,000 ವಾಣಿಜ್ಯ ಬಳಕೆ ಸಿಲಿಂಡರ್‌ಗಳನ್ನು ಪೂರೈಕೆ ಮಾಡಲಾಗುತ್ತಿದೆ. ಎಲ್ಲಾ ವಲಯಗಳಿಗೂ ಎಲ್‌ಪಿಜಿ ಸರಬರಾಜು ನಿರಂತರವಾಗಿ ಆಗುವುದನ್ನು ಖಚಿತಪಡಿಸಿಕೊಳ್ಳಲು ರಾಜ್ಯ ಸರ್ಕಾರವು ಪರಿಸ್ಥಿತಿಯ ಮೇಲೆ ಹದ್ದಿನ ಕಣ್ಣಿಟ್ಟಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಕೇಂದ್ರದ ಜನಪರ ಯೋಜನೆಗಳೇ ಬಿಜೆಪಿಗೆ ಶ್ರೀರಕ್ಷೆ: ವೆಂಕಟೇಶ್

ವಿಜಯಪುರ

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಜನಪರ ಯೋಜನೆಗಳು ಹಾಗೂ ಅಭಿವೃದ್ಧಿ ಕಾರ್ಯಗಳೇ ಮುಂಬರುವ ಚುನಾವಣೆಗಳಲ್ಲಿ ಬಿಜೆಪಿ ಅಭ್ಯರ್ಥಿಗಳ ಗೆಲುವಿಗೆ ಮತ್ತು ಪಕ್ಷದ ಸಂಘಟನೆಗೆ ಶಕ್ತಿಯಾಗಲಿವೆ ಎಂದು ಬಿಜೆಪಿ ಟೌನ್ ಅಧ್ಯಕ್ಷ ವೆಂಕಟೇಶ್ ಪ್ರಭು ವಿಶ್ವಾಸ ವ್ಯಕ್ತಪಡಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಭಾನುವಾರ ಆಯೋಜಿಸಲಾಗಿದ್ದ 'ಮನ್ ಕೀ ಬಾತ್' ಕಾರ್ಯಕ್ರಮದಲ್ಲಿ ಪಾಲ್ಗೊಂಡು, 5ನೇ ವಾರ್ಡ್‌ನ ವಿವಿಧ ಮುಖಂಡರನ್ನು ಪಕ್ಷಕ್ಕೆ ಬರಮಾಡಿಕೊಂಡು ಅವರು ಮಾತನಾಡಿದರು.

"ಹಿರಿಯ ನಾಯಕರ ಮಾರ್ಗದರ್ಶನದಂತೆ ಬೂತ್ ಮಟ್ಟದಿಂದಲೇ ಪಕ್ಷವನ್ನು ಬಲಿಷ್ಠವಾಗಿ ಕಟ್ಟಲು ಯೋಜಿಸಲಾಗಿದೆ. ನಿಷ್ಠಾವಂತ ಕಾರ್ಯಕರ್ತರು ಈ ನಿಟ್ಟಿನಲ್ಲಿ ಶ್ರಮಿಸುತ್ತಿದ್ದಾರೆ. ಇಡೀ ದೇಶವೇ ಮೋದಿ ಅವರ ನಾಯಕತ್ವವನ್ನು ಒಪ್ಪಿಕೊಂಡಿದ್ದು, ಅವರ ಹಾದಿಯಲ್ಲಿ ನಾವೆಲ್ಲರೂ ಸಾಗಬೇಕಿದೆ" ಎಂದು ವೆಂಕಟೇಶ್ ಪ್ರಭು ತಿಳಿಸಿದರು.

ಬಿಜೆಪಿ ಓಬಿಸಿ ಮಾಜಿ ಜಿಲ್ಲಾಧ್ಯಕ್ಷ ಕನಕರಾಜು ಮಾತನಾಡಿ, "ಜಾತಿ, ಮತ ಭೇದವಿಲ್ಲದೆ ಕೇವಲ ಕೆಲಸ ಮಾಡುವ ಕಾರ್ಯಕರ್ತರನ್ನು ಗುರುತಿಸಿ ಬೆಳೆಸುವ



ಏಕೈಕ ಪಕ್ಷ ಬಿಜೆಪಿ. ಇಲ್ಲಿ ನಿಷ್ಠೆಯಿಂದ ದುಡಿಯುವವರಿಗೆ ಮಾತ್ರ ಹೆಚ್ಚಿನ ಅವಕಾಶಗಳು ಮುಕ್ತವಾಗಿವೆ. ಹಿರಿಯರ ಮಾರ್ಗದರ್ಶನದಲ್ಲಿ ಪಕ್ಷವನ್ನು ತಳಮಟ್ಟದಿಂದ ಸಂಘಟಿಸುವ ಅಗತ್ಯವಿದೆ" ಎಂದರು.

ಕಾರ್ಯಕ್ರಮದಲ್ಲಿ ಮುನಿರಾಜು, ಅಭಿ, ಕಿಶನ್, ಶ್ರೀನಿವಾಸ್, ಮಹದೇವಪ್ಪ, ಶಿವಕುಮಾರ್, ಗಿರಿಬಾಬು, ನರಸಿಂಹ ಹಾಗೂ ಪ್ರದೀಪ್ ಅವರು ಅಧಿಕೃತವಾಗಿ ಬಿಜೆಪಿ ಪಕ್ಷಕ್ಕೆ ಸೇರ್ಪಡೆಗೊಂಡರು.

ಈ ಸಂದರ್ಭದಲ್ಲಿ ತಾಲ್ಲೂಕು ಉಪಾಧ್ಯಕ್ಷ ರಾಮು ಭಗವಾನ್, ಟೌನ್ ಉಪಾಧ್ಯಕ್ಷರಾದ ಸಿ. ಮುನಿಕೃಷ್ಣಪ್ಪ, ಮಂಜುನಾಥ್, ಶಿವಕುಮಾರ್, ತಾಯಮ್ಮ, ಕಾರ್ಯದರ್ಶಿಗಳಾದ ರಾಜಪ್ಪ, ಚಂದ್ರಶೇಖರ್, ಪುರಸಭೆ ಮಾಜಿ ಸದಸ್ಯ ವರದರಾಜು ಹಾಗೂ ಮುಖಂಡ ಬುಲೆಟ್ ರಾಮಚಂದ್ರಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜೈ ಫೌಂಡೇಶನ್‌ನಿಂದ ಸುಧಾಕರ್ ಕಾರ್ಯಕ್ಕೆ ಬೆಂಬಲ

ಚಿಕ್ಕಬಳ್ಳಾಪುರ

ಸಂಸತ್ ಅಧಿವೇಶನದಲ್ಲಿ ಚಿಕ್ಕಬಳ್ಳಾಪುರ, ಕೋಲಾರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಜ್ವಲಂತ ಸಮಸ್ಯೆಯಾದ ಕುಡಿಯುವ ನೀರು ಹಾಗೂ ನೀರಾವರಿ ಯೋಜನೆಗಳ ಬಗ್ಗೆ ಧ್ವನಿ ಎತ್ತಿದ ಸಂಸದ ಡಾ. ಕೆ. ಸುಧಾಕರ್ ಅವರ ಕ್ರಮವನ್ನು ಜೈ ಫೌಂಡೇಶನ್ ಸೇವಾ ಸಂಸ್ಥೆಯ ಅಧ್ಯಕ್ಷ ಡಾ. ಜಯಕುಮಾರ್ ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.

ಸಂಸದರು ತಮಗೆ ದೊರೆತ ಅವಕಾಶವನ್ನು ಸದ್ವಿನಿಯೋಗ ಮಾಡಿಕೊಂಡು ಈ ಭಾಗದ 65 ಲಕ್ಷ ಜನತೆಯ ಪರವಾಗಿ ದನಿ ಎತ್ತಿರುವುದು ಅತ್ಯಂತ ಸಮಯೋಚಿತವಾಗಿದೆ ಎಂದು ಅವರು ತಿಳಿಸಿದ್ದಾರೆ.

ಕೃಷ್ಣಾ ನದಿ ನೀರು ಹಾಗೂ 3ನೇ ಹಂತದ ಶುದ್ಧೀಕರಣಕ್ಕೆ ಆಗ್ರಹ:



ಲೋಕಸಭೆಯಲ್ಲಿ ಸಂಸದರು ಮಂಡಿಸಿದ ಪ್ರಮುಖ ವಿಷಯಗಳನ್ನು ಡಾ. ಜಯಕುಮಾರ್ ಅವರು ಈ ಕೆಳಗಿನಂತೆ ಸ್ಮರಿಸಿದರು.

ಹೆಚ್.ಎನ್. ವ್ಯಾಲಿ ಮತ್ತು ಕೆ.ಸಿ. ವ್ಯಾಲಿ: ಈ ಯೋಜನೆಗಳಿಂದ ಹರಿದು ಬರುತ್ತಿರುವ ನೀರಿಗೆ ಮೂರನೇ ಹಂತದ ಶುದ್ಧೀಕರಣ ಘಟಕ ಅಳವಡಿಸಲು ಕೇಂದ್ರದ ಸಹಕಾರ ಕೋರಿದ್ದಾರೆ.

ಕೃಷ್ಣಾ ನದಿ ನೀರು: ಆಂಧ್ರ ಪ್ರದೇಶದ ಸಮೀಪ ಹರಿಯುತ್ತಿರುವ ಪರಿಶುದ್ಧವಾದ ಕೃಷ್ಣಾ ನದಿ ನೀರನ್ನು ಚಿಕ್ಕಬಳ್ಳಾಪುರ ಜಿಲ್ಲೆಗೆ ಹರಿಸುವ ಪ್ರಯತ್ನಕ್ಕೆ ಕೇಂದ್ರ ಸರ್ಕಾರ ಬೆಂಬಲ ನೀಡಬೇಕೆಂದು ಒತ್ತಾಯಿಸಿದ್ದಾರೆ.

ಜೈ ಫೌಂಡೇಶನ್ ಬೆಂಬಲ: ಸುದ್ದಿಗಾರರೊಂದಿಗೆ ಮಾತನಾಡಿದ ಡಾ. ಜಯಕುಮಾರ್, "ಡಾ. ಕೆ. ಸುಧಾಕರ್ ಅವರು ಕೇವಲ ತಮ್ಮ ಕ್ಷೇತ್ರದ ಮತದಾರರ ಸಮಸ್ಯೆಗಳ ಬಗ್ಗೆ ಮಾತ್ರವಲ್ಲದೆ, ನೆರೆಹೊರೆಯ ಜಿಲ್ಲೆಗಳ ಜನರ ಕಷ್ಟಕ್ಕೂ ಸ್ಪಂದಿಸುವ ಮೂಲಕ ತಾವು ಜನಪರ ಕಾಳಜಿಯುಳ್ಳ ರಾಜಕಾರಣಿ ಎಂಬುದನ್ನು ಸಾಬೀತುಪಡಿಸಿದ್ದಾರೆ. ನೀರಾವರಿ ಸಮಸ್ಯೆ ನಿವಾರಣೆಗೆ ಅವರು ಕೈಗೊಳ್ಳುವ ಯಾವುದೇ ಹೋರಾಟ ಹಾಗೂ ಯೋಜನೆಗಳಿಗೆ ನಮ್ಮ ಸಂಸ್ಥೆ ಸಂಪೂರ್ಣ ಸಹಮತ ಮತ್ತು ಬೆಂಬಲ ನೀಡುತ್ತದೆ," ಎಂದು ಘೋಷಿಸಿದರು.

ಬರಪೀಡಿತ ಜಿಲ್ಲೆಗಳ ಶಾಶ್ವತ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸಂಸದರ ಈ ಬದ್ಧತೆ ರಾಷ್ಟ್ರಮಟ್ಟದಲ್ಲಿ ಗಮನ ಸೆಳೆದಿದೆ ಎಂದು ಅವರು ಅಭಿಪ್ರಾಯಪಟ್ಟರು.

# ತ್ಯಾಜ್ಯಮುಕ್ತ ನಗರಪಾಲಿಕೆ ಗುರಿ: ಐತಿಹಾಸಿಕ ಸ್ಥಳಗಳಲ್ಲಿ ಸ್ವಚ್ಛತಾ ಅಭಿಯಾನ

ಬೆಂಗಳೂರು

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾಪಾಡುವುದು ಹಾಗೂ ತ್ಯಾಜ್ಯಮುಕ್ತ ನಗರಪಾಲಿಕೆ ರೂಪಿಸಲು ಹಾಗೂ ಸ್ವಚ್ಛ ಸರ್ವೇಕ್ಷಣ್ 2025-26 ರ ಶ್ರೇಯಾಂಕ ಪಟ್ಟಿಯಲ್ಲಿ ರಾಷ್ಟ್ರ ಮಟ್ಟದಲ್ಲಿ ಉತ್ತಮ ಸ್ಥಾನ ಗಳಿಸಬೇಕಾಗಿದ್ದು, ಬೆಂಗಳೂರು ಕೇಂದ್ರ ನಗರ ಪಾಲಿಕೆ ವತಿಯಿಂದ ವಿಶೇಷ ಸ್ವಚ್ಛತಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, ಈಗಾಗಲೇ ರೂಪಿಸಲಾಗಿರುವ ಕಾರ್ಯಯೋಜನೆಯ (ಆಕ್ಷನ್ ಪ್ಲಾನ್ ನಂತೆ) 3ನೇ ಭಾಗವಾಗಿ ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ವಚ್ಛ ಸರ್ವೇಕ್ಷಣ 2025-26 ರ ವಿಶೇಷ ಸ್ವಚ್ಛತಾ ಅಭಿಯಾನದ ಅಂಗವಾಗಿ 30 ದೇವಸ್ಥಾನ ಹಾಗೂ ಸುತ್ತಮುತ್ತಲಿನ ಪ್ರದೇಶ ಹಾಗೂ ಐತಿಹಾಸಿಕ ಸ್ಥಳಗಳನ್ನು ಆಯ್ಕೆ ಮಾಡಿಕೊಂಡು ಶುಚಿಗೊಳಿಸಲಾಗಿದೆ ಎಂದು ಕೇಂದ್ರ ನಗರ ಪಾಲಿಕೆಯ ಆಯುಕ್ತ ರಾಜೇಂದ್ರ ಚೋಳನ್ ಅವರು ತಿಳಿಸಿದ್ದಾರೆ.

ಧಾರ್ಮಿಕ ಸ್ಥಳಗಳಾದ ದೇವಸ್ಥಾನಗಳಿಗೆ ಪ್ರತಿನಿತ್ಯ ಸಾವಿರಾರು ಸಂಖ್ಯೆಯಲ್ಲಿ ಬಂದು ಹೋಗುವುದರಿಂದ ದೇವಸ್ಥಾನದ ಆವರಣ ಹಾಗೂ ಸುತ್ತಮುತ್ತಲಿನ ಸ್ಥಳಗಳಲ್ಲಿ




ಶುಚಿ ಕಾಪಾಡುವ ಉದ್ದೇಶದಿಂದ ನಗರ ನೈರ್ಮಲ್ಯ ಕಾಪಾಡುವುದು ಅಗ್ಯತ್ಯವಿರುದ್ದು, ಈ ನಿಟ್ಟಿನಲ್ಲಿ ಸ್ವಚ್ಛ ಸರ್ವೇಕ್ಷಣ್-2025-26ರ ಕೇಂದ್ರ ನಗರ ಪಾಲಿಕೆ ರೂಪಿಸಿರುವ ಸ್ವಚ್ಛತಾ ಅಭಿಯಾನದ 3ನೇ ಭಾಗವಾಗಿ ದೇವಸ್ಥಾನಗಳನ್ನು ಹಾಗೂ ಐತಿಹಾಸಿಕ ಸ್ಥಳಗಳನ್ನು ಆಯ್ಕೆ ಮಾಡಿಕೊಂಡು ಒಟ್ಟು 30 ದೇವಸ್ಥಾನಗಳನ್ನು ಸ್ವಚ್ಛಗೊಳಿಸಲಾಗಿದೆ ಎಂದು ಆಯುಕ್ತರಾದ ರಾಜೇಂದ್ರ ಚೋಳನ್ ರವರು ತಿಳಿಸಿದ್ದಾರೆ.

ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನ, ಹೊಂಬೇಗೌಡನಗರದ ಶ್ರೀ ಆಂಜನೇಯ ದೇವಸ್ಥಾನ, ಸಿದ್ಧಾಪುರದ ಶ್ರೀರಾಮ ದೇವಸ್ಥಾನ, ವಿವಿಪುರಂ ಶ್ರೀ ಕನ್ಯಕಾಪರಮೇಶ್ವರಿ ದೇವಸ್ಥಾನ, ಗುಟ್ಟಹಳ್ಳಿ ಶ್ರೀ ಶಿವಶಂಕರ ದೇವಸ್ಥಾನ, ಸುಧಾಮನಗರದ ಶ್ರೀ ಗಣೇಶ ದೇವಸ್ಥಾನ, ಚಾಮರಾಜಪೇಟೆಯ ಶ್ರೀ ರಾಮೇಶ್ವರ ದೇವಸ್ಥಾನ, ರಾಯಪುರಂನ ಶ್ರೀ ಕಲ್ಲು ನಾಗರ ದೇವಸ್ಥಾನ, ಶಿವಾಜಿನಗರದ ಶ್ರೀ ಮುತ್ಯಾಲಮ್ಮ ದೇವಸ್ಥಾನ, ಜಿಬಿಎ ಕೇಂದ್ರ ಕಛೇರಿ ಆವರಣದ ಏಳು ಸುತ್ತಿನಕೋಟೆ ಸಪ್ತಮಾತ್ರಕಾ ಶ್ರೀ ಆದಿಪರಾಶಕ್ತಿ ದೇವಸ್ಥಾನ, ಸಿ.ವಿ. ರಾಮನ್ ನಗರದ ಶ್ರೀ ಕೋದಂಡರಾಮಸ್ವಾಮಿ ದೇವಸ್ಥಾನ, ಇನ್ನಿತರೆ ದೇವಸ್ಥಾನಗಳನ್ನು ಸ್ವಚ್ಛಗೊಳಿಸಲಾಗಿದ್ದು, ದೇವಸ್ಥಾನಗಳ ಸುತ್ತಮುತ್ತ ಶುಚಿಗೊಳಿಸುವುದರೊಂದಿಗೆ ತ್ಯಾಜ್ಯ ಎಸೆಯದಂತೆ ಹಾಗೂ ಶುಚಿತ್ವ ಕಾಪಾಡುವಂತೆ ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಲಾಗಿದೆ.

ದೇವಸ್ಥಾನಗಳ ಸ್ವಚ್ಛತಾ ಕಾರ್ಯದಲ್ಲಿ 105 ಅಧಿಕಾರಿಗಳು/ಸ್ವಚ್ಛತಾ ಸಿಬ್ಬಂದಿಗಳು ಹಾಗೂ 442 ಪೌರ ಕಾರ್ಮಿಕರು ಸೇರಿದಂತೆ ಒಟ್ಟು 545 ಜನ ಭಾಗಿಯಾಗಿದ್ದರು

ಅಭಿವೃದ್ಧಿ ಅಪರ ಆಯುಕ್ತರಾದ ದಲ್ಜಿತ್ ಕುಮಾರ್ ರವರ ಮೇಲುಸ್ತುವಾರಿಯಲ್ಲಿ ನಡೆದ ಈ ಸ್ವಚ್ಛತಾ ಅಭಿಯಾನದಲ್ಲಿ ಡಿಜಿಎಂ ಭೀಮೇಶ್ ನಾಯಕ್, ಆಯಾಯ ವಿಭಾಗಗಳ ಎಜಿಎಂ ಗಳು, ಪೌರಕಾರ್ಮಿಕರು, ಆಟೋ ಟಿಪ್ಪರ್ ಸಿಬ್ಬಂದಿಗಳು ಭಾಗಿಯಾಗಿದ್ದರು.

# ಅಬಾಕಸ್ ಬೇಸಿಗೆ ಶಿಬಿರ

ಸೊರಬ

ಬೃಂದಾವನ ಐಪಿಎ ಅಬಾಕಸ್ ಸೆಂಟರ್ ವತಿಯಿಂದ ಏಪ್ರಿಲ್ 10 ರಿಂದ 30 ರವರೆಗೆ ಸೊರಬ ಪಟ್ಟಣದ ಕಾನುಕೇರಿ ಮಠದ ಪಕ್ಕದಲ್ಲಿರುವ ಸ್ಮಾರ್ಟ್ ಕಿಡ್ಸ್ ಶಾಲಾ ಆವರಣದಲ್ಲಿ ಅಬಾಕಸ್ ಬೇಸಿಗೆ ಶಿಬಿರವನ್ನು ಆಯೋಜಿಸಲಾಗಿದೆ.

ಅಬಾಕಸ್ ಕಲಿಕೆಯಿಂದ ಮಕ್ಕಳಲ್ಲಿ ಏಕಾಗ್ರತೆ ಹೆಚ್ಚಾಗುವುದರ ಜೊತೆಗೆ, ಜ್ಞಾಪಕ ಶಕ್ತಿ ವೃದ್ಧಿಯಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಜನಪ್ರಿಯಗೊಳ್ಳುತ್ತಿರುವ ಈ ಕಲಿಕೆ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ. ಅಬಾಕಸ್ ಕಲಿಕೆಯಿಂದ ಮಕ್ಕಳಲ್ಲಿ ಏಕಾಗ್ರತೆ ಹೆಚ್ಚಾಗುವುದರ ಜೊತೆಗೆ, ಜ್ಞಾಪಕ ಶಕ್ತಿ ವೃದ್ಧಿಯಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಜನಪ್ರಿಯಗೊಳ್ಳುತ್ತಿರುವ ಈ ಕಲಿಕೆ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಇದರ ಅವಶ್ಯಕತೆ ಇದೆ. ಶಿಬಿರದ ನಂತರ ಪೂರ್ಣಾವಧಿಯ ತರಗತಿಗಳು ನಡೆಯುತ್ತವೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ 9632706512, 9902939870 ಈ ನಂಬರ್ ಗೆ ಸಂಪರ್ಕಿಸುವಂತೆ ಶಿಕ್ಷಕಿ ಅರ್ಚನಾ ರಾಘವೇಂದ್ರ ಕೋರಿದ್ದಾರೆ.

04/04/2026
ಭಾರತ ಸಾರಥಿ
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ವೈದ್ಯರಲ್ಲಿ 'ಹೆಣ್ಣಿನ ಮನಸ್ಸು' ಇರಲಿ; ರೋಗಿಗಳ ಆರೈಕೆಯಲ್ಲಿ ಮಮತೆ ಅತೀ ಮುಖ್ಯ: ಶಾಲಿನಿ

ಬೆಂಗಳೂರು

"ಪ್ರೀತಿ, ಮಾನವೀಯತೆ ಮತ್ತು ಮಮಕಾರ ಮಹಿಳೆಯರ ಸಹಜ ಗುಣಗಳು. ವೈದ್ಯರು ರೋಗಿಯ ನೋವನ್ನು ಅರ್ಥಮಾಡಿಕೊಳ್ಳಲು ತಮ್ಮಲ್ಲಿ ಹೆಣ್ಣಿನ ಗುಣಗಳನ್ನು ಅಳವಡಿಸಿಕೊಂಡಾಗ ಮಾತ್ರ ನಿಜವಾದ ವೈದ್ಯರಾಗಲು ಸಾಧ್ಯ," ಎಂದು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಾಜನೀಶ್ ಅಭಿಪ್ರಾಯಪಟ್ಟರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಆಯೋಜಿಸಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ರಾಜ್ಯದ ಮಹಿಳೆಯರ ಆರೋಗ್ಯ ಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, "ಕರ್ನಾಟಕದಲ್ಲಿ ಶೇ. 67ಕ್ಕೂ ಹೆಚ್ಚು ಗರ್ಭಿಣಿಯರು ರಕ್ತಹೀನತೆಯಿಂದ ಬಳಲುತ್ತಿರುವುದು ಆತಂಕಕಾರಿ ಸಂಗತಿ. ಆರೋಗ್ಯಕರ ಪೀಳಿಗೆಯ ನಿರ್ಮಾಣವಾಗಬೇಕಾದರೆ ಮೊದಲು




ಮಹಿಳೆಯರ ಆರೋಗ್ಯ ಸುಧಾರಿಸಬೇಕು. ಕೇವಲ ರೋಗಕ್ಕೆ ಚಿಕಿತ್ಸೆ ನೀಡುವುದಷ್ಟೇ ಅಲ್ಲದೆ, ರೋಗ ತಡೆಗಟ್ಟುವ ಕೌಶಲಗಳನ್ನು ವೈದ್ಯಕೀಯ ವೃತ್ತಿಪರರು ಬೆಳೆಸಿಕೊಳ್ಳಬೇಕು," ಎಂದರು.

ಸಾಂಪ್ರದಾಯಿಕ ವೈದ್ಯ ಪದ್ಧತಿಗಳ ಮಹತ್ವವನ್ನು ಒತ್ತಿ ಹೇಳಿದ ಶಾಲಿನಿ ರಾಜನೀಶ್ ಅವರು, ಸಾವಿರಾರು ವರ್ಷಗಳಿಂದ ಸಾಬೀತಾಗಿರುವ ನಮ್ಮ ದೇಶದ ಚಿಕಿತ್ಸಾ ವಿಧಾನಗಳನ್ನು ನಿರ್ಲಕ್ಷಿಸಬಾರದು. ಆಧುನಿಕ ವೈದ್ಯಕೀಯದ ಜೊತೆಗೆ ಸಾಂಪ್ರದಾಯಿಕ ಪದ್ಧತಿಗಳನ್ನು ಸಮನ್ವಯಗೊಳಿಸುವ 'ಇಂಟಿಗ್ರೇಟಿವ್ ಮೆಡಿಸಿನ್' ಅಳವಡಿಸಿಕೊಳ್ಳಲು ವಿಶ್ವವಿದ್ಯಾಲಯಗಳು ಉತ್ತೇಜನ ನೀಡಬೇಕು ಎಂದು ಕರೆ ನೀಡಿದರು.

ವಿಶ್ವವಿದ್ಯಾಲಯದ ಕುಲಪತಿ ಡಾ. ಭಗವಾನ್ ಬಿ.ಸಿ. ಮಾತನಾಡಿ, "ಮಹಿಳೆಯರು ಎಲ್ಲವನ್ನೂ ನಾವೇ ನಿರ್ವಹಿಸಬೇಕು ಎಂಬ ಒತ್ತಡಕ್ಕೆ ಸಿಲುಕಿ 'ಸೂಪರ್ ವುಮನ್' ಆಗಲು ಪ್ರಯತ್ನಿಸುವುದು ಬೇಡ. ಅದು ಕೇವಲ ಒಂದು ಭ್ರಮೆ. ಅಗತ್ಯವಿದ್ದಾಗ 'ಇಲ್ಲ' ಎಂದು ಹೇಳುವುದನ್ನು ಕಲಿಯಿರಿ. ನಿಮ್ಮ ಕನಸು ಮತ್ತು ಆರೋಗ್ಯವನ್ನು ಎಂದಿಗೂ ಬಿಟ್ಟುಕೊಡಬೇಡಿ," ಎಂದು ಸಲಹೆ ನೀಡಿದರು.

ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕಿ ಡಾ. ಬಿ. ಎಲ್. ಸುಜಾತಾ ರಾಥೋಡ್ ಮಾತನಾಡಿ, ಮಹಿಳೆಯರನ್ನು ಗೌರವದಿಂದ ಕಾಣುವ ಸಂಸ್ಕಾರ ಮನೆಯಿಂದಲೇ ಆರಂಭವಾಗಬೇಕು. ಹೆಣ್ಣುಮಕ್ಕಳೊಂದಿಗೆ ಹೇಗೆ ನಡೆದುಕೊಳ್ಳಬೇಕು ಎಂಬುದನ್ನು ಗಂಡುಮಕ್ಕಳಿಗೆ ಬಾಲ್ಯದಲ್ಲೇ ಕಲಿಸುವುದು ಇಂದಿನ ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪದ್ಮಶ್ರೀ ಪುರಸ್ಕೃತೆ ಡಾ. ಪ್ರೇಮ ಧನರಾಜ್ ತಮ್ಮ ಅನುಭವ ಹಂಚಿಕೊಂಡರು. ವಿವಿಧ ಕ್ಷೇತ್ರಗಳ ಸಾಧಕಿಯರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ವೈದ್ಯಕೀಯ ಶಿಕ್ಷಣ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್, ಕುಲಸಚಿವ ಅರ್ಜುನ್ ಒಡೆಯರ್ ಉಪಸ್ಥಿತರಿದ್ದರು.

# ದೇವಸ್ಥಾನಗಳಲ್ಲಿ 'ಪ್ರೀ-ವೆಡ್ಡಿಂಗ್ ಶೂಟ್'ಗೆ ಬೀಳಲಿದೆಯೇ ಬ್ರೇಕ್?

ಬೆಂಗಳೂರು

ರಾಜ್ಯದ ದೇವಸ್ಥಾನಗಳ ಪಾವಿತ್ರತೆ ಮತ್ತು ಧಾರ್ಮಿಕ ಶ್ರದ್ಧೆಯನ್ನು ಕಾಪಾಡುವ ನಿಟ್ಟಿನಲ್ಲಿ, ದೇವಸ್ಥಾನದ ಆವರಣದಲ್ಲಿ ನಡೆಸಲಾಗುವ 'ಪ್ರೀ-ವೆಡ್ಡಿಂಗ್ ಶೂಟಿಂಗ್' ಮತ್ತು ಅಸಭ್ಯ ರೀಲ್ಸ್‌ಗಳನ್ನು ಸಂಪೂರ್ಣವಾಗಿ ನಿಷೇಧಿಸಬೇಕೆಂದು ಕರ್ನಾಟಕ ಮಂದಿರ ಮಹಾಸಂಘ ಸರ್ಕಾರವನ್ನು ಒತ್ತಾಯಿಸಿದೆ.

ಈ ಕುರಿತು ಧಾರ್ಮಿಕ ದತ್ತಿ ಇಲಾಖೆ ಸಚಿವ ರಾಮಲಿಂಗ ರೆಡ್ಡಿ ಅವರಿಗೆ ಮಹಾಸಂಘದ ನಿಯೋಗವು ಗುರುವಾರ ಮನವಿ ಸಲ್ಲಿಸಿತು.

<u>ಪಾವಿತ್ರತೆಗೆ ಧಕ್ಕೆ ಭಕ್ತರ ಆಕ್ರೋಶ:</u> ಇತ್ತೀಚೆಗೆ ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ಬೆಟ್ಟದ ಬೈರವೇಶ್ವರ ದೇವಸ್ಥಾನದಲ್ಲಿ ಚಪ್ಪಲಿ ಧರಿಸಿ ಅಸಭ್ಯವಾಗಿ ಫೋಟೋಶೂಟ್ ನಡೆಸಿದ ಘಟನೆ ಮತ್ತು ಅದನ್ನು ಪ್ರಶ್ನಿಸಿದ ಅರ್ಚಕರೊಂದಿಗೆ ಅನುಚಿತವಾಗಿ ವರ್ತಿಸಿರುವುದು ಭಕ್ತರ ಕೆಂಗಣ್ಣಿಗೆ ಗುರಿಯಾಗಿದೆ. ದೇವಸ್ಥಾನಗಳನ್ನು ವೈಯಕ್ತಿಕ ಪ್ರಚಾರ ಮತ್ತು ಸಾಮಾಜಿಕ ಜಾಲತಾಣಗಳ ಲೈಕ್ಸ್‌ಗಾಗಿ ಬಳಸುವುದು ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡುತ್ತಿದೆ ಎಂದು ಸಂಘಟನೆ ದೂರಿದೆ.



<u>ಮನವಿಯಲ್ಲಿನ ಪ್ರಮುಖ ಬೇಡಿಕೆಗಳು:</u>

<u>ಸಂಪೂರ್ಣ ನಿಷೇಧ:</u> ಧಾರ್ಮಿಕ ದತ್ತಿ ಇಲಾಖೆಯ ಅಧೀನದಲ್ಲಿರುವ ಎಲ್ಲಾ ದೇವಸ್ಥಾನಗಳಲ್ಲಿ ಪ್ರೀ-ವೆಡ್ಡಿಂಗ್ ಫೋಟೋ ಮತ್ತು ವೀಡಿಯೋ ಶೂಟಿಂಗ್‌ಗಳನ್ನು ತಕ್ಷಣವೇ ನಿಷೇಧಿಸಬೇಕು.

<u>ಮಾರ್ಗಸೂಚಿ ಪ್ರಕಟಣೆ:</u> ವೀಡಿಯೋಗ್ರಫಿ ಮತ್ತು ಫೋಟೋಗ್ರಫಿಗೆ ಸಂಬಂಧಿಸಿದಂತೆ ಕಟ್ಟುನಿಟ್ಟಾದ ಹೊಸ ಮಾರ್ಗಸೂಚಿಗಳನ್ನು ಜಾರಿಗೆ ತರಬೇಕು.

<u>ಕಾನೂನು ಕ್ರಮ:</u> ನಿಯಮ ಉಲ್ಲಂಘಿಸುವವರ ವಿರುದ್ಧ ಭಾರತೀಯ ನ್ಯಾಯ ಸಂಹಿತೆ ಮತ್ತು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳ ಅಧಿನಿಯಮದಡಿ ಕಠಿಣ ಕ್ರಮ ಕೈಗೊಳ್ಳಬೇಕು.

<u>ಸೂಚನಾ ಫಲಕ:</u> ಪ್ರವೇಶ ದ್ವಾರಗಳಲ್ಲಿ "ಪ್ರೀ-ವೆಡ್ಡಿಂಗ್ ಶೂಟ್ ನಿಷೇಧಿಸಲಾಗಿದೆ" ಎಂಬ ಸ್ಪಷ್ಟ ಫಲಕಗಳನ್ನು ಅಳವಡಿಸಬೇಕು.

<u>ಸಚಿವರ ಸಕಾರಾತ್ಮಕ ಸ್ಪಂದನೆ:</u> ಮನವಿ ಸ್ವೀಕರಿಸಿದ ಸಚಿವ ರಾಮಲಿಂಗ ರೆಡ್ಡಿ ಅವರು, "ದೇವಸ್ಥಾನಗಳ ಗೌರವ ಕಾಪಾಡುವುದು ಸರ್ಕಾರದ ಜವಾಬ್ದಾರಿಯಾಗಿದೆ. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರದಲ್ಲೇ ಸೂಕ್ತ ಕ್ರಮ ಕೈಗೊಳ್ಳಲಾಗುವುದು," ಎಂದು ಆಶ್ವಾಸನೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಮಂದಿರ ಮಹಾಸಂಘದ ರಾಜ್ಯ ಸಂಘಟಕ ಮೋಹನ್ ಗೌಡ, ರಾಘವೇಂದ್ರ ಭಟ್, ಬಿ.ಎನ್. ಮಹೇಶ್, ವಿಕ್ರಮ್ ಶೆಟ್ಟಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.



ಕನಕಪುರ ನಗರದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ಸುದೀರ್ಘವಾಗಿ 36 ವರ್ಷಗಳ ಕಾಲ ಡಿ ಗ್ರೂಪ್ ನೌಕರರಾಗಿ ಸೇವೆ ಸಲ್ಲಿಸಿ ನಿವೃತ್ತಿಗೊಂಡ ನಾಗರಾಜುರನ್ನು ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಈ ವೇಳೆ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ. ಪ್ರತಿಭಾ ದೇವಿ, ವೈದ್ಯರು, ಸಿಬ್ಬಂದಿ ಮತ್ತು ಕನಕಪುರ ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಕೆ.ಆರ್. ಮಧು, ಪಕ್ಷದ ಸಂಯೋಜಕ ನೀಲಿರಮೇಶ್ ಹಾಗೂ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳಾದ ಶಿವಕುಮಾರ್, ಹನುಮಂತರಾಜು, ವೆಂಕಟಪ್ಪ, ಅಜ್ಗರ್ ಆಯುಬ್, ರವಿ ಈ ವೇಳೆ ಉಪಸ್ಥಿತರಿದ್ದರು.

## ಚಿತ್ರದುರ್ಗ- ಚಿಕ್ಕಜಾಜೂರು ರೈಲು ಸಂಚಾರ ಭಾಗಶಃ ರದ್ದತಿ ಅವಧಿ ವಿಸ್ತರಣೆ

ಚಿತ್ರದುರ್ಗ

ಕಡಿಮೆ ಪ್ರಯಾಣಿಕರ ಸಂಖ್ಯೆಯ ಹಿನ್ನೆಲೆಯಲ್ಲಿ ಚಿತ್ರದುರ್ಗ ಮತ್ತು ಚಿಕ್ಕಜಾಜೂರು ನಿಲ್ದಾಣಗಳ ನಡುವೆ ಸಂಚರಿಸುವ ರೈಲುಗಳ ಭಾಗಶಃ ರದ್ದತಿ ಅವಧಿಯನ್ನು ವಿಸ್ತರಿಸಲು ರೈಲ್ವೆ ಇಲಾಖೆ ನಿರ್ಧರಿಸಿದೆ. ಈ ಮೊದಲು ಮಾರ್ಚ್ 31, 2026ರವರೆಗೆ ಇದ್ದ ರದ್ದತಿ ಅವಧಿಯನ್ನು ಈಗ ಸೆಪ್ಟೆಂಬರ್ 30, 2026ರವರೆಗೆ ವಿಸ್ತರಿಸಲಾಗಿದೆ.

<u>ಬದಲಾದ ರೈಲು ಸಂಚಾರದ ವಿವರ:</u>

ರೈಲು ಸಂಖ್ಯೆ 17347/17348 ಎಸ್‌ಎಸ್‌ಎಸ್ ಹುಬ್ಬಳ್ಳಿ – ಚಿತ್ರದುರ್ಗ – ಎಸ್‌ಎಸ್‌ಎಸ್ ಹುಬ್ಬಳ್ಳಿ ದೈನಂದಿನ ಕಾಯ್ದಿರಿಸದ ಎಕ್ಸ್‌ಪ್ರೆಸ್ ರೈಲುಗಳ ಸಂಚಾರದಲ್ಲಿ ಈ ಕೆಳಗಿನ ಬದಲಾವಣೆಗಳಿರಲಿವೆ:

<u>ರೈಲು ಸಂಖ್ಯೆ 17347 (ಹುಬ್ಬಳ್ಳಿ – ಚಿತ್ರದುರ್ಗ):</u> ಈ ರೈಲು ಚಿತ್ರದುರ್ಗದ ಬದಲಿಗೆ ಚಿಕ್ಕಜಾಜೂರು ನಿಲ್ದಾಣದಲ್ಲೇ ತನ್ನ ಪ್ರಯಾಣವನ್ನು ಕೊನೆಗೊಳಿಸಲಿದೆ.

ರೈಲು ಸಂಖ್ಯೆ 17348 (ಚಿತ್ರದುರ್ಗ – ಹುಬ್ಬಳ್ಳಿ): ಈ ರೈಲು ಚಿತ್ರದುರ್ಗದ ಬದಲಿಗೆ ಚಿಕ್ಕಜಾಜೂರು ನಿಲ್ದಾಣದಿಂದಲೇ ತನ್ನ ಪ್ರಯಾಣವನ್ನು ಆರಂಭಿಸಲಿದೆ.

<u>ಸೆಪ್ಟೆಂಬರ್ ವರೆಗೆ ವ್ಯತ್ಯಯ:</u> ಏಪ್ರಿಲ್ 3, 2026 ರಿಂದ ಸೆಪ್ಟೆಂಬರ್ 30, 2026 ರವರೆಗೆ ಚಿಕ್ಕಜಾಜೂರು ಮತ್ತು ಚಿತ್ರದುರ್ಗ ನಿಲ್ದಾಣಗಳ ನಡುವಿನ ರೈಲು ಸೇವೆಗಳು ಲಭ್ಯವಿರುವುದಿಲ್ಲ. ಈ ಭಾಗದ ಪ್ರಯಾಣಿಕರು ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳುವಂತೆ ರೈಲ್ವೆ ಇಲಾಖೆ ತಿಳಿಸಿದೆ.

# ರೂ. 21.25 ಲಕ್ಷ ಪೊಲೀಸ್ ಕಲ್ಯಾಣ ನಿಧಿಗೆ ಜಮೆ: ರಜಪೂತ್

ಕೆ.ಜಿ.ಎಫ್

2025 ನೇ ಸಾಲಿನಲ್ಲಿ ಪೊಲೀಸ್ ಧ್ವಜಗಳನ್ನು ಮಾರಾಟ ಮಾಡಿ ಅದರಿಂದ ಸಂಗ್ರಹಿಸಿದ್ದ ರೂ.21,25000 ಹಣವನ್ನು ಪೊಲೀಸ್ ಕಲ್ಯಾಣ ನಿದಿಗೆ ಜಮಾ ಮಾಡಿ ಅದರಲ್ಲಿ ಶೇ 50% ರಷ್ಟು ಹಣವನ್ನು ಕೇಂದ್ರ ಪೊಲೀಸ್ ಕಲ್ಯಾಣ ನಿಧಿಗೆ ಹಾಗೂ ಉಳಿದ 50% ರಷ್ಟು ಹಣವನ್ನು ಕೆ.ಜಿ.ಎಫ್ ನಿವೃತ್ತ ಪೊಲೀಸ್ ಕಲ್ಯಾಣ ನಿಧಿಗೆ ನೀಡಿರುವುದಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ತಿಳಿಸಿದರು.



ಕೆ.ಜಿ.ಎಫ್ ಜಿಲ್ಲಾ ಪೊಲೀಸ್ ಘಟಕದಿಂದ ಡಿ.ಎ.ಆರ್. ಪೊಲೀಸ್ ಕವಾಯಿತು ಮೈದಾನದಲ್ಲಿ ಗುರುವಾರದಂದು ಹಮ್ಮಿಕೊಂಡಿದ್ದ ಪೊಲೀಸ್ ಧ್ವಜ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, 1965ರ ಏಪ್ರಿಲ್ 2 ರಂದು ಕರ್ನಾಟಕ ಪೊಲೀಸ್ ಕಾಯ್ದೆ ಜಾರಿಗೆ ಬಂದಿದೆ. ಅಂದಿನಿಂದ ಪೊಲೀಸ್ ಧ್ವಜ ದಿನಾಚರಣೆಯನ್ನು ಪೊಲೀಸ್ ಕಲ್ಯಾಣ ದಿನವನ್ನಾಗಿ ಆಚರಿಸಲಾಗುತ್ತಿದೆ. ಸರ್ಕಾರವು ಈಗಾಗಲೇ ನಿವೃತ್ತರಿಗೆ ಹಲವು ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು, ನಿವೃತ್ತ ಪೊಲೀಸರಿಗೆ ಪೊಲೀಸ್ ಕಲ್ಯಾಣ ನಿಧಿಯಿಂದ ಸೌಕರ್ಯ ಕಲ್ಪಿಸುತ್ತಿರುವುದಾಗಿ ಹೇಳಿದರು.

ಮುಖ್ಯ ಅತಿಥಿಗಳಾಗಿ ನಿವೃತ್ತ ಎಎಸ್ಐ ಮಂಜುನಾಥ ಅವರು ಭಾಗವಹಿಸಿ, ಧ್ವಜ ವಂದನೆ ಸ್ವೀಕರಿಸಿ ಮಾತನಾಡಿ ಈ ದಿನ ನಡೆದ ಪೊಲೀಸ್ ಧ್ವಜ ದಿನಾಚಾರಣೆಯ ಕವಾಯಿತನ್ನು ಪ್ರಶಂಶಿಸಿದರು.

ರಾಜ್ಯದಲ್ಲಿ ಏಪ್ರಿಲ್ 2 ರಂದು ಪೊಲೀಸ್ ಧ್ವಜ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಈ ಧ್ವಜ ದಿನಾಚರಣೆಯನ್ನು ರಾಜ್ಯ ಪೊಲೀಸ್ ಪಡೆಯ ಪುನರ್ ರಚನೆ ಹಾಗೂ 1965ರ ಏ. 2 ರಂದು ಕರ್ನಾಟಕ ಪೊಲೀಸ್ ಕಾಯ್ದೆಯು ಜಾರಿಗೆ ಬಂದ ನೆನಪಿಗಾಗಿ ಆಚರಿಸಲಾಗುತ್ತಿದೆ ಎಂದರು. ಇದೇ ದಿನವನ್ನು ಪೊಲೀಸ್ ಕಲ್ಯಾಣ ದಿನವನ್ನಾಗಿ ಸಹ ಆಚರಿಸುತ್ತಿದ್ದು, ನಿವೃತ್ತ ಪೊಲೀಸರಿಗೆ ಪೊಲೀಸ್ ಕಲ್ಯಾಣ ನಿಧಿಯಿಂದ ಸೌಲಭ್ಯ ಕಲ್ಪಿಸಲು ಕೆಜಿಎಫ್ ನ ಪೊಲೀಸ್ ಅಧೀಕ್ಷರು ಇಲಾಖಾ ಮುಖ್ಯಸ್ಥರು, ಸರ್ಕಾರದೊಂದಿಗೆ ವ್ಯವಹರಿಸಿ ನಿವೃತ್ತರಿಗೆ ಮತ್ತಷ್ಟು ಸವಲತ್ತು ಕಲ್ಪಿಸಿಕೊಡಬೇಕೆಂದರು.

ಇದೇ ವೇಳೆ 2025–26 ನೇ ಸಾಲಿನಲ್ಲಿ ನಿವೃತ್ತರಾದ ಪೊಲೀಸ್ ಅಧಿಕಾರಿ, ಸಿಬ್ಬಂದಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಆರ್.ಪಿ.ಐ. ವಿ.ಸೋಮಶೇಖರ್ ನೇತೃತ್ವದಲ್ಲಿ ಡಿ.ಎ.ಆರ್, ನಾಗರೀಕ ಮತ್ತು ಮಹಿಳಾ ಪೊಲೀಸ್ ತಂಡಗಳಿಂದ ಆಕರ್ಷಕ ಪಥಸಂಚಲನ ನಡೆಯಿತು. ಅತಿಥಿಗಳು ಪೊಲೀಸ್ ಧ್ವಜಗಳನ್ನು ಬಿಡುಗಡೆಗೊಳಿಸಿ, ದೇಣಿಗೆಯನ್ನು ನೀಡಿದರು. ಪೊಲೀಸ್ ಕಾನ್ಸ್ಟೇಬಲ್ ಶರಣು ಕವಟಗಿ ಕಾರ್ಯಕ್ರಮ ನಿರೂಪಣೆ ಹಾಗೂ ಕೆಜಿಎಫ್ ಉಪ ವಿಭಾಗದ ಡಿ.ವೈ.ಎಸ್.ಪಿ ವಿ ಲಕ್ಷ್ಮಯ್ಯ ಅವರಿಂದ ವಂದನಾರ್ಪಣೆ ಮಾಡಿದರು.

# ಇಂಡಿ ರೋಡ್ - ಲಚ್ಯಾಣ ನಡುವೆ ರೈಲು ಕಾಮಗಾರಿ: ಸಂಚಾರದಲ್ಲಿ ತಾತ್ಕಾಲಿಕ ವ್ಯತ್ಯಯ

ವಿಜಯಪುರ

ಇಂಡಿ ರೋಡ್ ಮತ್ತು ಲಚ್ಯಾಣ ರೈಲು ನಿಲ್ದಾಣಗಳ ನಡುವಿನ ಎಲ್.ಸಿ. ಗೇಟ್ ಸಂಖ್ಯೆ 110ರಲ್ಲಿ ಹಮ್ಮಿಕೊಂಡಿರುವ ತುರ್ತು ಸಿವಿಲ್ ಕಾಮಗಾರಿಯಿಂದಾಗಿ ಈ ಮಾರ್ಗದಲ್ಲಿ ಸಂಚರಿಸುವ ಹಲವು ರೈಲುಗಳ ಸಂಚಾರದಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

<u>ಸಂಚಾರ ನಿಯಂತ್ರಣಕ್ಕೆ ಒಳಗಾಗುವ ರೈಲುಗಳು:</u> ಕಾಮಗಾರಿಯ ಹಿನ್ನೆಲೆಯಲ್ಲಿ ಈ ಕೆಳಗಿನ ರೈಲುಗಳ ಸಂಚಾರದ ಅವಧಿಯಲ್ಲಿ ಬದಲಾವಣೆಯಾಗಲಿದೆ.

<u>ರೈಲು ಸಂಖ್ಯೆ 11415 (ಸೊಲ್ಲಾಪುರ – ಹೊಸಪೇಟೆ):</u>

ಏಪ್ರಿಲ್ 2 ಮತ್ತು 16 ರಂದು ಈ ರೈಲು ಒಟ್ಟು 90 ನಿಮಿಷಗಳ ಕಾಲ ಸಂಚಾರ ನಿಯಂತ್ರಣಕ್ಕೆ (ವಿಳಂಬ) ಒಳಗಾಗಲಿದೆ.

<u>ರೈಲು ಸಂಖ್ಯೆ 16536 (ಪಂಢರಾಪುರ – ಮೈಸೂರು):</u> ಗೋಳಗುಮ್ಮಟ ಎಕ್ಸ್‌ಪ್ರೆಸ್ ರೈಲು ಏಪ್ರಿಲ್ 3 ಮತ್ತು 15 ರಂದು 30 ನಿಮಿಷಗಳ ಕಾಲ ನಿಯಂತ್ರಣಕ್ಕೆ ಒಳಪಡಲಿದೆ.

<u>ರೈಲು ಸಂಖ್ಯೆ 07338 (ಘಾಜಿಪುರ – ಹುಬ್ಬಳ್ಳಿ):</u> ಈ ವಿಶೇಷ ಎಕ್ಸ್‌ಪ್ರೆಸ್ ರೈಲು ಏಪ್ರಿಲ್ 2 ರಂದು ಈಗಾಗಲೇ 60 ನಿಮಿಷಗಳ ವಿಳಂಬದೊಂದಿಗೆ ಸಂಚರಿಸಿದೆ.

<u>ಡೀಸೆಲ್ ಇಂಜಿನ್ ಬಳಕೆ:</u> ರಾಯಚೂರು – ವಿಜಯಪುರ– ರಾಯಚೂರು (57662/57661) ನಡುವೆ ಸಂಚರಿಸುವ ಪ್ಯಾಸೆಂಜರ್ ರೈಲು ಏಪ್ರಿಲ್ 2, 3, 15 ಮತ್ತು 16 ರಂದು ವಿಜಯಪುರ ಮತ್ತು ಸೊಲ್ಲಾಪುರ ನಿಲ್ದಾಣಗಳ ನಡುವೆ ಡೀಸೆಲ್ ಲೋಕೋ (ಆಟಘಜಟ ಐಠಛಿಠ) ಸಹಾಯದಿಂದ ಸಂಚರಿಸಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಕಾಮಗಾರಿಯ ಅವಧಿಯಲ್ಲಿ ಪ್ರಯಾಣಿಕರಿಗೆ ಆಗುವ ಅನಾನುಕೂಲಕ್ಕಾಗಿ ರೈಲ್ವೆ ಇಲಾಖೆ ವಿಷಾದಿಸಿದ್ದು, ಪ್ರಯಾಣಿಕರು ಸಹಕರಿಸುವಂತೆ ಕೋರಲಾಗಿದೆ.

## ಬೆಂಗಳೂರು-ಸಂತ್ರಾಗಾಚಿ ನಡುವೆ ವಿಶೇಷ ರೈಲು ಸಂಚಾರ

ಬೆಂಗಳೂರು

ಗುಡ್ ಫ್ರೈಡೇ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ಅತಿಯಾದ ದಟ್ಟಣೆಯನ್ನು ನಿಯಂತ್ರಿಸಲು ನೈಋತ್ಯ ರೈಲ್ವೆಯು ಎಸ್‌ಎಂವಿಟಿ ಬೆಂಗಳೂರು ಮತ್ತು ಸಂತ್ರಾಗಾಚಿ ನಿಲ್ದಾಣಗಳ ನಡುವೆ ಒಂದು ಟ್ರಿಪ್ ವಿಶೇಷ ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ಘೋಷಿಸಿದೆ. ಮರು ಪ್ರಯಾಣದಲ್ಲಿ ಈ ರೈಲು ಬೆಂಗಳೂರು ಕಂಟೋನ್ಮೆಂಟ್ ನಿಲ್ದಾಣಕ್ಕೆ ಬಂದು ತಲುಪಲಿರುವುದು ವಿಶೇಷ.

<u>ರೈಲು ಸಂಚಾರದ ವೇಳಾಪಟ್ಟಿ:</u> ರೈಲು ಸಂಖ್ಯೆ 06557 (SMVT ಬೆಂಗಳೂರು – ಸಂತ್ರಾಗಾಚಿ): ಈ ವಿಶೇಷ ರೈಲು ಏಪ್ರಿಲ್ 3ರಂದು ಸಂಜೆ 4:35ಕ್ಕೆ ಎಸ್‌ಎಂವಿಟಿ ಬೆಂಗಳೂರು ನಿಲ್ದಾಣದಿಂದ ಹೊರಟು, ಮರುದಿನ ರಾತ್ರಿ 11:55ಕ್ಕೆ ಸಂತ್ರಾಗಾಚಿ ತಲುಪಲಿದೆ.

<u>ರೈಲು ಸಂಖ್ಯೆ 06558 (ಸಂತ್ರಾಗಾಚಿ – ಬೆಂಗಳೂರು ಕಂಟೋನ್ಮೆಂಟ್):</u> ಏಪ್ರಿಲ್ 5ರಂದು ಮುಂಜಾನೆ 3:30ಕ್ಕೆ ಸಂತ್ರಾಗಾಚಿಯಿಂದ ಹೊರಡುವ ರೈಲು, ಮರುದಿನ ಮಧ್ಯಾಹ್ನ 12:45ಕ್ಕೆ ಬೆಂಗಳೂರು ಕಂಟೋನ್ಮೆಂಟ್ ನಿಲ್ದಾಣಕ್ಕೆ ಬಂದು ತಲುಪಲಿದೆ.

<u>ನಿಲುಗಡೆ ನಿಲ್ದಾಣಗಳು:</u> ಈ ವಿಶೇಷ ರೈಲು ಎರಡೂ ಮಾರ್ಗಗಳಲ್ಲಿ ಕೃಷ್ಣರಾಜಪುರಂ, ಬಂಗಾರಪೇಟೆ, ಜೋಲಾರ್‌ಪೇಟೆ, ಕಾಟ್ಪಾಡಿ, ರೇಣಿಗುಂಟಾ, ನೆಲ್ಲೂರು, ಒಂಗೋಲ್, ವಿಜಯವಾಡ, ರಾಜಮಂಡ್ರಿ, ವಿಜಯನಗರಂ, ಶ್ರೀಕಾಕುಳಂ ರೋಡ್, ಪಲಾಸ, ಬ್ರಹ್ಮಪುರ, ಖುರ್ದಾ ರೋಡ್, ಭುವನೇಶ್ವರ, ಕಟಕ್, ಭದ್ರಕ್, ಬಾಲೇಶ್ವರ ಹಾಗೂ ಖರಗ್ಪುರ ನಿಲ್ದಾಣಗಳಲ್ಲಿ ನಿಲ್ಲಲಿದೆ. ಪ್ರಯಾಣಿಕರ ಅನುಕೂಲಕ್ಕಾಗಿ ಈ ರೈಲು ಒಟ್ಟು 20 ಬೋಗಿಗಳನ್ನು ಹೊಂದಿರಲಿದೆ. ಇದರಲ್ಲಿ 18 ಎಸಿ ತ್ರೀ–ಟೈರ್ (AC 3–Tier) ಬೋಗಿಗಳು ಹಾಗೂ 2 ಬ್ರೇಕ್–ಕಮ್–ಲಗೇಜ್ ಜನರೇಟರ್ ಕಾರುಗಳು ಇರಲಿವೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

# ವಿಕಲಚೇತನರಿಗೂ ಇನ್ನು ಸಿನೆಮಾ ಸಂಭ್ರಮ: 'ಕ್ಲೋಸ್ಡ್ ಕ್ಯಾಪ್ಶನ್' ಕಡ್ಡಾಯ!

ಬೆಂಗಳೂರು

ಶ್ರವಣ ಮತ್ತು ದೃಷ್ಟಿ ದೋಷವುಳ್ಳ ವಿಕಲಚೇತನರಿಗೂ ಚಲನಚಿತ್ರಗಳ ಅನುಭವವನ್ನು ನೀಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಮಹತ್ವದ ನಿರ್ಧಾರ ಕೈಗೊಂಡಿದೆ. ಮಾರ್ಚ್ 15 ರಿಂದ ಚಿತ್ರಮಂದಿರಗಳಲ್ಲಿ ಪ್ರದರ್ಶಿತವಾಗುವ ಎಲ್ಲಾ ಚಲನಚಿತ್ರಗಳಲ್ಲಿ ಕಡ್ಡಾಯವಾಗಿ ಎಡಿಸಿ ಮತ್ತು ಕ್ಲೋಸ್ಡ್ ಕ್ಯಾಪ್ಶನ್ ಅಳವಡಿಸಬೇಕು ಎಂದು ಕೇಂದ್ರ ಸರ್ಕಾರ ಸೂಚನೆ ನೀಡಿದೆ.

<u>ಸಂವಾದ ಕಾರ್ಯಕ್ರಮ ಮತ್ತು ಜಾಗೃತಿ:</u> ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಈ ನೂತನ ಮಾರ್ಗಸೂಚಿಗಳ ಕುರಿತು ಚಲನಚಿತ್ರ ರಂಗದ ಗಣ್ಯರಿಗೆ ತಿಳುವಳಿಕೆ ನೀಡಲು ನಗರದಲ್ಲಿ ವಿಶೇಷ ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಪ್ರಾದೇಶಿಕ ಚಲನಚಿತ್ರ ಪ್ರಮಾಣೀಕರಣ ಮಂಡಳಿ ಈ ಕಾರ್ಯಕ್ರಮವನ್ನು ವ್ಯವಸ್ಥೆಗೊಳಿಸಿತ್ತು.

<u>ಪ್ರಮುಖ ಅಂಶಗಳು:</u>

ಎಡಿಸಿ: ದೃಷ್ಟಿ ದೋಷವುಳ್ಳವರಿಗೆ ಚಲನಚಿತ್ರದ ದೃಶ್ಯಗಳನ್ನು ಧ್ವನಿಯ ಮೂಲಕ ವಿವರಿಸುವ ತಂತ್ರಜ್ಞಾನ.

<u>ಕ್ಲೋಸ್ಡ್ ಕ್ಯಾಪ್ಶನ್:</u> ಶ್ರವಣ ದೋಷವುಳ್ಳವರಿಗಾಗಿ ಸಂಭಾಷಣೆ ಮತ್ತು ಶಬ್ದಗಳನ್ನು ಪರದೆಯ ಮೇಲೆ ಅಕ್ಷರ ರೂಪದಲ್ಲಿ ತೋರಿಸುವುದು.



<u>ಅನುಷ್ಠಾನ:</u> ಮಾರ್ಚ್ 15 ರಿಂದ ಪ್ರದರ್ಶನಗೊಳ್ಳುವ ಎಲ್ಲಾ ಚಿತ್ರಗಳಿಗೆ ಈ ಸೌಲಭ್ಯ ಕಡ್ಡಾಯ.

ಪ್ರಾದೇಶಿಕ ಅಧಿಕಾರಿ ಯಶವಂತ ಶಹನಾಯ್ ಘೋಷ್ ಅವರು ಗೋಷ್ಠಿಯನ್ನು ನಡೆಸಿ, ಹೊಸ ನಿಯಮದ ತಾಂತ್ರಿಕ ಮತ್ತು ಕಾನೂನು ಅಂಶಗಳ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಪ್ರಾದೇಶಿಕ ಪ್ರಮಾಣೀಕರಣ ಅಧಿಕಾರಿ ಶ್ರೀ ಯಶ್ ಉಪಸ್ಥಿತರಿದ್ದರು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ, ನಿರ್ಮಾಪಕರ ಸಂಘ ಹಾಗೂ ನಿರ್ದೇಶಕರ ಸಂಘದ ಪ್ರತಿನಿಧಿಗಳು ಪಾಲ್ಗೊಂಡು ಮಾರ್ಗಸೂಚಿಗಳ ಅನುಷ್ಠಾನದ ಕುರಿತು ಚರ್ಚಿಸಿದರು.

ಈ ಕ್ರಮದಿಂದಾಗಿ ಸಮಾಜದ ಎಲ್ಲಾ ವರ್ಗದ ಜನರಿಗೆ, ವಿಶೇಷವಾಗಿ ವಿಕಲಚೇತನರಿಗೆ ಚಲನಚಿತ್ರಗಳು ಇನ್ನಷ್ಟು ಹತ್ತಿರವಾಗಲಿವೆ ಎಂದು ಆಶಿಸಲಾಗಿದೆ.

# ರಸಪ್ರಶ್ನೆ ಸ್ಪರ್ಧೆ: ವಿಜೇತರಿಗೆ 50 ಸಾವಿರ ರೂ. ಬಹುಮಾನ

ಬೆಂಗಳೂರು

ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕು ಆಡಳಿತ, ಪೊಲೀಸ್ ಮತ್ತು ಶಿಕ್ಷಣ ಇಲಾಖೆಗಳ ಸಹಯೋಗದಲ್ಲಿ 'ಡಾ. ಬಿ.ಆರ್. ಅಂಬೇಡ್ಕರ್ ಬದುಕು ಮತ್ತು ಬರಹ' ಕುರಿತಾದ ರಾಜ್ಯ ಮಟ್ಟದ ಮುಕ್ತ ರಸಪ್ರಶ್ನೆ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

<u>ಸ್ಪರ್ಧೆಯ ವಿವರಗಳು:</u>

<u>ದಿನಾಂಕ ಮತ್ತು ಸಮಯ:</u> ಏಪ್ರಿಲ್ 12, 2026 ರಂದು ಬೆಳಿಗ್ಗೆ 9:00 ಗಂಟೆಗೆ.

<u>ಸ್ಥಳ:</u> ಕ್ರೈಸ್ಟ್ ದಿ ಕಿಂಗ್ ಶಾಲೆ, ಕುಷ್ಟಗಿ ಪಟ್ಟಣ, ಕೊಪ್ಪಳ ಜಿಲ್ಲೆ.

<u>ಅರ್ಹತೆ:</u> ಯಾವುದೇ ವಯೋಮಿತಿ ಅಥವಾ ವಿದ್ಯಾರ್ಹತೆಯ ನಿರ್ಬಂಧವಿಲ್ಲ. ರಾಜ್ಯದ ಯಾವುದೇ ಜಿಲ್ಲೆಯ ಆಸಕ್ತರು ಭಾಗವಹಿಸಬಹುದು (ಆಧಾರ್ ಕಾರ್ಡ್ ನಕಲು ಪ್ರತಿ ಕಡ್ಡಾಯ).

<u>ಸ್ಪರ್ಧೆಯ ಹಂತಗಳು:</u>

<u>ಮೊದಲ ಸುತ್ತು:</u> 50 ಅಂಕಗಳ ಬಹು ಆಯ್ಕೆ ಮಾದರಿಯ ಲಿಖಿತ ಪರೀಕ್ಷೆ ನಡೆಯಲಿದೆ.

<u>ಎರಡನೇ ಸುತ್ತು:</u> ಮೊದಲ ಸುತ್ತಿನಲ್ಲಿ ಅತಿ ಹೆಚ್ಚು ಅಂಕ ಗಳಿಸಿದ 12 ಅಭ್ಯರ್ಥಿಗಳನ್ನು 6 ತಂಡಗಳಾಗಿ ವಿಂಗಡಿಸಿ ಮೌಖಿಕ ರಸಪ್ರಶ್ನೆ ನಡೆಸಲಾಗುವುದು.

<u>ಆಕರ್ಷಕ ಬಹುಮಾನಗಳು:</u>

ಪ್ರಥಮ ಬಹುಮಾನ: ರೂ. 50,000/–

ದ್ವಿತೀಯ ಬಹುಮಾನ: ರೂ.30,000/–

ತೃತೀಯ ಬಹುಮಾನ: ರೂ.20,000/–

ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬರಿಗೂ ಪ್ರಮಾಣ ಪತ್ರ ನೀಡಲಾಗುವುದು.

<u>ರಸಪ್ರಶ್ನೆಯ ಪಠ್ಯವಿಷಯ:</u> ಅಂಬೇಡ್ಕರ್ ಅವರ ಜೀವನ, ಶಿಕ್ಷಣ, ರಾಷ್ಟ್ರೀಯ ಹೋರಾಟ, ಸಂವಿಧಾನ ರಚನೆ, ಹೋರಾಟದ ತತ್ವಗಳು, ಮೀಸಲಾತಿ, ಮಹಿಳಾ ಹಕ್ಕುಗಳು ಮತ್ತು ಜಾಗತಿಕ ನಾಯಕರಾಗಿ ಅವರ ಕೊಡುಗೆಗಳ ಕುರಿತು ಪ್ರಶ್ನೆಗಳು ಇರಲಿವೆ.

<u>ನೋಂದಣಿ ಮಾಹಿತಿ:</u> ಆಸಕ್ತರು ಏಪ್ರಿಲ್ 11ರ ಒಳಗಾಗಿ ಈ ಕೆಳಗಿನ ಮೊಬೈಲ್ ಸಂಖ್ಯೆಗಳ ಮೂಲಕ ಹೆಸರು ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿದೆ.

ಎಸ್.ಎಸ್. ತೆಮಿನಾಳ: 97404 21421
ಶ್ರೀನಿವಾಸ ದೇಸಾಯಿ: 98458 08941
ಸುರೇಶ್ ಅಂಕೋಲಿ: 99017 97951
ಅಮರೇಗೌಡ: 99021 80043
ಭರಮಪ್ಪ ಪಿ: 97317 99080

ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಕುಷ್ಟಗಿ ವೃತ್ತದ ಪೊಲೀಸ್ ಇನ್ಸ್‌ಪೆಕ್ಟರ್ ವಿಶ್ವನಾಥ ಹಿರೇಗೌಡರ್ ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಒತ್ತುವರಿ ತೆರವು, ಚರಂಡಿ ನಿರ್ಮಾಣ; ಕಾರೋನೇಷನ್ ರಸ್ತೆಯಲ್ಲಿ ಸಂಚಾರ ಇನ್ನು ಸುಗಮ

ಬಂಗಾರಪೇಟೆ

ಪಟ್ಟಣದ ಹೃದಯಭಾಗದಂತಿರುವ ಕಾರೋನೇಷನ್ ರಸ್ತೆಯ ದಶಕದ ಹಳೆಯ ಸಮಸ್ಯೆಗೆ ಕೊನೆಗೂ ಕಾಲಕೂಡಿ ಬಂದಿದೆ. ಶಾಸಕ ಎಸ್. ಎನ್. ನಾರಾಯಣಸ್ವಾಮಿ ಅವರ ವಿಶೇಷ ಆಸಕ್ತಿಯ ಫಲವಾಗಿ ಸುಮಾರು 1.5 ಕೋಟಿ ರೂಪಾಯಿ ವೆಚ್ಚದಲ್ಲಿ ಈ ರಸ್ತೆಗೆ ಈಗ ಸಂಪೂರ್ಣ "ಶಸ್ತ್ರಚಿಕಿತ್ಸೆ" ನಡೆಯುತ್ತಿದ್ದು, ಸುಸಜ್ಜಿತ ಸಿಮೆಂಟ್ ರಸ್ತೆಯಾಗಿ ಬದಲಾಗುತ್ತಿದೆ.

ಕಳೆದ ಹತ್ತು ವರ್ಷಗಳಿಂದ ಈ ರಸ್ತೆಯು ನಾಗರಿಕರಿಗೆ ದೊಡ್ಡ



ತಲೆನೋವಾಗಿ ಪರಿಣಮಿಸಿತ್ತು. ಮಳೆ ಬಂದರೆ ಕೆಸರು ಗದ್ದೆ, ಬಿಸಿಲಿದ್ದರೆ ಧೂಳಿನ ಮಯವಾಗಿರುತ್ತಿತ್ತು. ಹಳ್ಳ–ಕೊಳ್ಳಗಳಿಂದಾಗಿ ವಾಹನ ಸವಾರರು ಸೊಂಟದ ನೋವು ತಂದುಕೊಳ್ಳುತ್ತಿದ್ದರೆ, ವಾಹನಗಳು ಪದೇ ಪದೇ ಮೆಕಾನಿಕ್ ಶೆಡ್ ಸೇರುತ್ತಿದ್ದವು. ಈ ಎಲ್ಲಾ ಸಂಕಷ್ಟಗಳನ್ನು ಮನಗಂಡ ಶಾಸಕರು ಎಸ್‌ಎಫ್‌ಸಿ ವಿಶೇಷ ಯೋಜನೆಯಡಿ ಅನುದಾನ ಬಿಡುಗಡೆಗೊಳಿಸಿ ಕಾಮಗಾರಿಗೆ ಚಾಲನೆ ನೀಡಿದ್ದಾರೆ.

<u>ಕಾಮಗಾರಿಯ ಮುಖ್ಯಾಂಶಗಳು:</u>

<u>ಒತ್ತುವರಿ ತೆರವು:</u> ಮೊದಲ ಹಂತದಲ್ಲಿ ರಸ್ತೆ ಬದಿಯ ಫುಟ್‌ಪಾತ್ ಒತ್ತುವರಿಗಳನ್ನು ತೆರವುಗೊಳಿಸಿ ಸಂಚಾರಕ್ಕೆ ಹಾದಿ ಸುಗಮಗೊಳಿಸಲಾಗಿದೆ.

<u>ವಿದ್ಯುತ್ ಕಂಬಗಳ ಸ್ಥಳಾಂತರ:</u> ಅಪಾಯಕಾರಿಯಾಗಿದ್ದ ಹಳೆಯ ವಿದ್ಯುತ್ ಕಂಬಗಳನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ.

<u>ಚರಂಡಿ ನವೀಕರಣ:</u> ಮುಚ್ಚಿ ಹೋಗಿದ್ದ ಹಳೆಯ ಚರಂಡಿಗಳನ್ನು



ತೆರವುಗೊಳಿಸಿ, ಹೊಸದಾಗಿ ಬಲಿಷ್ಠ ಚರಂಡಿ ನಿರ್ಮಿಸಲಾಗುತ್ತಿದೆ.

<u>8 ಇಂಚು ದಪ್ಪದ ಸಿಮೆಂಟ್ ರಸ್ತೆ:</u> ಸುದೀರ್ಘ ಕಾಲ ಬಾಳಿಕೆ ಬರುವಂತೆ ಎಂಟು ಇಂಚು ದಪ್ಪದ ಗುಣಮಟ್ಟದ ಕಾಂಕ್ರೀಟ್ ರಸ್ತೆ ನಿರ್ಮಾಣವಾಗುತ್ತಿದೆ.

<u>ಸ್ಥಳದಲ್ಲೇ ಮೊಕ್ಕಾಂ ಹೂಡಿದ ಅಧಿಕಾರಿಗಳು:</u> ಕಾಮಗಾರಿಯ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದೆಂಬ ಶಾಸಕರ ಸೂಚನೆಯಂತೆ ಪೌರಾಯುಕ್ತ ಸತ್ಯನಾರಾಯಣ ಹಾಗೂ ಜೆಇ ರವಿಕುಮಾರ್ ಅವರು ಸ್ಥಳದಲ್ಲೇ ನಿಂತು ತಾಂತ್ರಿಕ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಈ ಸಂದರ್ಭದಲ್ಲಿ ಮಾಜಿ ಪುರಸಭೆ ಸದಸ್ಯ ಸಹೇಲ್ ಉಪಸ್ಥಿತರಿದ್ದರು. ದಶಕಗಳ ಕಾಲ ಗುಂಡಿ ಬಿದ್ದ ರಸ್ತೆಯಲ್ಲಿ ಓಡಾಡಿ ಸುಸ್ತಾಗಿದ್ದ ವ್ಯಾಪಾರಿಗಳು ಮತ್ತು ಸ್ಥಳೀಯ ನಿವಾಸಿಗಳು ಶಾಸಕ ಎಸ್. ಎನ್. ನಾರಾಯಣಸ್ವಾಮಿ ಅವರ ಅಭಿವೃದ್ಧಿ ಕಾರ್ಯಕ್ಕೆ ವ್ಯಾಪಕ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy